24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 141 | ನವದೆಹಲಿ | ಬೆಲೆ ₹10 | ನವಂಬರ್ 18, 2026, ಬುಧವಾರ


ಒಳಪುಟಗಳಲ್ಲಿ



ನ್ಯಾಯಾಂಗ ನಿಂದನೆ: ಮಾಜಿ ಸಿಎಂ ಕೇಜ್ರಿವಾಲ್, ಸಿಸೋಡಿಯಾಗೆ ಫೈಕೋರ್ಟ್ ಗದುವು - ಪು.4

ಮಧುಮೇಹ ನಿಯಂತ್ರಣ ಕುರಿತು ನಾಳೆಯಿಂದ 22ರವರೆಗೆ ಬೆಂಗಳೂರಿನಲ್ಲಿ ಆರ್‌ಎಸ್‌ಎಸ್‌ಡಿಐ ಜಾಗತಿಕ ಸಮ್ಮೇಳನ - ಪು.5

ಜಾಗತಿಕ ಸವಾಲುಗಳಿಗೆ ಸಹಕಾರದಿಂದಲೇ ಪರಿಹಾರ: ಪ್ರಧಾನಿ ಮೋದಿ



ನವದೆಹಲಿ, ನ.17: ಜಗತ್ತು ಹಲವು ಸವಾಲುಗಳು ಮತ್ತು ಬಿಕ್ಕಟ್ಟುಗಳನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ಶಾಂತಿ, ಸ್ಥಿರತೆ ಹಾಗೂ ಪರಸ್ಪರ ವಿಶ್ವಾಸಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಸ್ಪರ್ಧೆಗಿಂತ ಸಹಕಾರದ ಮೂಲಕ ಭವಿಷ್ಯವನ್ನು ರೂಪಿಸುವ ಅಗತ್ಯವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

ಫಿಲಿಪ್ಪೀನ್ಸ್‌ನ ಮನಿಲಾದಲ್ಲಿ ನಡೆದ 23ನೇ ಆಸಿಯಾನ್–ಭಾರತ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತ ಮತ್ತು ಆಸಿಯಾನ್ ರಾಷ್ಟ್ರಗಳ ನಡುವಿನ ಬಲವಾದ ಸಹಕಾರದ ಮಹತ್ವವನ್ನು ವಿವರಿಸಿದರು. ಜಾಗತಿಕ ಜನಸಂಖ್ಯೆಯ ನಾಲ್ಕನೇ ಒಂದು ಭಾಗವನ್ನು ಭಾರತ ಮತ್ತು ಆಸಿಯಾನ್ ರಾಷ್ಟ್ರಗಳು ಪ್ರತಿನಿಧಿಸುತ್ತವೆ. ಹೀಗಾಗಿ ಎರಡೂ ಕಡೆಯ ಸಹಕಾರವು ಜಾಗತಿಕ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಲಿದೆ ಎಂದು ಹೇಳಿದರು.

ಆಸಿಯಾನ್-ಭಾರತ ಶೃಂಗಸಭೆಯಲ್ಲಿ ಪ್ರಧಾನಿ ಪ್ರತಿಪಾದನೆ

ಕಳೆದ 12 ವರ್ಷಗಳಲ್ಲಿ ಭಾರತದ 'ಆಕ್ಟ್ ಈಸ್ಟ್' ನೀತಿಯ ಮೂಲಕ ಆಸಿಯಾನ್ ರಾಷ್ಟ್ರಗಳೊಂದಿಗಿನ ಸಂಬಂಧ ಮತ್ತಷ್ಟು ಬಲಗೊಂಡಿದೆ. ವ್ಯಾಪಾರ, ಡಿಜಿಟಲ್ ತಂತ್ರಜ್ಞಾನ, ರಕ್ಷಣೆ, ಬಾಹ್ಯಾಕಾಶ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಹಕಾರ ವಿಸ್ತರಣೆಯಾಗಿದೆ. ಜನರ ನಡುವಿನ ಸಂಪರ್ಕ ಹೆಚ್ಚಿಸಲು ಹಲವು ಉಪಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಆಸಿಯಾನ್ ಸಮುದಾಯದ 2045ರ ದೂರದೃಷ್ಟಿ ಮತ್ತು ವಿಕಸಿತ ಭಾರತ 2047ರ ಗುರಿಗಳು ಪರಸ್ಪರ ಪೂರಕವಾಗಿವೆ. ಎರಡೂ ಕಡೆಯ ಪಾಲುದಾರಿಕೆಯು ಮುಂದಿನ ದಿನಗಳಲ್ಲಿ ಮತ್ತಷ್ಟು ಬಲಗೊಳ್ಳಲಿದೆ. ಸುರಕ್ಷಿತ, ಸಮಗ್ರ ಹಾಗೂ ಸಮೃದ್ಧ ಹಿಂದೂ ಮಹಾಸಾಗರ–ಪೆಸಿಫಿಕ್ ಪ್ರದೇಶ ನಿರ್ಮಾಣಕ್ಕೆ ಭಾರತ ಬದ್ಧವಾಗಿದೆ ಎಂದು ಮೋದಿ ಹೇಳಿದರು.

ಇದೇ ಸಂದರ್ಭದಲ್ಲಿ ಮನಿಲಾದ ಐತಿಹಾಸಿಕ ಖಾಲ್ಸಾ ದಿವಾನ್ ಗುರುದ್ವಾರಕ್ಕೆ ಭೇಟಿನೀಡಿ ಪ್ರಾರ್ಥನೆ ಸಲ್ಲಿಸಿದರು. ಗುರುದ್ವಾರದ ಪುನರಾಭಿವೃದ್ಧಿ ಕಾಮಗಾರಿಯ ಶಂಕುಸ್ಥಾಪನಾ ಕಾರ್ಯಕ್ರಮದಲ್ಲೂ ಭಾಗವಹಿಸಿ ಸಿಖ್ ಸಮುದಾಯದ ಮುಖಂಡರನ್ನು ಪ್ರಧಾನಿ ಮೋದಿ ಭೇಟಿಯಾದರು.


ಪಂಚಾಯತ್‌ನಿಂದ ಸಂಸತ್‌ವರೆಗೆ ಮಹಿಳಾ ಪ್ರಾತಿನಿಧ್ಯ

ಶೀಘ್ರದಲ್ಲೇ ಶಾಸನಸಭೆಗಳಲ್ಲಿ ಶೇ.33ರಷ್ಟು ಮಹಿಳಾ ಮೀಸಲಾತಿ ಜಾರಿ: ಲೋಕಸಭಾ ಸ್ಪೀಕರ್ ಓಂ ಬಿರ್ಲಾ

ಬೆಂಗಳೂರು, ನ.17: 12ನೇ ಶತಮಾನದಲ್ಲೇ, ಕರ್ನಾಟಕದ ಅನುಭವ ಮಂಟಪದಲ್ಲಿ, ಮಹಿಳಾ ಸಮಾನತೆ ಬಗ್ಗೆ ಚರ್ಚೆ ನಡೆಸಿ, ಮಹಿಳೆಯರಿಗೆ ಅವಕಾಶ ನೀಡಲಾಗಿತ್ತು. ಈಗಾಗಲೇ ಪಂಚಾಯತಿಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಇದೆ. ಅತೀ ಶೀಘ್ರದಲ್ಲೇ, ವಿಧಾನಸಭೆ ಮತ್ತು ಲೋಕಸಭೆಯಲ್ಲೂ, ಶೇ.33ರಷ್ಟು ಮಹಿಳಾ ಮೀಸಲಾತಿ ಜಾರಿಯಾಗಲಿದ್ದು, ಪಂಚಾಯಿತಿಯಿಂದ, ಸಂಸತ್‌ವರೆಗೂ, ಮಹಿಳೆಯರಿಗೆ ಪ್ರಾತಿನಿಧ್ಯ ಸಿಕ್ಕಂತಾಗಲಿದೆ ಎಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಹೇಳಿದ್ದಾರೆ.

ಕಾಮನ್‌ವೆಲ್ತ್ ಮಹಿಳಾ ಸಂಸದೀಯ ಪಟುಗಳ, ಭಾರತ ಪ್ರಾದೇಶಿಕ ವಿಭಾಗದ ಮೊದಲ ಸಮ್ಮೇಳನವನ್ನು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರೊಂದಿಗೆ ಉದ್ಘಾಟಿಸಿ ಮಾತನಾಡಿದ ಓಂ ಬಿರ್ಲಾ, ಮಹಿಳೆಯರ ಸಕ್ರಿಯ ಸಹಭಾಗಿತ್ವದಿಂದ, ದೇಶದ ಪ್ರಜಾಪ್ರಭುತ್ವ ಮತ್ತಷ್ಟು ಬಲಗೊಳ್ಳಲಿದೆ. ಸ್ವಾತಂತ್ರ್ಯ ಹೋರಾಟ ದಿಂದ ಹಿಡಿದು, ಇಂದಿನ ಸೇನೆ, ಅಂತರಿಕ್ಷ ಹಾಗೂ ದೇಶದ ಗಡಿ ಕಾಯುವವರೆಗೂ, ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದಾರೆ. ಪಂಚಾಯತಿಗಳಲ್ಲೂ, ಎಐ ತಂತ್ರಜ್ಞಾನ ಬಳಕೆಯಾಗಬೇಕು ಮತ್ತು ಮಹಿಳಾ ಪ್ರತಿನಿಧಿಗಳು, ಡಿಜಿಟಲ್ ಸಶಕ್ತರಾಗಿಬೇಕು. ಈ ಸಮ್ಮೇಳನ, ಮಹಿಳಾ ಸಬಲೀಕರಣಕ್ಕೆ ಹೊಸ ಆಯಾಮ ನೀಡಲಿದೆ ಎಂದು ಅಭಿಪ್ರಾಯಪಟ್ಟರು.

12ನೇ ಶತಮಾನದಲ್ಲಿ ಕರ್ನಾಟಕದ ಜಗಜ್ಯೋತಿ ಬಸವೇಶ್ವರರ ನೇತೃತ್ವದಲ್ಲಿ ರೂಪುಗೊಂಡ ಅನುಭವ ಮಂಟಪವು ಸಮಾನತೆ ಮತ್ತು ವಿಚಾರ ವಿನಿಮಯಕ್ಕೆ ಅವಕಾಶ ಕಲ್ಪಿಸಿದ ಮಹತ್ವದ ಆರಂಭಿಕ ಪ್ರಜಾಸತ್ತಾತ್ಮಕ ವೇದಿಕೆಯಾಗಿದೆ. ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಝಾನ್ಸಿರಾಣಿ ಲಕ್ಷ್ಮೀಬಾಯಿ ಅವರಂತಹ ಧೀರ ಮಹಿಳೆಯರು ದೇಶದ ಇತಿಹಾಸದಲ್ಲಿ ಅಪ್ರತಿಮ ನಾಯಕತ್ವ ಪ್ರದರ್ಶಿಸಿದ್ದಾರೆ ಎಂದು ಸ್ಮರಿಸಿದರು. ಇಂದು ಶಿಕ್ಷಣ, ವಿಜ್ಞಾನ, ತಂತ್ರಜ್ಞಾನ, ರಕ್ಷಣೆ ಮತ್ತು ಬಾಹ್ಯಾಕಾಶ ಸಂಶೋಧನೆ ಸೇರಿದಂತೆ ಎಲ್ಲ ಕ್ಷೇತ್ರದಲ್ಲೂ ಮಹಿಳೆಯರು ಮುಂಚೂಣಿಯಲ್ಲಿದ್ದಾರೆ. ನಾರಿಶಕ್ತಿ ವಂದನ್ ಅಧಿನಿಯಮ–2023 ಮಹಿಳೆಯರ ರಾಜಕೀಯ ಸಬಲೀಕರಣದಲ್ಲಿ ಐತಿಹಾಸಿಕ ಹೆಜ್ಜೆಯಾಗಿದ್ದು, ಅದರ ಅನುಷ್ಠಾನದಿಂದ ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರ ಪಾತ್ರ ಮತ್ತಷ್ಟು ಬಲಗೊಳ್ಳಲಿದೆ ಎಂದು ಸ್ಪೀಕರ್ ವಿಶ್ವಾಸ ವ್ಯಕ್ತಪಡಿಸಿದರು. ...3ನೇ ಪುಟಕ್ಕೆ



ಮಹಿಳಾ ಮೀಸಲು ಮಸೂದೆಗೆ ಸಂಸತ್ ಅಂಗೀಕಾರ ನಿರೀಕ್ಷೆ: ಸಿಎಂ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಐತಿಹಾಸಿಕ ಮಹಿಳಾ ಮೀಸಲು ವಿಧೇಯಕ ಡಿಸೆಂಬರ್‌ನ ಸಂಸತ್ತಿನ ಚಳಿಗಾಲದ ಅಧಿವೇಶನ ಅಂಗೀಕಾರವಾಗುವ ನಿರೀಕ್ಷೆಯಲ್ಲಿದ್ದೇವೆ. ಈ ಮೀಸಲಾತಿಯಿಂದಾಗಿ ನಾವು ಎಷ್ಟು ಜನರು ಸಂಸತ್ ಹಾಗೂ ವಿಧಾನಸೌಧದಿಂದ ಹೊರಬರಬೇಕಾಗುವುದೋ ತಿಳಿಯದು. ಆದರೆ ಶೇ.50ರಷ್ಟು ಹೆಚ್ಚುವರಿ ಕ್ಷೇತ್ರಗಳ ಬಗ್ಗೆ ಹೇಳಲಾಗುತ್ತಿದೆ. ಯಾವ ಕ್ಷೇತ್ರಗಳಲ್ಲಿ ಮೀಸಲಾತಿ ಬರುವುದು ಎಂದು ತಿಳಿದಿಲ್ಲ ಎಂದು ಹೇಳಿದರು. ಮಹಿಳಾ ಮೀಸಲಾತಿಯಿಂದ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಾಕಷ್ಟು ಬದಲಾವಣೆ ಆಗಲಿದೆ. ಮಹಿಳೆಯರನ್ನು ಗೌರವಿಸುವುದು ನಮ್ಮ ಕರ್ತವ್ಯ. ಮಹಿಳೆಯರ ಬೆಂಬಲವಿಲ್ಲದೆ ಪುರುಷರು ಯಶಸ್ವಿಯಾಗಲು ಸಾಧ್ಯವಿಲ್ಲ. ಇದು ನಮ್ಮ ಪ್ರಗತಿ ಪರ ಸಮಾಜದ ತಳಪಾಯವೂ ಹೌದು ಎಂದು ಅಭಿಪ್ರಾಯಪಟ್ಟರು.

ಮಹಿಳೆಯರು ಕೇವಲ ಹುದ್ದೆಗಳನ್ನು ಅಲಂಕರಿಸುವುದಷ್ಟೇ ಅಲ್ಲ, ತೀರ್ಮಾನಗಳಲ್ಲಿ ತಮ್ಮ ಅಭಿಪ್ರಾಯ ಮಂಡಿಸಬೇಕು. ಶಾಸನ ರೂಪಿಸುವಲ್ಲಿ ಕೊಡುಗೆ ನೀಡಬೇಕು. ಆಡಳಿತಕ್ಕೆ ಹೊಸ ದಿಶೆಯನ್ನು ನೀಡಬೇಕು. ರಾಜೀವ್ ಗಾಂಧಿಯವರು 1988–89ರ ಅವಧಿಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಶೇ.50ರ ಮೀಸಲಾತಿ ಜಾರಿಗೆ ತಂದರು. ನಂತರ ಎಲ್ಲ ಸ್ಥಳೀಯಾಡಳಿತ ಸಂಸ್ಥೆಗಳಲ್ಲಿಯೂ ಮೀಸಲಾತಿ ಜಾರಿಯಾಯಿತು. ಈ ಅವಕಾಶವನ್ನು ಮಹಿಳೆಯರು ಸದುಪಯೋಗಪಡಿಸಿಕೊಳ್ಳಬೇಕು. ಮಹಿಳೆಯರು ಆಯ್ಕೆಯಾದ ನಂತರ ಅವರ ಪತಿ ಅಥವಾ ಪುತ್ರ ಅಧಿಕಾರ ಚಲಾಯಿಸಬಾರದು ಎಂದು ಸಿಎಂ ತಿಳಿಸಿದರು.

ಮಹಿಳೆಯರಿಲ್ಲದ ಪ್ರಜಾಪ್ರಭುತ್ವ ರೆಕ್ಕೆಯಿಲ್ಲದ ಹಕ್ಕಿಯಂತೆ

ಸಾಮಾಜಿಕ ಅರ್ಥಿಕ ಪರಿಸ್ಥಿತಿ ಜೊತೆಗೆ ಮಹಿಳೆಯರ ರಾಜಕೀಯ ಸಬಲೀಕರಣವೂ ಆಗಬೇಕಿದೆ ಎಂಬುದು ನಮ್ಮ ನಂಬಿಕೆ. ಮಹಿಳೆಯರಿಲ್ಲದ ಪ್ರಜಾಪ್ರಭುತ್ವ ರೆಕ್ಕೆಯಿಲ್ಲದ ಹಕ್ಕಿಯಂತೆ. ಎತ್ತರಕ್ಕೇರಲು ಸಾಧ್ಯವಿಲ್ಲ. ನೀವೆಲ್ಲರೂ ಒಂದಾಗಿ ಈ ಸಮ್ಮೇಳನದಲ್ಲಿ ನಡೆಸುವ ಚರ್ಚೆ ಹೊಸಬೆಳಕನ್ನು ಮೂಡಿಸಬೇಕು. ಸಂಸತ್ತು, ಶಾಸನ ಸಭೆಗಳಲ್ಲಿ ಭವಿಷ್ಯಕ್ಕಾಗಿ ನೀವು ಇನ್ನಷ್ಟು ಸದೃಢರಾಗಿಬೇಕು ಎಂದು ಡಿ.ಕೆ.ಶಿವಕುಮಾರ್ ಕರೆ ನೀಡಿದರು.

S.R PATIL MEDICAL COLLEGE, HOSPITAL & RESEARCH CENTER, BADAGANDI

NABH ACCREDITED



FIRST BATCH OF POSTGRADUATE (MD/MS)

ADMISSIONS OPEN FOR 2026 - 27

M.N Patil
Secretary

OUR POSTGRADUATE DEPARTMENTS

- M.D. Anatomy
- M.D. Physiology
- M.D. Bio-Chemistry
- M.D. Pharmacology
- M.D. Microbiology
- M.D. Community Medicine
- M.D. Radiology
- M.D. Dermatology
- M.S. Obstetrics & Gynaecology
- M.D. General Medicine
- M.S. General Surgery

INDIA'S EMERGING RURAL MEDICAL CENTRE

MBBS — S.R. Patil Medical College & Hospital
Ayurvedic — Smt. Shantadevi Memorial Ayurvedic Medical College & Hospital
Physiotherapy — S.R. Patil College of Physiotherapy
Allied Health Science — S.R. Patil College of Allied Health Science
Nursing — S.R. Patil Nursing College
Nursing — Smt. Shantadevi Memorial Nursing College



Shri S.R Patil
Founder President (Ex Minister)

All Admission through KEA only

Other Institutions

EDUCATION
- S.R Patil School of Law
- S.R Patil College of Agricultural Science & Research Institute
- S.R Patil College of Horticultural Science & Research Institute
- Bapuji Independent PU Science & Commerce College
- Bapuji International CBSE School


BANKING
- Bilagi Pattan Sahakari Bank, Bilagi
- Bapuji Multistate Credit Co-operative Society Ltd., Bagalkot
- Bapuji Multipurpose Souharda Sahakari Sangha Ltd., Badagandi

INDUSTRY
- Bilagi Sugar Mill Ltd., Badagandi
- Bilagi Sugar Mill Unit-2., Mudhol

Shri S.R Patil
Founder President of All The Above Institutions

For Admission Enquiries 92066 66026 | Badagandi, Tq: Bilagi, Dist: Bagalkot - 587116

ನಿತ್ಯ ಪಂಚಾಂಗ 18.11.2026 ಬುಧವಾರ



ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು/ ಚಾಂದ್ರಮಾನ ಆಶ್ವಯುಜ-ಕಾರ್ತಿಕ ಮಾಸ

ಕಾರ್ತಿಕ ಶುದ್ಧ, ದಶಮಿ, ಶತಭಿಷ ನಕ್ಷತ್ರ, ಕೃತಯುಗಾದಿ, ಕೂಷ್ಮಾಂಡ ನವಮಿ, ಚಿಕಲಪರ್ವಿ ವಿಜಯದಾಸ ಪುಣ್ಯದಿನ, ವಿಶ್ವ ವಯಸ್ಕರ ದಿನ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ಮಲ್ಲಿಕಾರ್ಜುನ ಖರ್ಗೆ, ವೇಣುಗೋಪಾಲ್, ಸುರ್ಜೆವಾಲ ಭೇಟಿಯಾದ ಜಮೀರ್

ನವದೆಹಲಿ, ನ.17: ದಾವಣಗೆರೆ ಉಪಚುನಾವಣೆ ಸಮಯದಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಅವರದ್ದು ಎನ್ನಲಾದ ಆಡಿಯೋ ವೈರಲ್ ಆಗಿ ರಾಜಕೀಯ ವಲಯದಲ್ಲಿ ಸಂಚಲನ ಸೃಷ್ಟಿಸಿ ಅವರ ವರ್ಚಸ್ಸಿಗೆ ಭಾರಿ ಧಕ್ಕೆ ಉಂಟುಮಾಡಿತ್ತು. ಇದಾದ ಮೇಲೆ ದೆಹಲಿಯಿಂದ ಅಂತರ ಕಾಯ್ದುಕೊಂಡಿದ್ದ ಜಮೀರ್ ಮತ್ತೆ ಸಕ್ರಿಯರಾಗಿದ್ದಾರೆ. ಸಚಿವ ಜಮೀರ್ ಅಹ್ಮದ್ ಖಾನ್ ಮತ್ತೆ ಈಗ ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ಮಾತುಕತೆ ನಡೆಸುವ ಮೂಲಕ ವರಿಷ್ಠರ ವಿಶ್ವಾಸ ಗಳಿಸುವ ಪ್ರಯತ್ನಕ್ಕೆ ಮುಂದಾಗಿದ್ದಾರೆ. ಸೋನಿಯಾ ಗಾಂಧಿ ಅವರ ಆತ್ಮಕಥೆಯ ಪುಸ್ತಕವನ್ನು ನೀಡುವ ನೆಪದಲ್ಲಿ ಹೈಕಮಾಂಡ್





ನಾಯಕರನ್ನು ಭೇಟಿಯಾಗುತ್ತಿರುವ ಜಮೀರ್, ನಾಯಕರೊಂದಿಗೆ ಸೌಹಾರ್ದಯುತ ಮಾತುಕತೆ ನಡೆಸಿದ್ದಾರೆ. ಸೋಮವಾರ ಕಾಂಗ್ರೆಸ್ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಹಾಗೂ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದಾರೆ. ಮಂಗಳವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿದ್ದಾರೆ. ಸರಣಿ ಭೇಟಿಗಳ ಮೂಲಕ ಪಕ್ಷದ ವರಿಷ್ಠರೊಂದಿಗೆ ಉತ್ತಮ ಬಾಂಧವ್ಯ ಮುಂದುವರಿಸುವ ಪ್ರಯತ್ನವನ್ನು ಜಮೀರ್ ಮಾಡುತ್ತಿದ್ದಾರೆ. ಸಿದ್ದರಾಮಯ್ಯ ಅವರನ್ನು ಭೇಟಿಯಾದ ಬೆನ್ನಲ್ಲೇ ಸಚಿವ ಜಮೀರ್ ಅಹ್ಮದ್ ಅವರು ಮತ್ತೊಂದು ಮಹತ್ವದ ಭೇಟಿ ನಡೆಸಿದ್ದಾರೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರನ್ನು ಜಮೀರ್ ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಸಂಪುಟ ಪುನಾರಚನೆ ಚರ್ಚೆಯ ನಡುವೆ ಜಮೀರ್ ಅವರ ಈ ದಿಢೀರ್ ಭೇಟಿ ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ.ಸಿದ್ದರಾಮಯ್ಯ ಆಪ್ತವಲಯದಲ್ಲಿ ಗುರುತಿಸಿಕೊಂಡಿರುವ ಜಮೀರ್ ಅವರಿಗೆ ಸಚಿವ ಸ್ಥಾನಕ್ಕೆ ಕುತ್ತು ಬರುವ ಆತಂಕ ಎದುರಾಗಿದೆಯೇ ಎಂಬ ಚರ್ಚೆ ಶುರುವಾಗಿದೆ. ಸಂಪುಟದಿಂದ ಕೈಬಿಡುವ ಭೀತಿಯಿಂದ ಹೈಕಮಾಂಡ್ ನಾಯಕರ ಅಭಯ ಪಡೆಯಲು ಜಮೀರ್ ದೆಹಲಿಯಲ್ಲಿ ಕಸರತ್ತು ನಡೆಸುತ್ತಿದ್ದಾರೆಯೇ ಎಂಬ ಪ್ರಶ್ನೆ ಎದ್ದಿದೆ. ಆಡಿಯೋ ವಿವಾದದ ಬಳಿಕ ವರಿಷ್ಠರ ವಿಶ್ವಾಸವನ್ನು ಮರಳಿ ಗಳಿಸುವ ಉದ್ದೇಶದಿಂದಲೇ ಈ ಭೇಟಿಗಳು ನಡೆಯುತ್ತಿವೆಯೇ ಎಂಬ ಚರ್ಚೆಯೂ ಕಾಂಗ್ರೆಸ್ ವಲಯದಲ್ಲಿ ಕೇಳಿ ಬರುತ್ತಿದ್ದು, ಮತ್ತೆ ಅಲ್ಪಸಂಖ್ಯಾತರ ರಾಜಕೀಯದಲ್ಲಿ ಮುನ್ನೆಲೆಗೆ ಬರಲು ತಂತ್ರಗಾರಿಕೆ ನಡೆಸುತ್ತಿದ್ದಾರೆ ಎನ್ನಲಾಗಿದೆ.

ಸೋನಿಯಾ ಗಾಂಧಿ ಕೇವಲ ಕಾಂಗ್ರೆಸ್ ನಾಯಕಿಯಲ್ಲ, ಪ್ರಜಾಪ್ರಭುತ್ವ, ದುರ್ಬಲ ವರ್ಗಗಳ ಹಿತಕ್ಕಾಗಿ ಬದುಕನ್ನೇ ಮುಡಿಪಾಗಿಟ್ಟ ತ್ಯಾಗಮೂರ್ತಿ: ಬಿ.ಕೆ.ಹರಿಪ್ರಸಾದ್

ಬೆಂಗಳೂರು, ನ.17: ಸೋನಿಯಾ ಗಾಂಧಿ ಅವರು ಕೇವಲ ಕಾಂಗ್ರೆಸ್ ಪಕ್ಷದ ನಾಯಕಿಯಲ್ಲ. ಈ ದೇಶದ ಏಕತೆ, ಸಮಗ್ರತೆ, ಪ್ರಜಾಪ್ರಭುತ್ವ, ಬಡವರು, ಮಹಿಳೆಯರು ಹಾಗೂ ಸಮಾಜದ ದುರ್ಬಲ ವರ್ಗಗಳ ಹಕ್ಕುಗಳ ರಕ್ಷಣೆಗಾಗಿ ತಮ್ಮ ಸಾರ್ವಜನಿಕ ಜೀವನವನ್ನೇ ಮುಡಿಪಾಗಿಟ್ಟ ಮಹಾನ್ ನಾಯಕಿ. ಅಧಿಕಾರಕ್ಕಿಂತ ದೇಶದ ಹಿತವೇ ಮುಖ್ಯ ಎಂಬುದನ್ನು ತಮ್ಮ ನಡೆನುಡಿಗಳ ಮೂಲಕ ಸಾಬೀತುಪಡಿಸಿದ ತ್ಯಾಗಮೂರ್ತಿ" ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಬಣ್ಣಿಸಿದರು.

ಇಂದು ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಅವರ ಆತ್ಮಕಥನ 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಸೋನಿಯಾ ಗಾಂಧಿ ಅವರೊಂದಿಗೆ ಸುಮಾರು ಎರಡು ದಶಕಗಳ ಕಾಲ ನಿಕಟವಾಗಿ ಕೆಲಸ ಮಾಡಿದ ಸಂದರ್ಭಗಳು, ಪಕ್ಷ ಸಂಘಟನೆಯಲ್ಲಿ ಅವರ ಪಾತ್ರ, ಮಾನವೀಯ ಕಾಳಜಿ ಹಾಗೂ ರಾಜಕೀಯ ತ್ಯಾಗದ ಅಪರೂಪದ ಘಟನೆಗಳನ್ನು ಭಾವುಕವಾಗಿ ಸ್ಮರಿಸಿದರು.

1996, 1998 ಹಾಗೂ 1999ರ ಲೋಕಸಭಾ ಚುನಾವಣೆಗಳ ಕಾಲಘಟ್ಟದಲ್ಲಿ ಕಾಂಗ್ರೆಸ್ ಪಕ್ಷ ಅತ್ಯಂತ ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿತ್ತು. ಪಕ್ಷದೊಳಗೆ ವಿಭಜನೆಗಳು ಉಂಟಾಗಿ, ಕಾಂಗ್ರೆಸ್ ಭವಿಷ್ಯದ ಬಗ್ಗೆಯೇ ಆತಂಕ ವ್ಯಕ್ತವಾಗುತ್ತಿದ್ದ ಸಂದರ್ಭದಲ್ಲಿ ಸೋನಿಯಾ ಗಾಂಧಿ ಅವರು ನಾಯಕತ್ವ ವಹಿಸಿಕೊಳ್ಳಬೇಕೆಂದು ಪಕ್ಷದ ಹಿರಿಯರು ಹಾಗೂ ಪದಾಧಿಕಾರಿಗಳು ಮನವಿ ಮಾಡಿದ್ದರು. "ಆ ಸಂದರ್ಭದಲ್ಲಿ ನಾನು ಕೂಡ ಎಐಸಿಸಿ ಪದಾಧಿಕಾರಿಯಾಗಿದ್ದೆ. ಪಕ್ಷವನ್ನು ಉಳಿಸಬೇಕಾದರೆ ಸೋನಿಯಾ ಗಾಂಧಿ ಅವರು ನಾಯಕತ್ವ ವಹಿಸಿಕೊಳ್ಳುವುದು ಅನಿವಾರ್ಯ ಎಂಬುದು ನಮ್ಮೆಲ್ಲರ ಅಭಿಪ್ರಾಯವಾಗಿತ್ತು. ನಮ್ಮ ಮನವಿಗೆ ಸ್ಪಂದಿಸಿ 1998ರ ಮಾರ್ಚ್‌ನಲ್ಲಿ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ಜವಾಬ್ದಾರಿ ವಹಿಸಿಕೊಂಡರು. ಅಲ್ಲಿಂದ ಆರಂಭವಾದ ಅವರ ರಾಜಕೀಯ ಪಯಣ ಕಾಂಗ್ರೆಸ್ ಇತಿಹಾಸದಲ್ಲಿ ಹೊಸ ಅಧ್ಯಾಯವನ್ನೇ ಸೃಷ್ಟಿಸಿತು" ಎಂದು ಸ್ಮರಿಸಿದರು.



ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ವೀರಪ್ಪ ಮೋಯ್ಲಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಪಿ.ವಿ.ಮೋಹನ್, ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪನ್, ಹಿರಿಯ ಸಚಿವರುಗಳಾದ ಕೆ.ಎಚ್ ಮುನಿಯಪ್ಪ, ಕೆ.ಜೆ.ಜಾರ್ಜ್, ರಾಮಲಿಂಗಾರೆಡ್ಡಿ, ಈಶ್ವರ್ ಖಂಡ್ರೆ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಕಾಂಗ್ರೆಸ್ ಪಕ್ಷದ ಸುದೀರ್ಘ ಇತಿಹಾಸದಲ್ಲಿ ಎರಡು ದಶಕಗಳ ಕಾಲ ಅಧ್ಯಕ್ಷರಾಗಿ ಪಕ್ಷವನ್ನು ಮುನ್ನಡೆಸಿದ ಅಪರೂಪದ ನಾಯಕಿ ಸೋನಿಯಾ ಗಾಂಧಿ. ಅನೇಕ ರಾಜಕೀಯ ಸವಾಲುಗಳು, ಸೋಲುಗಳು, ಟೀಕೆಗಳು ಮತ್ತು ವೈಯಕ್ತಿಕ ದಾಳಿಗಳನ್ನು ಎದುರಿಸಿದರೂ ಪಕ್ಷದ ಸಿದ್ಧಾಂತ ಹಾಗೂ ಜಾತ್ಯತೀತ ಮೌಲ್ಯಗಳ ವಿಚಾರದಲ್ಲಿ ಅವರು ಎಂದಿಗೂ ರಾಜಿ ಮಾಡಿಕೊಂಡಿಲ್ಲ ಎಂದು ಹೇಳಿದರು.

"ನನ್ನ ಐವತ್ತು ವರ್ಷಗಳ ರಾಜಕೀಯ ಜೀವನದಲ್ಲಿ ಸೋನಿಯಾ ಗಾಂಧಿ ಅವರೊಂದಿಗೆ 18ರಿಂದ 20 ವರ್ಷಗಳ ಕಾಲ ಅತ್ಯಂತ ನಿಕಟವಾಗಿ ಕೆಲಸ ಮಾಡುವ ಅವಕಾಶ ನನಗೆ ದೊರೆತಿದೆ. ಅವರೊಂದಿಗೆ ದೇಶದ ವಿವಿಧ ರಾಜ್ಯಗಳಲ್ಲಿ ಪ್ರವಾಸ ಮಾಡಿದ್ದೇನೆ. ಪಕ್ಷ ಸಂಘಟನೆ, ಚುನಾವಣೆಗಳು, ರೈತರ ಸಮಸ್ಯೆಗಳು, ಆದಿವಾಸಿಗಳ ಹಕ್ಕುಗಳು ಹಾಗೂ ಸಾಮಾನ್ಯ ಜನರ ಸಂಕಷ್ಟಗಳಿಗೆ ಅವರು ಸ್ಪಂದಿಸುವ ರೀತಿಯನ್ನು ಹತ್ತಿರದಿಂದ ನೋಡಿದ್ದೇನೆ" ಎಂದು ಹರಿಪ್ರಸಾದ್ ಹೇಳಿದರು.

ಸೋನಿಯಾ ಗಾಂಧಿ ಅವರ ರಾಜಕೀಯ ಬದುಕೇ ಒಂದು ಪಾಠಶಾಲೆ

"ಇಂದಿರಾ ಗಾಂಧಿ ಅವರಿಗೆ ಪಂಡಿತ್ ಜವಾಹರಲಾಲ್ ನೆಹರು ಹಾಗೂ ಮೋತಿಲಾಲ್ ನೆಹರು ಅವರ ರಾಜಕೀಯ ಪರಂಪರೆಯ ಹಿನ್ನೆಲೆ ಇತ್ತು. ಆದರೆ ಸೋನಿಯಾ ಗಾಂಧಿ ಅವರು ಇಟಲಿಯಲ್ಲಿ ಜನಿಸಿ, ರಾಜೀವ್ ಗಾಂಧಿ ಅವರನ್ನು ಪ್ರೀತಿಸಿ ವಿವಾಹವಾಗಿ ಭಾರತಕ್ಕೆ ಬಂದವರು. ಭಾರತದ ಇತಿಹಾಸ, ಸಂಸ್ಕೃತಿ, ಪರಂಪರೆ ಹಾಗೂ ಇಲ್ಲಿನ ಜನಜೀವನವನ್ನು ಅರ್ಥಮಾಡಿಕೊಂಡು, ಈ ದೇಶದ ಜನರೊಂದಿಗೆ ಬೆರೆತು, ಅತ್ಯಂತ ಪ್ರಭಾವಶಾಲಿ ರಾಜಕೀಯ ನಾಯಕಿಯಾಗಿ ಬೆಳೆದ ಅವರ ಪಯಣ ಅಸಾಧಾರಣವಾದದ್ದು. ಒಬ್ಬ ಪತ್ನಿಯಾಗಿ, ಸೊಸೆಯಾಗಿ, ತಾಯಿಯಾಗಿ ಹಾಗೂ ಸಾರ್ವಜನಿಕ ಜೀವನದ ನಾಯಕಿಯಾಗಿ ಅವರು ತೋರಿದ ಬದ್ಧತೆ, ತಾಳ್ಮೆ, ಸಹನೆ, ಗೌರವ ಮತ್ತು ಮಾನವೀಯತೆ ಪ್ರತಿಯೊಬ್ಬರೂ ಕಲಿಯಬೇಕಾದ ಗುಣಗಳು" ಎಂದು ಹರಿಪ್ರಸಾದ್ ಹೇಳಿದರು.

ಕಾಂಗ್ರೆಸ್ ಪಕ್ಷವನ್ನು ಉಳಿಸುವುದೇ ಸೋನಿಯಾ ಗಾಂಧಿ ಅವರಿಗೆ ಸಲ್ಲಿಸುವ ನಿಜವಾದ ಗೌರವ

ಕಾಂಗ್ರೆಸ್ ಪಕ್ಷ ಸಂಕಷ್ಟದಲ್ಲಿದ್ದಾಗ ಅದನ್ನು ಉಳಿಸಿ, ದೇಶದಲ್ಲಿ ಸದೃಢವಾಗಿ ನಿಲ್ಲುವಂತೆ ಮಾಡಿದ ಸೋನಿಯಾ ಗಾಂಧಿ ಅವರ ಕೊಡುಗೆಯನ್ನು ಯಾವ ಕಾಂಗ್ರೆಸ್ ಕಾರ್ಯಕರ್ತರೂ ಮರೆಯಬಾರದು. ಅವರ ತ್ಯಾಗ ಹಾಗೂ ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ನಮ್ಮೆಲ್ಲರ ಜವಾಬ್ದಾರಿ" ಎಂದು ಹರಿಪ್ರಸಾದ್ ಹೇಳಿದರು. ಸೋನಿಯಾ ಗಾಂಧಿ ಅವರ ಈ ಪುಸ್ತಕವನ್ನು ಪ್ರತಿಯೊಬ್ಬರೂ ಓದಿ, ತಮ್ಮ ಮನೆಯಲ್ಲಿ ಗೌರವದಿಂದ ಇರಿಸಿಕೊಳ್ಳಬೇಕು. ಅವರ ಜೀವನದ ಆದರ್ಶಗಳನ್ನು ಸಾರ್ವಜನಿಕ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು" ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ದೇಶವಾಸಿಗಳಿಗೆ ಕರೆ ನೀಡಿದರು.

ಸೋನಿಯಾಗಾಂಧಿ ಆತ್ಮಕಥೆ ಕೃತಿ ಖರೀದಿಸಿದ ಸಚಿವ ಮುನಿಯಪ್ಪ



ಬೆಂಗಳೂರು, ನ.17: ನಾನು ಸುಮಾರು 30 ವರ್ಷಗಳ ನಿಕಟ ಸಂಪರ್ಕದಲ್ಲಿ ಸೋನಿಯಾ ಗಾಂಧಿಯವರೊಂದಿಗೆ ಕೆಲಸ ಮಾಡಿದ್ದು ಅವರೊಂದಿಗೆ ಬಹಳ ಹತ್ತಿರವಾಗಿದ್ದೆ ನಾನು ಅವರನ್ನು ಬೇಟಿ ಮಾಡಲು ಸಮಯಾವಕಾಶ ಕೇಳಿದಾಗ ಯಾವತ್ತೂ ಸಮಯ ನಿಗದಿ ಮಾಡದೆ ಅವರು ಭೇಟಿಗೆ ಅವಕಾಶ ಕಲ್ಪಿಸುತ್ತಿದ್ದರು ಎಂದು ಸಮಾಜಕಲ್ಯಾಣ ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ವತಿಯಿಂದ ಭಾರತ್ ಜೋಡೊ ಸಭಾಂಗಣದಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಪಕ್ಷದ ಅಧಿನಾಯಕಿ ಸೋನಿಯಾ ಗಾಂಧಿ ಯವರ ಆತ್ಮಕಥೆ ಬಿಲಾಂಗಿಂಗ್: ಎ ಜರ್ನಿ ಆಫ್ ಲವ್ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿ, ನಾನು ಆಕಸ್ಮಿಕವಾಗಿ ರಾಜ್ಯ ರಾಜಕಾರಣಕ್ಕೆ ಬಂದಿದ್ದು ಕೇಂದ್ರದಲ್ಲಿ ಸಂಸದನಾಗಿ, ಸಚಿವನಾಗಿ ಕಾಂಗ್ರೆಸ್ ಕಾರ್ಯಕಾರಣಿ ಸಮಿತಿಯಲ್ಲಿ ಸೇವೆ ಸಲ್ಲಿಸಿದ್ದ ನಾನು ರಾಹುಲ್ ಗಾಂದಿ ಸೂಚನೆ ಮೇರೆಗೆ ವಿಧಾನಸಭಾ ಚುನಾವಣೆಯಲ್ಲಿ ದೇವನಹಳ್ಳಿಯಿಂದ ಸ್ಪರ್ಧಿಸಿ ಜಯಗಳಿಸಿ ಇಂದು ಮಂತ್ರಿಯಾಗಿ ಸೇವೆ ಸಲ್ಲಿಸುತ್ತಿದ್ದೇನೆ. ಇದಕ್ಕೆ ಸೋನಿಯಾ ಗಾಂಧಿ ಆಶೀರ್ವಾದ ಕಾರಣ ಎಂದರು.

ಇದೇ ಸಂದರ್ಭದಲ್ಲಿ ಒಂದು ಪುಸ್ತಕವನ್ನು ಖರೀದಿಸಿದ ಸಚಿವರು, ಒಂದು ಸಾವಿರ ಕೃತಿಗಳನ್ನು ಖರೀದಿಸಿ ದೇವನಹಳ್ಳಿ ಕ್ಷೇತ್ರದಲ್ಲಿ ವಿತರಿಸುತ್ತೇನೆ ಎಂದರು.

ಸೋನಿಯಾ ಗಾಂಧಿಯವರ ಈ ಆತ್ಮಕಥನ ಪುಸ್ತಕ ಬಿಡುಗಡೆ ಮಾಡಿದ್ದು ಪ್ರತಿಯೊಬ್ಬರೂ ಈ ಪುಸ್ತಕ ತೆಗೆದು ಕೊಂಡು ಓದಬೇಕು ಎಂದರು ಸಚಿವರು ಸೋನಿಯಾಗಾಂಧಿಯವರ ಆತ್ಮಕಥೆ ಎಲ್ಲರಿಗೂ ಜೀವನದಲ್ಲಿ ಭಾರಿ ಸ್ಫೂರ್ತಿ ನೀಡುವ ಬಹು ಅಮೂಲ್ಯ ಕೃತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕೈ ಕಾರ್ಯಕರ್ತರನ್ನು ಪೋಷಿಸಲು ಜನರ ತೆರಿಗೆ ಹಣ ದುರ್ಬಳಕೆ

ಕರ್ನಾಟಕದಲ್ಲಿ ಅಭಿವೃದ್ಧಿ ಮರೀಚಿಕೆ: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ

ಮೈಸೂರು, ನ.17: ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಅಭಿವೃದ್ಧಿ ಮರೀಚಿಕೆಯಾಗಿದ್ದು, ಸಾರ್ವಜನಿಕರು ಕಟ್ಟುವ ತೆರಿಗೆ ಹಣವನ್ನು ಕೇವಲ ಪಕ್ಷದ ಕಾರ್ಯಕರ್ತರನ್ನು ಪೋಷಿಸಲು ಮತ್ತು ಗ್ಯಾರಂಟಿ ಯೋಜನೆಗಳ ಭ್ರಮೆ ಹುಟ್ಟಿಸಲು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಮೈಸೂರು ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಅವರು, ಜನರು ತೆರಿಗೆ ಕಟ್ಟುತ್ತಿದ್ದಾರೆ. ಗ್ಯಾರಂಟಿಗಳನ್ನು ಕೊಟ್ಟಹಾಗೆ ಮಾಡಿ, ವಿಪರೀತ ತೆರಿಗೆ ವಿಧಿಸಿ, ಹತೋಟಿ ಮೀರಿದ ಪ್ರಮಾಣದಲ್ಲಿ ಬೆಲೆ ಏರಿಕೆ ಮಾಡಿ ಸಾರ್ವಜನಿಕರನ್ನು ಸುಲಿಗೆ ಮಾಡಲಾಗುತ್ತಿದೆ ಎಂದು ಪ್ರಹಾರ ನಡೆಸಿದರು.

ರಾಜ್ಯವು ಗಂಭೀರ ಬರ ಎದುರಿಸುತ್ತಿರುವ ಸಂದರ್ಭದಲ್ಲಿ ಭಾರತ್ ಜೋಡೋ ಸಂಘಗಳ ಹೆಸರಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಗೆ ಪ್ರತಿ ಪಂಚಾಯತ್ ಮತ್ತು ವಾರ್ಡ್ ಮಟ್ಟದಲ್ಲಿ ತಲಾ 10 ಲಕ್ಷ ರೂ. ಅನುದಾನ ಘೋಷಿಸುವ ಅಗತ್ಯವೇನಿತ್ತು. ಈ ಸರ್ಕಾರದಲ್ಲಿ ಹಣವಿಲ್ಲ ಎಂಬುದು ಅದರ ಕಾರ್ಯವೈಖರಿಯನ್ನು ನೋಡಿದರೆ ಅರ್ಥವಾಗುತ್ತಿದೆ. ಆದರೆ ಕಾರ್ಯಕರ್ತರನ್ನು ಸಾಕಲು ಜನರನ್ನೇ ಸುಲಿಗೆ ಮಾಡಿ ಹಣ ಸಂಗ್ರಹ ಮಾಡಲಾಗುತ್ತಿದೆ ಎಂದು ಎಚ್.ಡಿ. ಕುಮಾರಸ್ವಾಮಿ ದೂರಿದರು.

ಪ್ರಧಾನಮಂತ್ರಿಗಳು ರಾಜ್ಯಕ್ಕೆ ಆಗಮಿಸಿದ ಸಂದರ್ಭದಲ್ಲಿ ಎನ್‌ಡಿಆರ್‌ಎಫ್ ಅಡಿಯಲ್ಲಿ 22,000 ಕೋಟಿಗಳ ಬರ ಪರಿಹಾರ ನಿಧಿಗಾಗಿ ಕೇಂದ್ರಕ್ಕೆ ಮನವಿ ಸಲ್ಲಿಸಲಾಗಿತ್ತು. ಆದರೆ, ಬರ ನಿರ್ವಹಣೆಗೆ ದುಡ್ಡಿನ ಕೊರತೆ ಇದೆ ಎಂದು ಸಬೂಬು ಹೇಳುವ ಕರ್ನಾಟಕ ಸರ್ಕಾರವು, 500 ರಿಂದ 600 ವಿವಿಧ ನಿಗಮ-ಮಂಡಳಿಗಳಿಗೆ ತಮ್ಮದೇ ಪಕ್ಷದ ಕಾರ್ಯಕರ್ತರನ್ನು ನಿರ್ದೇಶಕರನ್ನಾಗಿ ನೇಮಿಸುವ ಮೂಲಕ ದುಂದುವೆಚ್ಚದ ರಾಜಕೀಯ ಪುನರ್ವಸತಿಗೆ ಮುಂದಾಗಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ಮತ್ತೆ ಸಚಿವ ಸಂಪುಟ ಸೇರುವ ವಿಶ್ವಾಸ ವ್ಯಕ್ತಪಡಿಸಿದ ಲಕ್ಷ್ಮಿ ಹೆಬ್ಬಾಳ್ಕರ್

ಬೆಂಗಳೂರು, ನ.17: ಈ ಹಿಂದೆ ಮೂರು ವರ್ಷಗಳ ಕಾಲ ಸಚಿವೆಯಾಗಿ ಪ್ರಾಮಾಣಿಕವಾಗಿ ಹಾಗೂ ಉತ್ತಮ ರೀತಿಯಲ್ಲಿ ಕೆಲಸ ಮಾಡಿದ್ದೇನೆ. ಆ ಬಗ್ಗೆ ತೃಪ್ತಿಯಿದೆ. ಹೀಗಾಗಿ ಸಚಿವ ಸ್ಥಾನಕ್ಕೆ ಮುಖ್ಯಮಂತ್ರಿಗಳನ್ನು ನನ್ನ ಹೆಸರನ್ನೇ ಖಂಡಿತವಾಗಿ ಪರಿಗಣಿಸುತ್ತಾರೆ ಎಂಬ ವಿಶ್ವಾಸವಿದೆ ಎಂದು ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸಂಪುಟದಲ್ಲಿ ಖಾಲಿ ಉಳಿದಿರುವ ಎರಡು ಸ್ಥಾನಗಳನ್ನು ಭರ್ತಿ ಮಾಡಲು ರಾಜಕೀಯ ಚಟುವಟಿಕೆಗಳು ಬಿರುಸುಗೊಂಡಿರುವ ನಡುವೆ ಲಕ್ಷ್ಮಿಹೆಬ್ಬಾಳ್ಕರ್ ಹೇಳಿಕೆ ಹೊಸ ಚರ್ಚೆಗೆ ಕಾರಣವಾಗಿದೆ. ಡಿಸೆಂಬರ್ 2ರಿಂದ ಬೆಳಗಾವಿಯಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ ಆರಂಭವಾಗಲಿದೆ. ಈ ಹಿನ್ನೆಲೆಯಲ್ಲಿ ಅಧಿವೇಶನಕ್ಕೂ ಮುನ್ನವೇ ಸಂಪುಟದ ಖಾಲಿ ಸ್ಥಾನಗಳನ್ನು ಭರ್ತಿ ಮಾಡುವ ಸಾಧ್ಯತೆಗಳಿವೆ ಎನ್ನಲಾಗುತ್ತಿದೆ. ಮಹಿಳಾ ಕೋಟಾದಡಿ ಸಚಿವ ಸ್ಥಾನ ಪಡೆಯುವ

ಎಐ, ಡೀಪ್‌ಟೆಕ್, ಸೆಮಿಕಂಡಕ್ಟರ್ ತಯಾರಿಕೆಯಲ್ಲಿ ಕರ್ನಾಟಕವನ್ನು ಜಾಗತಿಕ ಕೇಂದ್ರವಾಗಿಸುವ ಗುರಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ಬೆಂಗಳೂರು, ನ.17: ಉದ್ಯಮಗಳ ಬೆಳವಣಿಗೆಗೆ ಪೂರಕವಾದ ನೀತಿಗಳು, ಬಲಿಷ್ಠ ಸಂಶೋಧನಾ ಕೇಂದ್ರಗಳು, ಸಮೃದ್ಧವಾದ ನವೋದ್ಯಮ ಪರಿಸರ ವ್ಯವಸ್ಥೆ, ಕೌಶಲ್ಯಯುತ ಮಾನವ ಸಂಪನ್ಮೂಲದೊಂದಿಗೆ ಕರ್ನಾಟಕ ರಾಜ್ಯವು ಎಐ, ಡೀಪ್ ಟೆಕ್ ಮತ್ತು ಸೆಮಿಕಂಡಕ್ಟರ್ ತಯಾರಿಕೆಯಲ್ಲಿ ಜಾಗತಿಕ ಕೇಂದ್ರವಾಗುವ ಗುರಿ ಹೊಂದಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಬೆಂಗಳೂರಿನ ಬಿಐಇಸಿಯಲ್ಲಿ ಮಂಗಳವಾರ ಆಯೋಜಿಸಲಾಗಿದ್ದ "ಬೆಂಗಳೂರು ಟೆಕ್ ಸಮ್ಮಿಟ್" ಅನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿ, ಇಂದು ನಾವೆಲ್ಲರೂ ಜಗತ್ತಿನ ಬದಲಾವಣೆಗೆ ಪೂರಕವಾಗಿರುವ ಜ್ಞಾನದ ಶಕ್ತಿ, ಆಲೋಚನೆ, ಅನ್ವೇಷಣೆಗಳಿಗೆ ಸಾಕ್ಷಿಯಾಗುತ್ತಿದ್ದೇವೆ. ಬೆಂಗಳೂರು ವಿಶ್ವದ ಅತಿ ದೊಡ್ಡ ತಂತ್ರಜ್ಞಾನದ ಕ್ಲಸ್ಟರ್‌ಗಳಲ್ಲಿ ಒಂದಾಗಿದೆ ಎಂದರು.

ಅತ್ಯುತ್ತಮ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಆಧುನಿಕ ಕೈಗಾರಿಕೆ ಹಾಗೂ ತಂತ್ರಜ್ಞಾನಕ್ಕೆ ಕರ್ನಾಟಕ ಬುನಾದಿ ಹಾಕಿದೆ. ಜಾಗತಿಕ ಸಂಸ್ಥೆಗಳು ನಮ್ಮ ಮೇಲೆ ಅಪಾರ ವಿಶ್ವಾಸವನ್ನು ಸಾಫ್ಟ್‌ವೇರ್ ಮತ್ತು ಸೇವೆಗಳ ರಫ್ತಿನ ಮೂಲಕ ಭಾರತ ಗಳಿಸುವ ಪ್ರತಿ ಐದು ಡಾಲರ್‌ಗಳಲ್ಲಿ ಎರಡು ಡಾಲರ್ ಕರ್ನಾಟಕದಿಂದಲೇ ಬರುತ್ತಿದ್ದು, ಕಳೆದ ವರ್ಷ ಇದು ಅಂದಾಜು 173 ಶತಕೋಟಿ ಡಾಲರ್‌ಗಳಷ್ಟಿತ್ತು. ಇದು ಅನೇಕ ರಾಷ್ಟ್ರಗಳ ಆರ್ಥಿಕತೆಗಿಂತ ಹೆಚ್ಚಾಗಿದೆ. ಕರ್ನಾಟಕ ಇತ್ತೀಚಿನ ದಿನಗಳಲ್ಲಿ ವಿದೇಶಿ ಬಂಡವಾಳ ಹೂಡಿಕೆಯಲ್ಲಿ ಮುಂಚೂಣಿಯಲ್ಲಿದೆ ಎಂದು ವಿವರಿಸಿದರು.

ಸಾವಿರಕ್ಕೂ ಹೆಚ್ಚು ಜಿಸಿಸಿಗಳಿಗೆ ಬೆಂಗಳೂರು ನೆಲೆ: 2025–26ನೇ ಹಣಕಾಸು ವರ್ಷದ ಮೊದಲಾರ್ಧದಲ್ಲಿ ಕರ್ನಾಟಕವು 9.4 ಶತಕೋಟಿ ಡಾಲರ್ ವಿದೇಶಿ ನೇರ ಹೂಡಿಕೆಯನ್ನು ಪಡೆದಿದ್ದು, ಇದು ಆ ಅವಧಿಯಲ್ಲಿ ಭಾರತದ ಒಟ್ಟು ಒಳಹರಿವಿನ ಶೇ.26.7ರಷ್ಟಿದೆ. 1,000ಕ್ಕೂ ಹೆಚ್ಚು ಜಾಗತಿಕ ಸಾಮರ್ಥ್ಯ ಕೇಂದ್ರಗಳು (ಜಿಸಿಸಿ) ಬೆಂಗಳೂರನ್ನು ತಮ್ಮ ನೆಲೆಯನ್ನಾಗಿ ಆಯ್ಕೆ ಮಾಡಿಕೊಂಡಿದ್ದು, 2025ರ ಒಂದೇ ವರ್ಷದಲ್ಲಿ 30ಕ್ಕೂ ಹೆಚ್ಚು ಹೊಸ ಜಿಸಿಸಿಗಳು ರಾಜ್ಯಕ್ಕೆ ನೂರು ಕೋಟಿ ಡಾಲರ್‌ಗೂ ಅಧಿಕ ಹೂಡಿಕೆಯನ್ನು ತಂದಿವೆ ಎಂದು ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದರು.

ಕರ್ನಾಟಕದಲ್ಲಿ 24,000 ನವೋದ್ಯಮಗಳು: ಕರ್ನಾಟಕವು 24,000 ಅಧಿಕೃತ ನವೋದ್ಯಮಗಳ ನೆಲೆಯಾಗಿದೆ. ಪ್ರತಿ 5 ಪ್ರಮುಖ ಭಾರತೀಯ ಕಂಪನಿಗಳಲ್ಲಿ 2 ಕಂಪನಿಗಳು ಬೆಂಗಳೂರಿನಲ್ಲಿ ಆರಂಭವಾಗಿವೆ. ಜಾಗತಿಕ ನವೋದ್ಯಮ ವ್ಯವಸ್ಥೆಯಲ್ಲಿ ಕರ್ನಾಟಕ 8ನೇ ಸ್ಥಾನ ಹಾಗೂ ಏಷ್ಯಾದಲ್ಲಿ 2ನೇ ಸ್ಥಾನ ಪಡೆದಿದೆ. ಬೆಂಗಳೂರು 4.4 ಶತಕೋಟಿ ಡಾಲರ್ ತಂತ್ರಜ್ಞಾನ ಹೂಡಿಕೆಯನ್ನು ಆಕರ್ಷಿಸಿದ್ದು, ಇದು ದೇಶದ ನಂತರದ ಐದು ಪ್ರಮುಖ ನಗರಗಳು ಒಟ್ಟಾಗಿ ಸಂಗ್ರಹಿಸಿದ 4.8 ಶತಕೋಟಿ ಡಾಲರ್‌ಗೆ ಬಹುತೇಕ ಸಮನಾಗಿದೆ. ಕರ್ನಾಟಕದ ಸ್ಟಾರ್ಟ್ ಅಪ್‌ಗಳು ಒಟ್ಟಾರೆಯಾಗಿ ಸುಮಾರು 79 ಶತಕೋಟಿ ಡಾಲರ್ ಬಂಡವಾಳವನ್ನು ಸಂಗ್ರಹಿಸಿದ್ದು, ಬೆಂಗಳೂರಿನ ಮಹಿಳಾ ಸಂಸ್ಥಾಪಕರು 13.4 ಶತಕೋಟಿ ಡಾಲರ್ ಹೂಡಿಕೆಯನ್ನು ಪಡೆದು ಕೊಂಡಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ವಿವರಿಸಿದರು.


"ಬೆಂಗಳೂರು ಟೆಕ್ ಸಮ್ಮಿಟ್"ಗೆ ಚಾಲನೆ

ಏಷ್ಯಾದಲ್ಲೇ ವಿದ್ಯುತ್ ಸಂಪರ್ಕ ಪಡೆದ ಮೊದಲ ನಗರ ಬೆಂಗಳೂರು

ಮೈಕ್ರೋಸಾಫ್ಟ್ ಸಂಸ್ಥೆಯ ಪುನೀತ್ ಅವರು ನಮ್ಮ ದೇಶದಲ್ಲಿ ರಾಕೆಟ್‌ಗಳನ್ನು ಎತ್ತಿನಗಾಡಿಯಲ್ಲಿ ಸಾಗಿಸುತ್ತಿದ್ದನ್ನು ಸ್ಮರಿಸಿದರು. ಅವರಿಗೆ ಒಂದು ವಿಚಾರ ಸ್ಮರಿಸಲು ಬಯಸುತ್ತೇನೆ. 1902ರಲ್ಲಿ ಏಷ್ಯಾದಲ್ಲಿ ಮೊದಲ ಬಾರಿಗೆ ವಿದ್ಯುತ್ ಉತ್ಪಾದನೆ ಮಾಡಿದ್ದು ಕರ್ನಾಟಕ. ವಿದ್ಯುತ್ ಸಂಪರ್ಕ ಪಡೆದ ಮೊದಲ ನಗರ ಬೆಂಗಳೂರು ಹಾಗೂ ಮೈಸೂರು. ಇದು ನಮ್ಮ ರಾಜ್ಯದ ಇತಿಹಾಸ ಎಂದು ಡಿ.ಕೆ. ಶಿವಕುಮಾರ್ ಬಣ್ಣಿಸಿದರು.

ಕರ್ನಾಟಕ, ಬೆಂಗಳೂರು ಹೊರತುಪಡಿಸಿ ದೇಶದ ಅಭಿವೃದ್ಧಿ ಸಾಧ್ಯವಿಲ್ಲ: ಡಿಕೆಶಿ ಪ್ರತಿಪಾದನೆ

ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿ ಶಿವಕುಮಾರ್ ಅವರು, ಬೆಂಗಳೂರು ಟೆಕ್ ಸಮ್ಮಿಟ್‌ನ 29ನೇ ಆವೃತ್ತಿಯಲ್ಲಿ ವಿಶ್ವದ ಅನೇಕ ನಾಯಕರು ಪಾಲ್ಗೊಂಡಿದ್ದು ಎಲ್ಲರೊಂದಿಗೂ ಪಾಲುದಾರರಾಗಲು ಸರ್ಕಾರ ಉತ್ಸುಕವಾಗಿದೆ. ಇದರಿಂದ ಭಾರತಕ್ಕೆ ಲಾಭವಾಗಲಿದೆ. ಕರ್ನಾಟಕ ಮತ್ತು ಬೆಂಗಳೂರು ಇಲ್ಲದೇ ದೇಶದ ಅಭಿವೃದ್ಧಿ ಸಾಧ್ಯವಿಲ್ಲ. ಇತರೆ ದೇಶಗಳ ಹೂಡಿಕೆಗೆ ಹೋಲಿಸಿದರೆ ನಾವು ಮುಂಚೂಣಿಯಲ್ಲಿದ್ದೇವೆ. ಜಗತ್ತಿನ ಮೂರನೇ ಒಂದು ಭಾಗದಷ್ಟು ಟೆಕ್ ಕಂಪನಿಗಳು ಇಲ್ಲಿ ಸೃಷ್ಟಿಯಾಗುತ್ತಿದ್ದು, ಇದಕ್ಕಾಗಿ ನಾವು ಅನೇಕ ನೀತಿಗಳನ್ನು ಜಾರಿಗೆ ತಂದಿದ್ದೇವೆ. ಈ ನೂತನ ನೀತಿಗಳು ಕರ್ನಾಟಕ ಮತ್ತು ಬೆಂಗಳೂರಿನತ್ತ ವಿವಿಧ ಸಂಸ್ಥೆಗಳು ಹೂಡಿಕೆ ಮಾಡಲು ಆಕರ್ಷಿಸುತ್ತವೆ ಎಂದರು.

ದೇಶದ ಹೆಗ್ಗಳಿಕೆಯ ಸಾಧನೆಗಳಿಗೆ ನಾಂದಿ ಹಾಡಿದ್ದೇ ಕರ್ನಾಟಕದಲ್ಲಿ

ಭಾರತದ ಅತ್ಯಂತ ಹೆಗ್ಗಳಿಕೆಯ ಸಾಧನೆಗಳನ್ನು ನಮ್ಮ ನೆಲದಲ್ಲಿ ಮಾಡಲಾಗಿದೆ. ಚಂದ್ರಯಾನ–3, ಐಐಐಟಿ–ಬೆಂಗಳೂರಿನಲ್ಲಿ ಅಭಿವೃದ್ಧಿಪಡಿಸಲಾದ ಡಿಜಿಟಲ್ ಗುರುತಿನ ವೇದಿಕೆ, ಬಯೋಕಾನ್‌ನ ಜಾಗತಿಕ ಔಷಧೀಯ ವ್ಯಾಪ್ತಿ ಮತ್ತು ಭಾರತದ ಸ್ವಂತ ಎಐ ಮಾದರಿಯನ್ನು ಅಭಿವೃದ್ಧಿಪಡಿಸುವಲ್ಲಿ ಬೆಂಗಳೂರು ಮೂಲದ 'ಸರ್ವಂ' ಪಾತ್ರ ಮಹತ್ವಾದ್ದಾಗಿದೆ. ನಮ್ಮಲ್ಲಿ ತಂತ್ರಜ್ಞಾನವನ್ನು ಕೇವಲ ನಮ್ಮ ದೇಶಕ್ಕೆ ಮಾತ್ರವಲ್ಲ ಇಡೀ ವಿಶ್ವಕ್ಕೆ ಬಳಕೆಯಾಗುವಂತೆ ರೂಪಿಸಲಾಗುತ್ತಿದೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ರೊಬೋಟಿಕ್ಸ್ ಕ್ಷೇತ್ರದಲ್ಲಿ ಜಾಗತಿಕ ಕೇಂದ್ರವಾಗಿ ಬೆಂಗಳೂರನ್ನು ರೂಪಿಸಲು ಬ್ರೇನ್ಸ್ ಉಪಕ್ರಮ: ಪ್ರಿಯಾಂಕ್ ಖರ್ಗೆ

ಬೆಂಗಳೂರು, ನ.17: ರೋಬೋಟಿಕ್ಸ್ ಮತ್ತು ಫಿಸಿಕಲ್ ಎಐ ಕ್ಷೇತ್ರಗಳಲ್ಲಿ ಬೆಂಗಳೂರನ್ನು ಜಾಗತಿಕ ಮಟ್ಟದ ಪ್ರಮುಖ ತಂತ್ರಜ್ಞಾನ ಕೇಂದ್ರವನ್ನಾಗಿ ರೂಪಿಸುವ ಉದ್ದೇಶದಿಂದ, ಬೆಂಗಳೂರು ಟೆಕ್ ಶೃಂಗಸಭೆ 2026ರಲ್ಲಿ ಬ್ರೇನ್ಸ್ ಎಂಬ ಮಹತ್ವದ ನಾವೀನ್ಯತಾ ಉಪಕ್ರಮವನ್ನು ಘೋಷಿಸಲಾಗಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಭಾರತೀಯ ವಿಜ್ಞಾನ ಸಂಸ್ಥೆಯ ಆರ್ಟ್‌ಪಾರ್ಕ್ ಸಹಯೋಗದಲ್ಲಿ ಈ ಯೋಜನೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಒಂಬತ್ತು ಎಕರೆ ಪ್ರದೇಶದಲ್ಲಿ ರೂಪುಗೊಳ್ಳಲಿರುವ ಬ್ರೇನ್ಸ್, ರೋಬೋಟಿಕ್ಸ್, ಕೃತಕ ಬುದ್ಧಿಮತ್ತೆ ಮತ್ತು ಡೀಪ್‌ಟೆಕ್ ಕ್ಷೇತ್ರಗಳ ಸಂಶೋಧಕರು, ನವೋದ್ಯಮಿಗಳು ಹಾಗೂ ಉದ್ಯಮ ವಲಯದ ಪ್ರತಿನಿಧಿಗಳನ್ನು ಒಂದೇ ವೇದಿಕೆಗೆ ತರಲಿದೆ ಎಂದು ಹೇಳಿದ್ದಾರೆ. ದೇಶೀಯವಾಗಿ ರೋಬೋಟಿಕ್ಸ್ ಮತ್ತು ಎಐ ತಂತ್ರಜ್ಞಾನ ಪರಿಹಾರಗಳನ್ನು ಅಭಿವೃದ್ಧಿ ಪಡಿಸುವುದು, ಸಂಶೋಧನಾ ಪ್ರಯೋಗಾಲಯಗಳಲ್ಲಿ ರೂಪು ಗೊಳ್ಳುವ ನಾವೀನ್ಯತೆಗಳನ್ನು ನೈಜ ಜಗತ್ತಿನ ಬಳಕೆಗೆ ತರುವುದು ಹಾಗೂ ಉದ್ಯಮಗಳ ಅಗತ್ಯಗಳಿಗೆ ಅನುಗುಣವಾಗಿ ಸುಧಾರಿತ ತಂತ್ರಜ್ಞಾನಗಳನ್ನು ರೂಪಿಸುವುದು ಈ ಉಪಕ್ರಮದ ಪ್ರಮುಖ ಉದ್ದೇಶವಾಗಿದೆ. ಮುಂದಿನ ಐದು ವರ್ಷಗಳಲ್ಲಿ ಈ ಯೋಜನೆಯ ಮೂಲಕ 1,000 ಕೋಟಿ ಹೂಡಿಕೆಯನ್ನು ಆಕರ್ಷಿಸುವ ಗುರಿ ಹೊಂದಲಾಗಿದೆ ಎಂದರು.

ಪಂಚಾಯತ್‌ನಿಂದ ಸಂಸತ್ ವರೆಗೆ ಮಹಿಳಾ ಪ್ರಾತಿನಿಧ್ಯ

■ ಒಂದನೇ ಪುಟದಿಂದ...

ನಾರಿಶಕ್ತಿ ವಂದನ್ ಅನುಷ್ಠಾನಕ್ಕೆ ಸ್ಪಷ್ಟ ಕಾರ್ಯಯೋಜನೆ ಅಗತ್ಯ: ಡಿಸಿಎಂ ಡಾ.ಜಿ. ಪರಮೇಶ್ವರ್: ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಮಾತನಾಡಿ, ಸಂಸತ್ತು ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಕಲ್ಪಿಸುವ ನಾರಿ ಶಕ್ತಿ ವಂದನ್ ಅಧಿನಿಯಮದ ಅನುಷ್ಠಾನಕ್ಕೆ ಕೇಂದ್ರ ಸರ್ಕಾರ ಸ್ಪಷ್ಟ, ಕಾನೂನುಬದ್ಧ ಹಾಗೂ ಕಾಲಮಿತಿಯ ಕಾರ್ಯಯೋಜನೆ ರೂಪಿಸಬೇಕು ಎಂದು ಆಗ್ರಹಿಸಿದರು. ಮಹಿಳಾ ಜನಪ್ರತಿನಿಧಿಗಳಿಗೆ ಕಿರುಕುಳಮುಕ್ತ ವಾತಾವರಣ, ಕುಟುಂಬದ ಜವಾಬ್ದಾರಿಗಳಿಗೆ ಪೂರಕವಾದ ಸದನದ ಕಲಾಪದ ಸಮಯ, ಶಿಶುಪಾಲನಾ ಸೌಲಭ್ಯಗಳು ಹಾಗೂ ಪ್ರಮುಖ ಶಾಸಕಾಂಗ ಸಮಿತಿಗಳಲ್ಲಿ ಸಮಾನ ಅವಕಾಶ ಒದಗಿಸುವಂತಹ ಸಾಂಸ್ಥಿಕ ಸುಧಾರಣೆಗಳು ಅಗತ್ಯವಾಗಿವೆ ಎಂದು ಹೇಳಿದರು.

ವಿಧಾನಸಭೆಯ ಸಭಾಧ್ಯಕ್ಷ ಜಿ. ಎಸ್. ಪಾಟೀಲ್, ವಿಧಾನ ಪರಿಷತ್ತಿನ ಸಭಾಪತಿ ಸಲೀಂ ಅಹ್ಮದ್ ಮಾತನಾಡಿದರು.

ಎರಡು ದಿನಗಳ ಸಮ್ಮೇಳನ: ಸದೃಢ ಅಡಿಪಾಯ, ಬಲಿಷ್ಠ ಧ್ವನಿಗಳು: ನೂತನ ಮಹಿಳಾ ಜನಪ್ರತಿನಿಧಿಗಳಿಗೆ ಸುರಕ್ಷಿತ ಸೈಬರ್ ವಾತಾವರಣ ಮತ್ತು ಮಾರ್ಗದರ್ಶನದ ಅವಕಾಶಗಳು ಎಂಬ ಆಶಯದಡಿ ಸಮ್ಮೇಳನ ನಡೆಯುತ್ತಿದೆ. ನವೆಂಬರ್ 18ರಂದು ಮಹಿಳಾ ಜನಪ್ರತಿನಿಧಿಗಳ ಸಾಮರ್ಥ್ಯ ವೃದ್ಧಿ ಮತ್ತು ಮಾರ್ಗದರ್ಶನ ಕುರಿತು ವಿಚಾರಗೋಷ್ಠಿಗಳು ನಡೆಯಲಿವೆ ಹಾಗೂ ರಾಜ್ಯಪಾಲೆ ಡಾ. ಸುಧಾ ಯಾದವ್ ಅವರ ಸಮಾರೋಪ ಭಾಷಣದೊಂದಿಗೆ ಸಮ್ಮೇಳನ ಮುಕ್ತಾಯಗೊಳ್ಳಲಿದೆ.

ಉದ್ಘಾಟನಾ ಸಮಾರಂಭದಲ್ಲಿ ವಿಧಾನ ಪರಿಷತ್ತಿನ ಉಪಸಭಾಪತಿ ಡಾ. ಉಮಾಶ್ರೀ, ವಿಧಾನ ಪರಿಷತ್ತಿನ ಕಾರ್ಯದರ್ಶಿ ಜ್ಯೋತಿ, ವಿಧಾನಸಭೆಯ ಕಾರ್ಯದರ್ಶಿ ವಿಶಾಲಾಕ್ಷಿ, ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮಹಿಳಾ ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ಹಿರಿಯ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.



ತರಬೇತಿ, ಮಾರ್ಗದರ್ಶನ ಅಗತ್ಯ: ಪುರಂದೇಶ್ವರಿ

ಕಾಮನ್‌ವೆಲ್ತ್ ಮಹಿಳಾ ಸಂಸದೀಯರ ಭಾರತ ಪ್ರಾದೇಶಿಕ ಘಟಕದ ಅಧ್ಯಕ್ಷೆ ಡಾ. ಡಿ. ಪುರಂದೇಶ್ವರಿ ಮಾತನಾಡಿ, ವೇಗವಾಗಿ ಬೆಳೆಯುತ್ತಿರುವ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆಯ ಯುಗದಲ್ಲಿ ಮಹಿಳಾ ಜನಪ್ರತಿನಿಧಿಗಳು ಸೈಬರ್ ಕಿರುಕುಳ, ಸುಳ್ಳುಸುದ್ದಿ ಹಾಗೂ ಉದ್ದೇಶಪೂರ್ವಕ ವರ್ಚಸ್ಸು ಹಾಳುಮಾಡುವ ಪ್ರಯತ್ನಗಳನ್ನು ಎದುರಿಸುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಇಂತಹ ಸವಾಲುಗಳಿಂದ ಮಹಿಳೆಯರು ಸಾರ್ವಜನಿಕ ಜೀವನ ಪ್ರವೇಶಿಸಲು ಹಿಂಜರಿಯುವ ಪರಿಸ್ಥಿತಿ ನಿರ್ಮಾಣವಾಗಬಾರದು. ಹೊಸದಾಗಿ ಶಾಸನಸಭೆಗಳಿಗೆ ಪ್ರವೇಶಿಸುವ ಮಹಿಳಾ ಜನಪ್ರತಿನಿಧಿಗಳಿಗೆ ತರಬೇತಿ, ಅನುಭವಿ ನಾಯಕರ ಮಾರ್ಗದರ್ಶನ ಮತ್ತು ಸಾಂಸ್ಥಿಕ ಬೆಂಬಲ ಒದಗಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು. ಮಹಿಳೆಯರ ಆರೋಗ್ಯಕ್ಕೂ ಸಮ್ಮೇಳನದಲ್ಲಿ ವಿಶೇಷ ಗಮನ ನೀಡಲಾಗಿದ್ದು, ಯುಎನ್ ವುಮೆನ್ ಇಂಡಿಯಾ ಸಹಯೋಗದಲ್ಲಿ ಋತುಬಂಧದ ಆರೋಗ್ಯಪರ ಮತ್ತು ಸಾಮಾಜಿಕ ಪರಿಣಾಮಗಳ ಕುರಿತು ವಿಶೇಷ ಸಂವಾದ ಆಯೋಜಿಸಲಾಗಿದೆ.

ಮಹಿಳಾ ಅಭಿವೃದ್ಧಿಯಿಂದ ಮಹಿಳಾ ನೇತೃತ್ವದ ಅಭಿವೃದ್ಧಿಯತ್ತ ಸಾಗುವುದು ಸಮ್ಮೇಳನದ ಪ್ರಮುಖ ಆಶಯವಾಗಿದೆ ಎಂದರು. ಈ ಸಮ್ಮೇಳನಕ್ಕೆ ತಕ್ಷಣವೇ ಸಕಾರಾತ್ಮಕವಾಗಿ ಸ್ಪಂದಿಸಿ ಸಂಪೂರ್ಣ ಸಹಕಾರ ನೀಡಿದ ಸಿಎಂ ಡಿ.ಕೆ. ಶಿವಕುಮಾರ್, ವಿಧಾನಸಭೆ ಅಧ್ಯಕ್ಷ ಜಿ.ಎಸ್. ಪಾಟೀಲ ಹಾಗೂ ಸಭಾಪತಿ ಸಲೀಂ ಅಹ್ಮದ್ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಕೇವಲ ಚರ್ಚೆ, ನಿರ್ಣಯಗಳಿಗೆ ಸೀಮಿತ ಬೇಡ: ರಾಜ್ಯಸಭಾ ಉಪಸಭಾಪತಿ ಹರಿವಂಶ್

ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ಮಾತನಾಡಿ, ಮಹಿಳಾ ಸಬಲೀಕರಣದ ಸಮ್ಮೇಳನಗಳು ಕೇವಲ ಚರ್ಚೆ ಮತ್ತು ನಿರ್ಣಯಗಳಿಗೆ ಸೀಮಿತವಾಗಬಾರದು. ಅನುಭವಿ ಮತ್ತು ಹೊಸ ಮಹಿಳಾ ಜನಪ್ರತಿನಿಧಿಗಳ ನಡುವೆ ವ್ಯವಸ್ಥಿತ ಮಾರ್ಗದರ್ಶನ ಜಾಲ, ಡಿಜಿಟಲ್ ಸಾಕ್ಷರತಾ ಕಾರ್ಯಕ್ರಮಗಳು ಹಾಗೂ ಮಹಿಳಾ ಆರೋಗ್ಯಕ್ಕೆ ಸ್ಪಂದಿಸುವ ನೀತಿಗಳನ್ನು ರೂಪಿಸುವ ಮೂಲಕ ಸ್ಪಷ್ಟ ಫಲಿತಾಂಶಗಳನ್ನು ಸಾಧಿಸಬೇಕು ಎಂದು ಕರೆ ನೀಡಿದರು. 1989ರಲ್ಲಿ ಆರಂಭವಾದ ಕಾಮನ್‌ವೆಲ್ತ್ ಮಹಿಳಾ ಸಂಸದೀಯರ ಸಂಘಟನೆಯು ಮಹಿಳೆಯರ ರಾಜಕೀಯ ಪ್ರಾತಿನಿಧ್ಯ ಮತ್ತು ನಾಯಕತ್ವವನ್ನು ಉತ್ತೇಜಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಭಾರತದ ಸಿಲಿಕಾನ್ ವ್ಯಾಲಿಯಾಗಿರುವ ಬೆಂಗಳೂರು ನಾವೀನ್ಯತೆ ಮತ್ತು ಜ್ಞಾನದ ಕೇಂದ್ರವಾಗಿದ್ದು, ಇಂತಹ ಐತಿಹಾಸಿಕ ಸಮ್ಮೇಳನಕ್ಕೆ ಸೂಕ್ತ ಸ್ಥಳವಾಗಿದೆ ಎಂದರು.

ಜಾಗತಿಕ ಏರೋಸ್ಪೇಸ್ ತಯಾರಿಕೆ, ಆವಿಷ್ಕಾರದ ಕೇಂದ್ರವಾಗಿ ಬೆಂಗಳೂರು ಬೆಳೆಯಲಿ: ಸಂಸದ ಸುಧಾಕರ್

ಬೆಂಗಳೂರು, ನ.17: ಕಾಲಿನ್ಸ್ ಏರೋಸ್ಪೇಸ್‌ನ ನೂತನ ಎಂಆರ್‌ಒ ಘಟಕದಿಂದಾಗಿ ಭಾರತದ ವೈಮಾನಿಕ ಕ್ಷೇತ್ರ ಇನ್ನಷ್ಟು ಬಲಗೊಳ್ಳಲಿದ್ದು, ದೇಶವು ಜಾಗತಿಕ ತಯಾರಿಕಾ ಕೇಂದ್ರವಾಗಿ ಬೆಳೆಯುವ ಮಹತ್ವಕಾಂಕ್ಷೆಗೆ ಮತ್ತೊಂದು ಮಹತ್ವದ ಮೈಲುಗಲ್ಲಾಗಲಿದೆ ಎಂದು ಸಂಸದ ಡಾ. ಕೆ.ಸುಧಾಕರ್ ಬಣ್ಣಿಸಿದರು.

ದೇವನಹಳ್ಳಿಯ ಕೆಐಎಡಿಬಿ ಏರೋಸ್ಪೇಸ್ ಪಾರ್ಕ್‌ನಲ್ಲಿ ಕಾಲಿನ್ಸ್ ಏರೋಸ್ಪೇಸ್ ಸಂಸ್ಥೆಯ ನೂತನ ಪ್ರೊಪೆಲ್ಲರ್ ನಿರ್ವಹಣೆ, ದುರಸ್ತಿ ಮತ್ತು ಪರಿಶೀಲನಾ ಘಟಕದ ಶಂಕುಸ್ಥಾಪನಾ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತದ ವೈಮಾನಿಕ ಕೈಗಾರಿಕಾ ಕ್ಷೇತ್ರದಲ್ಲಿ ಗಮನಾರ್ಹ ಸುಧಾರಣೆಗಳಾಗುತ್ತಿವೆ. ಜಾಗತಿಕ ಕಂಪನಿಗಳು ಭಾರತವನ್ನು ಕೇವಲ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವ ಮಾರುಕಟ್ಟೆಯಾಗಿ ನೋಡದೆ, ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವ ಹೂಡಿಕೆಯ ಕೇಂದ್ರವಾಗಿ ಪರಿಗಣಿಸುತ್ತಿವೆ ಎಂದರು.

ಪ್ರಧಾನಿ ಮೋದಿಯವರು ಮೇಕ್ ಇನ್ ಇಂಡಿಯಾ ಅಭಿಯಾನಕ್ಕೆ ಕರೆ ನೀಡಿದಾಗ ಅದು ಕೇವಲ ಘೋಷಣೆಯಾಗಿರಲಿಲ್ಲ. ಅದು ಭಾರತದ ಕೈಗಾರಿಕಾ ಮಹತ್ವಾಕಾಂಕ್ಷೆಯ ಘೋಷಣೆಯಾಗಿತ್ತು. ಅದೇ ರೀತಿ ಆತ್ಮನಿರ್ಭರ ಭಾರತ ಎಂದರೆ ಬೇರೆ ದೇಶಗಳಿಂದ ಪ್ರತ್ಯೇಕವಾಗಿ ಉಳಿಯುವುದು ಎಂದರ್ಥವಲ್ಲ. ಬದಲಾಗಿ ಭಾರತವನ್ನು ಸಮರ್ಥ, ಆತ್ಮವಿಶ್ವಾಸದ ಮತ್ತು ಸ್ಪರ್ಧಾತ್ಮಕ ದೇಶವಾಗಿ ಬೆಳೆಸುವ ಉದ್ದೇಶವನ್ನು ಅದು ಹೊಂದಿತ್ತು. ಇಡೀ ಜಗತ್ತು ನಮ್ಮ ಪಾಲುದಾರಿಕೆಯನ್ನು ಬಯಸಬೇಕು ಎಂಬ ಗುರಿಯನ್ನು ಅದು ಹೊಂದಿತ್ತು ಎಂದರು.

ರಾಜ್ಯದಲ್ಲಿ ಕೈಗಾರಿಕೆಗಳನ್ನು ಆಕರ್ಷಿಸಲು ಮತ್ತು ಹೂಡಿಕೆಗೆ ಪೂರಕ ವಾತಾವರಣ ನಿರ್ಮಿಸಲು ಶ್ರಮಿಸುತ್ತಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರ ಪ್ರಯತ್ನವನ್ನು ಡಾ.ಕೆ.ಸುಧಾಕರ್ ಶ್ಲಾಘಿಸಿದರು. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಅಡ್ವಾನ್ಸ್ಡ್ ಸ್ಟ್ರಕ್ಚರ್ಸ್ ಮುಖ್ಯಸ್ಥ

ನ್ಯಾಯಾಂಗ ನಿಂದನೆ: ಮಾಜಿ ಸಿಎಂ ಕೇಜ್ರಿವಾಲ್, ಸಿಸೋಡಿಯಾಗೆ ಹೈಕೋರ್ಟ್ ಗಡುವು

ನವದೆಹಲಿ, ನ. 17: ದೆಹಲಿ ಅಬಕಾರಿ ನೀತಿ ಹಗರಣದ ವಿಚಾರಣೆ ಸಂದರ್ಭದಲ್ಲಿ ನ್ಯಾಯಾಧೀಶರ ವಿರುದ್ಧ ವಿವಾದಾತ್ಮಕ ಹೇಳಿಕೆಗಳನ್ನು ನೀಡಿದ್ದ ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣಕ್ಕೆ ಸಂಬಂಧಿಸಿದಂತೆ, ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಮನೀಶ್ ಸಿಸೋಡಿಯಾ ಮತ್ತು ಇತರ ಎಎಪಿ ನಾಯಕರನ್ನು ದೆಹಲಿ ಹೈಕೋರ್ಟ್ ಮಂಗಳವಾರ ತೀವ್ರ ತರಾಟೆಗೆ ತೆಗೆದುಕೊಂಡಿದೆ.

ನ್ಯಾಯಾಲಯದ ನೋಟಿಸ್‌ಗೆ ಯಾವುದೇ ಪ್ರತಿಕ್ರಿಯೆ ಸಲ್ಲಿಸದ ಎಎಪಿ ನಾಯಕರ ನಡೆಯನ್ನು ವಿಭಾಗೀಯ ಪೀಠವು ಕಟುವಾಗಿ ಟೀಕಿಸಿದೆ. ನೀವು ನಮ್ಮನ್ನು ಸುಖಾಸುಮ್ಮನೆ ಅಲೆದಾಡಿಸುತ್ತಿದ್ದೀರಿ, ಇನ್ನು ಮುಂದೆ ನಿಮಗೆ ಹೆಚ್ಚಿನ ಕಾಲಾವಕಾಶ ನೀಡುವುದಿಲ್ಲ. ರಿಜಿಸ್ಟ್ರಿಯಿಂದ ಎಲ್ಲ ದಾಖಲೆಗಳನ್ನು ನಿಮಗೆ ಒದಗಿಸಲಾಗಿದ್ದರೂ ನೀವು ಉತ್ತರಿಸಿಲ್ಲ ಎಂದು ನ್ಯಾಯಮೂರ್ತಿಗಳಾದ ನವೀನ್ ಚಾವ್ಲಾ ಮತ್ತು ಅರುಣ್ ಭಾರದ್ವಾಜ್ ಅವರಿದ್ದ ಪೀಠವು ಅಸಮಾಧಾನ ವ್ಯಕ್ತಪಡಿಸಿದೆ.

ಈ ಪ್ರಕರಣದಲ್ಲಿ ತಮ್ಮ ಅಧಿಕೃತ ಪ್ರತಿಕ್ರಿಯೆಯನ್ನು ಸಲ್ಲಿಸಲು ಆಮ್ ಆದ್ಮಿ ಪಕ್ಷದ ನಾಯಕರಿಗೆ ನ್ಯಾಯಾಲಯವು ಅಂತಿಮ ಹಾಗೂ ಕೊನೆಯ ಅವಕಾಶವನ್ನು ನೀಡಿದೆ. ಇದಕ್ಕಾಗಿ ಕೇವಲ ಮೂರು ವಾರಗಳ ಗಡುವನ್ನು ವಿಧಿಸಲಾಗಿದ್ದು, ಈ ನಿಗದಿತ ಅವಧಿಯೊಳಗೆ ಸಮರ್ಪಕವಾಗಿ ಉತ್ತರಿಸದಿದ್ದರೆ ಪ್ರತಿಕ್ರಿಯಿಸುವ ಹಕ್ಕನ್ನೇ ಮೊಟಕುಗೊಳಿಸುವುದಾಗಿ ಪೀಠವು ಖಡಕ್ ಎಚ್ಚರಿಕೆ ರವಾನಿಸಿದೆ.

ಕಳೆದ ಮೇ 14ರಂದು ದೆಹಲಿ ಹೈಕೋರ್ಟ್‌ನ ನ್ಯಾಯಮೂರ್ತಿ ಸ್ವರ್ಣಕಾಂತಾ ಶರ್ಮಾ ಅವರು ಈ ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣವನ್ನು ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡಿದ್ದರು. ಅರವಿಂದ್ ಕೇಜ್ರಿವಾಲ್, ಮನೀಶ್ ಸಿಸೋಡಿಯಾ, ದುರ್ಗೇಶ್ ಪಾಠಕ್, ಸಂಜಯ್ ಸಿಂಗ್, ವಿನಯ್ ಮಿಶ್ರಾ ಮತ್ತು ಸೌರಭ್ ಭಾರದ್ವಾಜ್ ಅವರ ವಿರುದ್ಧ ಈ ಕಠಿಣ ಕ್ರಮ ಕೈಗೊಳ್ಳಲಾಗಿತ್ತು.



ಅಬಕಾರಿ ನೀತಿ ಹಗರಣದ ವಿಚಾರಣೆ ನಡೆಯುತ್ತಿದ್ದಾಗ, ನ್ಯಾಯಾಧೀಶರ ವಿರುದ್ಧ ಎಎಪಿ ನಾಯಕರು ಸಾಮಾಜಿಕ ಜಾಲತಾಣಗಳಲ್ಲಿ ಸರಣಿ ಪೋಸ್ಟ್‌ಗಳನ್ನು ಹಾಕಿದ್ದರು ಹಾಗೂ ಪತ್ರಗಳನ್ನು ಬರೆದು ಆನ್‌ಲೈನ್‌ನಲ್ಲಿ ಪ್ರಕಟಿಸಿದ್ದರು. ಡಿಜಿಟಲ್ ಜಾಗದಲ್ಲಿ ನಡೆದ ಈ ವ್ಯವಸ್ಥಿತ ಅಪಪ್ರಚಾರವು ಕೇವಲ ಓರ್ವ ನ್ಯಾಯಾಧೀಶರ ವಿರುದ್ಧವಲ್ಲ, ಬದಲಾಗಿ ಇಡೀ ನ್ಯಾಯಾಂಗ ವ್ಯವಸ್ಥೆ ಮತ್ತು ಪ್ರಕ್ರಿಯೆಯ ವಿರುದ್ಧದ ನಿಂದನೆಯಾಗಿದೆ ಎಂದು ನ್ಯಾಯಮೂರ್ತಿ ಶರ್ಮಾ ಬೇಸರ ವ್ಯಕ್ತಪಡಿಸಿದ್ದರು.

ಭ್ರಷ್ಟಾಚಾರ ಪ್ರಕರಣದಲ್ಲಿ ಕೇಜ್ರಿವಾಲ್, ಸಿಸೋಡಿಯಾ ಮತ್ತು ಇತರ ಆರೋಪಿಗಳನ್ನು ಖುಲಾಸೆಗೊಳಿಸಿದ್ದ ವಿಚಾರಣಾ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸಿಬಿಐ ಸಲ್ಲಿಸಿದ್ದ ಮೇಲ್ಮನವಿಯ ವಿಚಾರಣೆಯನ್ನು ಆ ಸಮಯದಲ್ಲಿ ನ್ಯಾಯಮೂರ್ತಿ ಶರ್ಮಾ ಅವರು ನಡೆಸುತ್ತಿದ್ದರು.

ಆದರೆ, ನ್ಯಾಯಾಧೀಶರು ಪಕ್ಷಪಾತ ಮಾಡುತ್ತಿದ್ದಾರೆಂದು ಆರೋಪಿಸಿದ್ದ ಎಎಪಿ ನಾಯಕರು, ಈ ವಿಚಾರಣಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ನೇರವಾಗಿ ನಿರಾಕರಿಸಿದ್ದರು.

ಆಮ್ ಆದ್ಮಿ ಪಕ್ಷದ ನಾಯಕರ ಈ ಅಸಹಕಾರ ಮತ್ತು ನಿಂದನಾತ್ಮಕ ವರ್ತನೆಯ ಹಿನ್ನೆಲೆಯಲ್ಲಿ ಸ್ವಯಂಪ್ರೇರಿತವಾಗಿ ದಾಖಲಾದ ಪ್ರಕರಣದ ವಿಚಾರಣೆಯನ್ನು ಪ್ರಸ್ತುತ ನ್ಯಾಯಮೂರ್ತಿಗಳಾದ ನವೀನ್ ಚಾವ್ಲಾ ಮತ್ತು ಅರುಣ್ ಭಾರದ್ವಾಜ್ ಅವರ ಪೀಠವು ಮುಂದುವರಿಸಿದೆ.

ನ್ಯಾಯಾಂಗ ನಿಂದನೆಯಂತಹ ಗಂಭೀರ ಆರೋಪ ಎದುರಿಸುತ್ತಿರುವ ನಾಯಕರು ಇದೀಗ ಮೂರು ವಾರಗಳಲ್ಲಿ ಉತ್ತರ ನೀಡಲೇಬೇಕಾದ ಅನಿವಾರ್ಯತೆಗೆ ಸಿಲುಕಿದ್ದಾರೆ.

ನೋಟಿಸ್ ಜಾರಿ ಮಾಡದ ಸುಪ್ರೀಂ ಡಿ. 9ಕ್ಕೆ ವಿಚಾರಣೆ ಮುಂದೂಡಿಕೆ

ಎಸ್‌ಐಆರ್ ಅಕ್ರಮ ಪ್ರಶ್ನಿಸಿ ಪ್ರತಿಪಕ್ಷಗಳಿಂದ ಅರ್ಜಿ

ನವದೆಹಲಿ, ನ.17: ಚುನಾವಣಾ ಆಯೋಗದ ಕಾರ್ಯವೈಖರಿ ಹಾಗೂ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಸಲ್ಲಿಕೆಯಾಗಿರುವ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಡಿಸೆಂಬರ್ 9ಕ್ಕೆ ಮುಂದೂಡಿದೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೇರಿದಂತೆ ಇಂಡಿಯಾ ಮೈತ್ರಿಕೂಟದ ಹಲವು ನಾಯಕರು ಸಲ್ಲಿಸಿರುವ ಅರ್ಜಿಯಲ್ಲಿ, ಚುನಾವಣಾ ಆಯೋಗಕ್ಕೆ 48 ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡುವಂತೆ ಕೋರಲಾಗಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಸೇರಿದಂತೆ ಆಯೋಗದ ಮೂವರು ಸದಸ್ಯರು ಹಾಗೂ ಹಿರಿಯ ಅಧಿಕಾರಿಗಳಿಂದ ಪ್ರಮಾಣಪತ್ರದ ಮೂಲಕ ಉತ್ತರ ಪಡೆಯಲು ಅರ್ಜಿದಾರರು ಬಯಸಿದ್ದಾರೆ.

ಮಂಗಳವಾರ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಮತ್ತು ವಿ.ಮೋಹನಾ ಅವರನ್ನೊಳಗೊಂಡ ಪೀಠ ವಿಚಾರಣೆ ನಡೆಸಿತು. ಈ ವೇಳೆ ಚುನಾವಣಾ ಆಯೋಗದ ಪರ ವಾದ ಮಂಡಿಸಿದ ಹಿರಿಯ ವಕೀಲ ಹರೀಶ್ ಸಾಳ್ವೆ, ವಿಪಕ್ಷಗಳ ಅರ್ಜಿಗೆ ಆಕ್ಷೇಪ ವ್ಯಕ್ತಪಡಿಸಿದರು. ಆಯೋಗಕ್ಕೆ ಈ ಅರ್ಜಿಯಿಂದ ಗಂಭೀರ ತೊಂದರೆಯಾಗಲಿದೆ ಎಂದು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯ ನ್ಯಾಯಮೂರ್ತಿಗಳು, ಚುನಾವಣಾ ಆಯೋಗ ತನ್ನ ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಬಳಿಕ ಅರ್ಜಿಯ ವಿಚಾರಣೆ ನಡೆಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ಪ್ರಮುಖ ನಿರ್ಧಾರಗಳನ್ನು ಮೂವರು ಚುನಾವಣಾ ಆಯುಕ್ತರ ಒಮ್ಮತದೊಂದಿಗೆ ತೆಗೆದುಕೊಳ್ಳಲಾಗಿದೆಯೇ ಅಥವಾ ಮುಖ್ಯ ಚುನಾವಣಾ ಆಯುಕ್ತರು ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದ್ದಾರೆಯೇ ಎಂಬುದನ್ನು ಪ್ರಶ್ನಿಸುವುದು ಅರ್ಜಿಯ ಪ್ರಮುಖ ಉದ್ದೇಶವಾಗಿದೆ. ಮತದಾರರ ಹೆಸರುಗಳ ಅಳಿಸುವಿಕೆ ಹಾಗೂ ಆನ್‌ಲೈನ್ ಮತದಾರರ ನೋಂದಣಿ ವ್ಯವಸ್ಥೆಯಲ್ಲಿನ ಬದಲಾವಣೆಗಳ ಬಗ್ಗೆಯೂ ವಿಪಕ್ಷಗಳು ಪ್ರಶ್ನೆಗಳನ್ನು ಎತ್ತಿವೆ. ಚುನಾವಣಾ ಆಯೋಗ ತನ್ನ ಅಫಿಡವಿಟ್ನಲ್ಲಿ ಎಸ್‌ಐಆರ್‌ಗೆ ಸಂಬಂಧಿಸಿದ ನಿರ್ಧಾರಗಳನ್ನು ಮೂವರು ಆಯುಕ್ತರ ಒಮ್ಮತದೊಂದಿಗೆ ಕೈಗೊಳ್ಳಲಾಗಿದೆ ಎಂದು ತಿಳಿಸಿದೆ. ಆಯೋಗದ ಆಕ್ಷೇಪಣೆಗಳನ್ನು ಪರಿಶೀಲಿಸಿದ ಬಳಿಕ 48 ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಬೇಕೇ ಎಂಬುದರ ಕುರಿತು ಸುಪ್ರೀಂ ಕೋರ್ಟ್ ನಿರ್ಧಾರ ಕೈಗೊಳ್ಳಲಿದೆ. ಡಿಸೆಂಬರ್ 9ರಂದು ಮುಂದಿನ ವಿಚಾರಣೆ ನಡೆಯಲಿದೆ.



ನವದೆಹಲಿಯಲ್ಲಿ ನೀತಿ ಆಯೋಗವು ಮಂಗಳವಾರ ಆಯೋಜಿಸಿದ್ದ, 'ನಾಯಕತ್ವ – ಒಂದು ಧ್ಯೇಯ' ಕುರಿತ ರಾಷ್ಟ್ರೀಯ ಕಾರ್ಯಾಗಾರದ ಎರಡನೇ ಅಧಿವೇಶನದ ದೃಶ್ಯ.

ಕೇಜ್ರಿವಾಲ್ ಶೀಷಮಹಲ್ ಸಾರ್ವಜನಿಕರ ವೀಕ್ಷಣೆಗೆ ಮುಕ್ತ



ನವದೆಹಲಿ, ನ.17: ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಅಧಿಕೃತ ನಿವಾಸವಾಗಿದ್ದ ವಿವಾದಿತ 'ಶೀಷಮಹಲ್' ಅನ್ನು ಸಾರ್ವಜನಿಕರ ವೀಕ್ಷಣೆಗೆ ಮುಕ್ತಗೊಳಿಸಲು ದೆಹಲಿ ಸರ್ಕಾರ ನಿರ್ಧರಿಸಿದೆ.

ಈ ಕುರಿತು ಲೋಕೋಪಯೋಗಿ ಇಲಾಖೆ ಸಚಿವ ಪ್ರವೇಶ್ ಸಾಹಿಬ್ ಸಿಂಗ್ ವರ್ಮಾ ಮಂಗಳವಾರ ಮಾಹಿತಿ ನೀಡಿದ್ದಾರೆ. ಮುಂದಿನ ವಾರದಿಂದ ಸಾರ್ವಜನಿಕರಿಗೆ ನಿವಾಸ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗುವುದು. ಇದಕ್ಕಾಗಿ ಟಿಕೆಟ್ ಮತ್ತು ಮುಂಗಡ ಕಾಯ್ದಿರಿಸುವ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಮೊದಲ ಹಂತದಲ್ಲಿ ರಾಷ್ಟ್ರೀಯ ಮಾಧ್ಯಮ ಪ್ರತಿನಿಧಿಗಳಿಗೆ ನಿವಾಸ ವೀಕ್ಷಣೆಗೆ ಅವಕಾಶ ನೀಡಲಾಗುತ್ತದೆ. ಬಳಿಕ ಸಾರ್ವಜನಿಕರಿಗೆ ಪ್ರವೇಶ ಕಲ್ಪಿಸಲಾಗುವುದು. ಟಿಕೆಟ್ ದರ, ಆನ್‌ಲೈನ್ ಕಾಯ್ದಿರಿಸುವಿಕೆ ಸೇರಿದಂತೆ ಪ್ರವೇಶಕ್ಕೆ ಸಂಬಂಧಿಸಿದ ವಿವರಗಳನ್ನು ಮುಂದಿನ ವಾರ ಪ್ರಕಟಿಸಲಾಗುವುದು ಎಂದು ಸಚಿವರು ಹೇಳಿದ್ದಾರೆ.

ಈ ಹಿಂದೆ ಶೀಷ್‌ಮಹಲ್ ಅನ್ನು ರಾಜ್ಯ ಅತಿಥಿಗೃಹವನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಇತ್ತು. ಆದರೆ ಸಾರ್ವಜನಿಕರ ಆಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಅದನ್ನು ವೀಕ್ಷಣೆಗೆ ಮುಕ್ತಗೊಳಿಸುವ ನಿರ್ಧಾರ ಕೈಗೊಳ್ಳಲಾಗಿದೆ. ಕೇಜ್ರಿವಾಲ್ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ನಿವಾಸದ ನವೀಕರಣಕ್ಕೆ ಕೋಟ್ಯಂತರ ರೂಪಾಯಿ ವೆಚ್ಚ ಮಾಡಲಾಗಿದೆ ಎಂಬ ಆರೋಪ ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು. ನಿವಾಸದಲ್ಲಿನ ದುಬಾರಿ ಸೌಲಭ್ಯಗಳು ಮತ್ತು ನವೀಕರಣ ಕಾಮಗಾರಿಗಳ ವೆಚ್ಚದ ಕುರಿತು ಬಿಜೆಪಿ ಹಾಗೂ ಆಮ್ ಆದ್ಮಿ ಪಕ್ಷದ ನಡುವೆ ವಾಗ್ವಾದ ನಡೆದಿತ್ತು. ಇದೀಗ ಈ ನಿವಾಸವನ್ನು ಸಾರ್ವಜನಿಕರ ವೀಕ್ಷಣೆಗೆ ತೆರೆಯಲು ದೆಹಲಿ ಸರ್ಕಾರ ಮುಂದಾಗಿದೆ.

2027ರ ಜನಗಣತಿ ಗಂಭೀರ ಪರಿಣಾಮ ಬೀರಲಿದೆ: ಜೈರಾಮ್ ರಮೇಶ್

ನವದೆಹಲಿ, ನ.17: 2027ರ ಜನಗಣತಿ ಪ್ರಕ್ರಿಯೆಯು ಹಲವು ವಿಧಗಳಲ್ಲಿ ಒಂದು ಪ್ರಹಸನವಾಗಿ ಮಾರ್ಪಡುತ್ತಿದ್ದು, ಇದು ಮುಂದಿನ ದಿನಗಳಲ್ಲಿ ಗಂಭೀರ ಪರಿಣಾಮ ಬೀರಲಿದೆ ಎಂದು ಕಾಂಗ್ರೆಸ್ ಮಂಗಳವಾರ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ.

ಜನಗಣತಿಯ ಸ್ವಯಂ–ಗಣತಿ ಪೋರ್ಟಲ್‌ನಲ್ಲಿನ ಲೋಪದೋಷಗಳ ಕುರಿತು ಮಾಧ್ಯಮ ವರದಿಯನ್ನು ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಸರ್ಕಾರದ ಕಾರ್ಯವೈಖರಿಯನ್ನು ಪ್ರಶ್ನಿಸಿದ್ದಾರೆ.

ವರದಿಯ ಪ್ರಕಾರ, ಜನಗಣತಿಯ ಸ್ವಯಂ–ಗಣತಿ ಪೋರ್ಟಲ್‌ನಲ್ಲಿ ಇತರೆ ಧರ್ಮಗಳ ವಿಭಾಗದ ಅಡಿಯಲ್ಲಿ ಒಟ್ಟು 287 ಹೆಸರುಗಳನ್ನು ಪಟ್ಟಿ ಮಾಡಲಾಗಿತ್ತು. ಇದರಲ್ಲಿ ಇಸ್ಕಾನ್, ರಾಮಕೃಷ್ಣ ಪರಮಹಂಸ, ಸನಾತನ, ಶ್ರೀರಾಮ, ಶ್ರೀಕೃಷ್ಣ, ವಾಲ್ಮೀಕಿ, ರಾಮದೇವ್, ಸೂಫಿ, ಶಿಯಾ, ಸುನ್ನಿ, ಮೆಥೋಡಿಸ್ಟ್ ಮತ್ತು ಪೆಂಟೆಕೋಸ್ಟಲ್ ಮುಂತಾದ ಹೆಸರುಗಳು ಸೇರಿದ್ದವು. ಆದರೆ, ಈ ಕುರಿತು ಕೇಂದ್ರ ಗೃಹ ಸಚಿವಾಲಯಕ್ಕೆ ಪ್ರಶ್ನೆಗಳನ್ನು ಕೇಳಿದ ಬೆನ್ನಲ್ಲೇ, ಯಾವುದೇ ಸ್ಪಷ್ಟನೆ ನೀಡದೆ ಈ ಪಟ್ಟಿಯನ್ನು ಪೋರ್ಟಲ್‌ನಿಂದ ಸದ್ದಿಲ್ಲದೆ ತೆಗೆದುಹಾಕಲಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಬೆಳವಣಿಗೆಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ಜೈರಾಮ್ ರಮೇಶ್, ಇದು ವಿಚಿತ್ರವಾಗಿದೆ ಮತ್ತು ಯಾವುದೇ ತರ್ಕಕ್ಕೆ ನಿಲುಕದಂತಿದೆ. ಎಲ್ಲಿ ಡ್ರಾಪ್–ಡೌನ್ ಮೆನು ನೀಡಬೇಕಿತ್ತೋ (ಉದಾಹರಣೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳನ್ನು ಹೊರತುಪಡಿಸಿ ಇತರ ಜಾತಿಗಳ ಕಾಲಂನಲ್ಲಿ) ಅಲ್ಲಿ ಅದನ್ನು ನೀಡಿಲ್ಲ. 2027ರ ಜನಗಣತಿಯು ಅನೇಕ ವಿಷಯಗಳಲ್ಲಿ ಪ್ರಹಸನವಾಗುತ್ತಿದೆ. ಇದು ಗಂಭೀರ ಪರಿಣಾಮ ಉಂಟುಮಾಡಲಿದೆ ಎಂದು ಕಿಡಿಕಾರಿದ್ದಾರೆ.

2027ರ ಜನಗಣತಿಯನ್ನು ಕೇಂದ್ರ ಸರ್ಕಾರವು ಅತ್ಯಂತ ಸಂಶಯಾಸ್ಪದವಾಗಿ ನಡೆಸುತ್ತಿದೆ ಎಂದು ಕಾಂಗ್ರೆಸ್ ಈ ಹಿಂದೆಯೂ ಆರೋಪಿಸಿತ್ತು. ಸಂಗ್ರಹಿಸಲಾಗುತ್ತಿರುವ ದತ್ತಾಂಶದ ಗುಣಮಟ್ಟ ಮತ್ತು ಅದರ ಉದ್ದೇಶದ ಬಗ್ಗೆ ಪಕ್ಷವು ನಿರಂತರವಾಗಿ ಕಳವಳ ವ್ಯಕ್ತಪಡಿಸುತ್ತಾ ಬಂದಿದೆ.

ನ. 26ರಂದು ಮೈಸೂರಿನಲ್ಲಿ ಸಂವಿಧಾನ ದಿನಾಚರಣೆ ಕಾಂಗ್ರೆಸ್ ಹೈಕಮಾಂಡ್ ನಾಯಕರಿಗೆ ಆಹ್ವಾನ

ನವದೆಹಲಿ, ನ.17: ನವೆಂಬರ್ 26ರಂದು ಮೈಸೂರಿನಲ್ಲಿ ಸಂವಿಧಾನ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದ್ದು, ಕಾರ್ಯಕ್ರಮಕ್ಕೆ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಆಹ್ವಾನಿಸಲಾಗಿದೆ ಎಂದು ಕೃಷಿ ಸಚಿವ ನರೇಂದ್ರಸ್ವಾಮಿ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಮಾತನಾಡಿದ ಅವರು, ಸಂವಿಧಾನದ ಆಶಯಗಳನ್ನು ಎತ್ತಿಹಿಡಿದ ಎಲ್ಲ ನಾಯಕರನ್ನೂ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಬಾಬಾಸಾಹೇಬ್ ಅಂಬೇಡ್ಕರ್ ಅವರ ಹೆಸರಿನಲ್ಲಿ ಅರ್ಥಪೂರ್ಣವಾಗಿ ಕಾರ್ಯಕ್ರಮ ಆಯೋಜಿಸಲಾಗುವುದು. ಸಂವಿಧಾನವು ಎಲ್ಲರೂ ಒಗ್ಗಟ್ಟಿನಿಂದ ಬದುಕಲು ಮಾರ್ಗದರ್ಶನ ನೀಡುವ ಅಮೂಲ್ಯ ಗ್ರಂಥವಾಗಿದೆ ಎಂದರು. ಸಂವಿಧಾನ ದಿನಾಚರಣೆಯ ಮತ್ತೊಂದು ಕಾರ್ಯಕ್ರಮ ಆಯೋಜಿಸುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಯಾರು ಆಚರಣೆ ಮಾಡುತ್ತಾರೆ ಅಥವಾ ಬಿಡುತ್ತಾರೆ ಎಂಬುದು ನಮಗೆ ಮುಖ್ಯವಲ್ಲ. ಸರ್ಕಾರದ ಅಧಿಕೃತ ಕಾರ್ಯಕ್ರಮದ ಮೇಲಷ್ಟೇ ಗಮನ ಹರಿಸುತ್ತೇವೆ ಎಂದು ಹೇಳಿದರು.

ಇನ್ನು ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಹಾಗೂ ಡಿ.ಕೆ. ಶಿವಕುಮಾರ್ ಅವರ ಫೋನ್ ಟ್ಯಾಪಿಂಗ್ ಆಗುತ್ತಿದೆ ಎಂಬ ಆರೋಪಗಳ ಕುರಿತು ಪ್ರತಿಕ್ರಿಯಿಸಿದ ಸಚಿವರು, ಈ ವಿಚಾರ ಅವರ ಅನುಭವಕ್ಕೆ ಬಂದಿರುವುದಾಗಿದೆ. ಈ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಮಾಹಿತಿ ಇಲ್ಲದೆ ಮಾತನಾಡುವುದು ಸರಿಯಲ್ಲ ಎಂದು ತಿಳಿಸಿದರು.

ಅಹಿಂದ ಸಮಾವೇಶದ ಕುರಿತು ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವೇ ಅಹಿಂದದ ಆಶಯಗಳನ್ನು ಹೊಂದಿದೆ. ಹಿಂದುಳಿದ ವರ್ಗಗಳು ಸೇರಿದಂತೆ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿ ಸಮಸಮಾಜ ನಿರ್ಮಿಸುವುದು ನಮ್ಮ ಉದ್ದೇಶ ಎಂದು ಹೇಳಿದರು.

ಇದೇ ವೇಳೆ ಮಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆಯ ವೆಚ್ಚದ ಕುರಿತು ಬಿಜೆಪಿ ವ್ಯಕ್ತಪಡಿಸಿರುವ ಆಕ್ಷೇಪಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸರ್ಕಾರ ಯಾರಿಗೂ ತ್ರಿಶೂಲ ಅಥವಾ ಶಸ್ತ್ರಾಸ್ತ್ರಗಳನ್ನು ಪೂರೈಸಿ ಜನರ ಭಾವನೆಗಳೊಂದಿಗೆ ಆಟವಾಡಿಲ್ಲ. ಕರಾವಳಿ ಭಾಗದಲ್ಲಿ ಅಭಿವೃದ್ಧಿ ಮತ್ತು ಮೂಲಸೌಕರ್ಯ ಕಲ್ಪಿಸುವ ಉದ್ದೇಶದಿಂದ ಸಚಿವ ಸಂಪುಟ ಸಭೆ ನಡೆಸಲಾಗಿದೆ. ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದು ಹಾಗೂ ನೈಸರ್ಗಿಕ ಸೌಂದರ್ಯವನ್ನು ಬಳಸಿಕೊಂಡು ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.



ಪ್ರಧಾನ ಮಂತ್ರಿಯವರ ಕಾರ್ಯಾಲಯ, ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಸಚಿವಾಲಯ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ಮಂಗಳವಾರ ನವದೆಹಲಿಯ ಐಎನ್‌ಎಸ್‌ಎ ಸಭಾಂಗಣದಲ್ಲಿ, ಭಗವಾನ್ ಬಿರ್ಸಾ ಮುಂಡಾ ಅವರ ಜನ್ಮದಿನದ ನೆನಪಿಗಾಗಿ ಆಯೋಜಿಸಲಾದ ಜನಜಾತಿಯ ಗೌರವ ದಿವಸ – ಬುಡಕಟ್ಟು ಸಬಲೀಕರಣಕ್ಕಾಗಿ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಎಂಬ ಪ್ರದರ್ಶನವನ್ನು ಉದ್ಘಾಟಿಸಿದರು.

ಪಿಎಂ ಮೋದಿ 25 ವರ್ಷಗಳ ಆಡಳಿತ

2047ರೊಳಗೆ 40 ಟ್ರಿಲಿಯನ್ ಡಾಲರ್ ಆರ್ಥಿಕತೆ ಗುರಿ ಇಟ್ಟ ನೀತಿ ಆಯೋಗ



ನವದೆಹಲಿ, ನ.17: ಪ್ರಧಾನಿ ನರೇ

ವಿಶ್ವಬ್ಯಾಂಕ್ ನೆರವಿನ ಕಾಮಗಾರಿಗಳಿಗೆ ಮಹದೇವಪುರ ವಿಧಾನಸಭಾ ಕ್ಷೇತ್ರದ ಗುಂಜೂರಿನಲ್ಲಿ ಶಂಕುಸ್ಥಾಪನೆ

ಬೆಂಗಳೂರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವುದು ಸರ್ಕಾರದ ಗುರಿ: ಸಿಎಂ ಡಿ.ಕೆ. ಶಿವಕುಮಾರ್

ಬೆಂಗಳೂರು, ನ.17: ಬೆಂಗಳೂರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವುದು ಸರ್ಕಾರದ ಗುರಿ. ನಗರದ ಅಭಿವೃದ್ಧಿಗೆ ಸರ್ಕಾರ ವಿಶೇಷ ಆದ್ಯತೆ ನೀಡಿದ್ದು, ಕಳೆದ ಮೂರು ವರ್ಷಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿಗೆ ಮಹತ್ವದ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಬೆಂಗಳೂರು ಇತಿಹಾಸದಲ್ಲಿ ಅಭಿವೃದ್ಧಿಗಾಗಿ ಹಿಂದೆಂದೂ ಇಷ್ಟೊಂದು ಪ್ರಮಾಣದ ಹಣ ಹೂಡಿಕೆ ಮಾಡಿರುವ ಉದಾಹರಣೆ ಇಲ್ಲ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಜಲ ಭದ್ರತೆ ಮತ್ತು ವಿಪತ್ತು ಸ್ಥಿತಿಸ್ಥಾಪಕತ್ವ ಕಾರ್ಯಕ್ರಮ ಅಡಿಯಲ್ಲಿ ಅಭಿವೃದ್ಧಿಗೊಳಿಸುತ್ತಿರುವ ನೀರುಗಾಲುವೆ ಮತ್ತು ಪ್ರವಾಹ ನಿಯಂತ್ರಣ ಕಾಮಗಾರಿಗಳಿಗೆ ಮಹದೇವಪುರ ವಿಧಾನಸಭಾ ಕ್ಷೇತ್ರದ ಗುಂಜೂರಿನಲ್ಲಿ ಮಂಗಳವಾರ ಶಂಕುಸ್ಥಾಪನೆ ನೆರವೇರಿಸಿ ಮಳೆ ಬಂದಾಗ ಹಲವು ಪ್ರದೇಶಗಳಲ್ಲಿ ನೀರು ನುಗ್ಗಿ ಜನರು ತೊಂದರೆ ಅನುಭವಿಸುತ್ತಿರು ವುದನ್ನು ಸರ್ಕಾರ ಗಮನಿಸಿದೆ. ಮಳೆಗಾಲದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸುಮಾರು 2,000 ಕೋಟಿ ರೂಪಾಯಿ ವೆಚ್ಚದಲ್ಲಿ ರಾಜಕಾಲುವೆ ಮತ್ತು ಮಳೆನೀರು ಚರಂಡಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇನ್ನೂ ಹಲವು ಪ್ರದೇಶಗಳಲ್ಲಿ ತಡೆಗೋಡೆ ನಿರ್ಮಾಣ ಹಾಗೂ ಒತ್ತುವರಿ ತೆರವು ಸೇರಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.



ಬೆಂಗಳೂರು ರಸ್ತೆ ಅಭಿವೃದ್ಧಿಗೆ ಹೊಸ ಗ್ರಿಡ್ ವ್ಯವಸ್ಥೆ: ಹಿಂದಿನ ಸರ್ಕಾರಗಳ ಅವಧಿಯಲ್ಲಿ ನಗರ ಯೋಜನೆಯಲ್ಲಿ ಆಗಿರುವ ಲೋಪಗಳನ್ನು ಸರಿಪಡಿಸುವ ಉದ್ದೇಶದಿಂದ ಬೆಂಗಳೂರು ನಗರದಲ್ಲಿ ರಸ್ತೆ ಗ್ರಿಡ್ ವ್ಯವಸ್ಥೆ ರೂಪಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ರಸ್ತೆ ಗ್ರಿಡ್‌ಗಳ ವ್ಯಾಪ್ತಿಯಲ್ಲಿ ಅನಿಯಂತ್ರಿತ ಕಟ್ಟಡ ನಿರ್ಮಾಣವಾಗದಂತೆ ಕ್ರಮ ಕೈಗೊಳ್ಳಲಾ ಗುವುದು ಎಂದು ಹೇಳಿದರು.

ಟನಲ್ ಯೋಜನೆಗೆ ಅಡ್ಡಿ ಒಳ್ಳೆ ಪ್ರವೃತ್ತಿಯಲ್ಲ: ಬೆಂಗಳೂರು ನಗರದ ಸಂಚಾರ ದಟ್ಟಣೆ ನಿವಾರಣೆಗೆ ಟನಲ್ ರಸ್ತೆ ಯೋಜನೆ ಕೈಗೆತ್ತಿಕೊಳ್ಳಲು ಸರ್ಕಾರ ಪ್ರಯತ್ನಿಸುತ್ತಿದೆ. ಅಭಿವೃದ್ಧಿ ಯೋಜನೆಗಳಿಗೆ ಅನಗತ್ಯ ಅಡ್ಡಿಪಡಿಸುವ ಪ್ರವೃತ್ತಿ ಸರಿಯಲ್ಲ. ನಗರದ ಅಭಿವೃದ್ಧಿಗೆ ಎಲ್ಲರೂ ಸಹಕಾರ ನೀಡಬೇಕು" ಎಂದು ಹೇಳಿದರು.

ಭೂಮಾಫಿಯಾ ವಿರುದ್ಧ ಕ್ರಮ: ಮಹದೇವಪುರ ಸೇರಿ ಬೆಂಗಳೂರಿಗೆ ಹೊರರಾಜ್ಯ ಹಾಗೂ ಹೊರ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬಂದು ವಾಸಿಸುತ್ತಿದ್ದಾರೆ. ಎಲ್ಲರನ್ನೂ ಒಳಗೊಳ್ಳುವ ರೀತಿಯಲ್ಲಿ ಅಭಿವೃದ್ಧಿ ಮಾಡಬೇಕಿದೆ. ಮೂಲ ಭೂಮಾಲೀಕರಿಗೆ ತೊಂದರೆ ನೀಡುವ ಪ್ರಕರಣಗಳು ತಮ್ಮ ಗಮನಕ್ಕೆ ಬಂದಿದ್ದು, ಇಂತಹ ಪ್ರಕರಣಗಳಲ್ಲಿ ಪೊಲೀಸ್ ಅಧಿಕಾರಿಗಳು ಹೆಚ್ಚಿನ ನಿಗಾ ವಹಿಸಬೇಕು. ಭೂಮಾಫಿಯಾಗಳೊಂದಿಗೆ ರಾಜಕಾರಣಿಗಳು ಹಾಗೂ ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವ ಆರೋಪ ಗಳ ಬಗ್ಗೆ ತನಿಖೆ ಮಾಡಬೇಕಾ ಗುತ್ತದೆ"

ಬೆಂಗಳೂರಿನಲ್ಲಿ 20 ಸಾವಿರ ಕೋಟಿ ರೂ. ಮೊತ್ತದ ಕಾಮಗಾರಿ:ನಮ್ಮ ಸರ್ಕಾರ ನಗರದ ರಸ್ತೆ ಮತ್ತು ಮೂಲ ಸೌಕರ್ಯ ಅಭಿವೃದ್ಧಿಗೂ ಸರ್ಕಾರ ಆದ್ಯತೆ ನೀಡಿದೆ. ಹೊಸ ರಸ್ತೆಗಳ ನಿರ್ಮಾಣ ಸೇರಿದಂತೆ ಬೆಂಗಳೂರಿನಲ್ಲಿ ಹೆಚ್ಚುಕಡಿಮೆ 20 ಸಾವಿರ ಕೋಟಿ ರೂಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳು ಪ್ರಸ್ತುತ ಪ್ರಗತಿಯಲ್ಲಿವೆ. ಮಳೆಗಾಲದಲ್ಲಿ ನೀರುಗಾಲುವೆ ಗಳನ್ನು ಅಭಿವೃದ್ಧಿಪಡಿಸುವುದರ ಜತೆಗೆ ಸಂಚಾರ ದಟ್ಟಣೆ ನಿವಾರಣೆಗೂ ಕ್ರಮ ಕೈಗೊಳ್ಳಲಾಗುತ್ತಿದೆ" ಎಂದರು.

500 ಕಿ.ಮೀ. ಮೆಟ್ರೋ ಜಾಲ ನಿರ್ಮಾಣ ಗುರಿ: ಮೆಟ್ರೋ ಅಭಿವೃದ್ಧಿ ಕುರಿತ ಪ್ರಶ್ನೆಗೆ, ಬೆಂಗಳೂರಿನ ಭವಿಷ್ಯದ ಸಂಚಾರ ವ್ಯವಸ್ಥೆಯನ್ನು ಗಮನದಲ್ಲಿಟ್ಟು ಕೊಂಡು ಮೆಟ್ರೋ ಜಾಲವನ್ನು ವಿಸ್ತರಿಸುವ ಗುರಿ ಹೊಂದಲಾಗಿದೆ. ನಗರದಲ್ಲಿ ಒಟ್ಟು 500 ಕಿ.ಮೀ. ಮೆಟ್ರೋಜಾಲ ನಿರ್ಮಿಸುವ ಉದ್ದೇಶವಿದೆ. ಈಗಾಗಲೇ ಸುಮಾರು 300 ಕಿಮೀ ಮಾರ್ಗದ ಪ್ರಸ್ತಾವನೆಗಳು ಅನುಮೋದನೆಯ ವಿವಿಧ ಹಂತದಲ್ಲಿವೆ. ಉಳಿದ ಮಾರ್ಗಗಳಿಗೂ ಹಂತಹಂತವಾಗಿ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲಾ ಗುವುದು" ಎಂದು ಸಿಎಂ ತಿಳಿಸಿದರು.

ನಮ್ಮದು ತ್ಯಾಗದ ಸಂಸ್ಕೃತಿಯಾದರೆ, ಪಾಶ್ಚಾತ್ಯರದು ಸಂಗ್ರಹ ಸಂಸ್ಕೃತಿ: ಬಸವರಾಜ ಬೊಮ್ಮಾಯಿ ಅಭಿಮತ

ಬೆಂಗಳೂರು, ನ.17: ಪಾಶ್ಚಿಮಾತ್ಯ ತತ್ವಜ್ಞಾನಿಗಳಿಗೆ ಇವತ್ತಿಗೂ ಭಾರತವನ್ನು ಪರಿಪೂರ್ಣವಾಗಿ ಅರ್ಥ ಮಾಡಿ ಕೊಳ್ಳಲು ಸಾಧ್ಯವಾಗಿಲ್ಲ. ಅವರ ಚಿಂತನೆ ನಮ್ಮ ಚಿಂತನೆಯೇ ಬೇರೆ, ಅವರು ವಿಜ್ಞಾನವನ್ನು ಆಳವಾಗಿ ಅಧ್ಯಯನ ಮಾಡಿದ್ದಾರೆ.

ನಾವು ಆಧ್ಯಾತ್ಮವನ್ನು ಹೆಚ್ಚು ಅಧ್ಯಯನ ಮಾಡಿದ್ದೇವೆ. ತ್ಯಾಗ ಮಾಡುವುದು ನಮ್ಮ ಸಂಸ್ಕೃತಿಯಾದರೆ, ಸಂಗ್ರಹ ಮಾಡುವುದು ಅವರ ಸಂಸ್ಕೃತಿ ಎಂದು ಮಾಜಿ ಮುಖ್ಯ ಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಮೈಸೂರು ಮತ್ತು ರಮಣಶ್ರೀ ಪ್ರತಿಷ್ಠಾನ ಬೆಂಗಳೂರು ಮತಿಯಿಂದ ಆಯೋಜಿಸಿದ್ದ ರಮಣಶ್ರೀ ಶರಣ ಪ್ರಶಸ್ತಿ ಪ್ರದಾನ ಹಾಗೂ ಎಸ್. ಷಡಕ್ಷರಿ ಅವರ ಕ್ಷಣ ಹೊತ್ತು ಅಣಿ ಮುತ್ತು ಭಾಗ–16 ಪುಸ್ತಕ ಬಿಡುಗಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪ್ರಶಸ್ತಿ ನೀಡಿ ಮಾತನಾಡಿದರು.

ಅಲೆಕ್ಸಾಂಡರ್‌ಗೆ ಅವನ ಗುರು ಅರಿಸ್ಟಾಟಲ್ ನೀನು ಭಾರತ ಗೆದ್ದರೆ ಜಗತ್ತು ಗೆದ್ದ ಹಾಗೆ ಅಂತ ಹೇಳಿದ. ಅಲೆಕ್ಸಾಂಡರ್ ಮೊದಲು ಒಬ್ಬ ತತ್ವಜ್ಞಾನಿಯನ್ನು ಕಳಿಸಿದ ಆತನಿಗೆ ಸಂತರು ಸಿಗುತ್ತಾರೆ. ಆತ ನಿಮಗೂ ನಮಗೂ ಏನು ವ್ಯತ್ಯಾಸ ಅಂತ ಕೇಳಿದಾಗ ಆಗ ಅವರು ನಿಮ್ಮ ರಾಜ ಇಡಿ ಜಗತ್ತು ಗೆಲ್ಲಲು ಹೊರಟಿದ್ದಾನೆ ಅದು ನಿಮ್ಮ ತತ್ವಜ್ಞಾನ, ನಾವು ಈಗ ನಿಂತಿರುವುದಷ್ಟೇ ನಮ್ಮದು ಇದು ನಮ್ಮ ತತ್ವಜ್ಞಾನ ಎಂದು ಹೇಳಿದರು. ತ್ಯಾಗ ಮಾಡುವುದು ನಮ್ಮ ಸಂಸ್ಕೃತಿ ಸಂಗ್ರಹ ಮಾಡುವುದು ಅವರ ಸಂಸ್ಕೃತಿ. ನಾವು ನಿಮಗಿಂತ ಸಂತೋಷವಾಗಿದ್ದೇವೆ ಹಲವಾರು ಚಿಂತನೆಗಳಿರುವ ಈ ದೇಶದಲ್ಲಿ ಹುಟ್ಟಿರುವ ನಾವು ಪುಣ್ಯವಂತರು. ಇಲ್ಲಿ ವಯಸ್ಸಾದ ಮೇಲೆ ಅನಾಥರಾ ಗುತ್ತಾರೆ. ಅಲ್ಲಿ ವಯಸ್ಸಿದ್ದಾಗಲೇ ಅನಾಥರಾಗುತ್ತಾರೆ ಎಂದು ಹೇಳಿದರು.



ರಮಣಶ್ರೀ ಶರಣ ಪ್ರಶಸ್ತಿ ಪ್ರದಾನ ಹಾಗೂ ಎಸ್. ಷಡಕ್ಷರಿ ಅವರ 'ಕ್ಷಣ ಹೊತ್ತು ಅಣಿ ಮುತ್ತು' ಭಾಗ–16 ಪುಸ್ತಕ ಬಿಡುಗಡೆ ಸಮಾರಂಭ

ಪ್ರತಿ ವರ್ಷ 'ಅಣಿ ಮುತ್ತು' ಕೃತಿಗಳನ್ನು ನಿರಂತರವಾಗಿ ಬರೆಯುತ್ತಾ ಬರುತ್ತಿರುವ ಎಸ್. ಷಡಕ್ಷರಿ ಅವರನ್ನು ಸದಾಕ್ಷರಿ ಎಂದು ಕರೆಯಬಹುದು. ಹಣದ ಹಿಂದೆ ಬರುವವರು ಅಂಕಿಗಳ ಜೊತೆ ಸಂಬಂಧವಿಟ್ಟುಕೊಂಡರೆ, ಷಡಕ್ಷರಿಯವರು ಅಕ್ಷರದ ಜೊತೆ ಶಾಶ್ವತ ಸಂಬಂಧವಿಟ್ಟುಕೊಂಡಿದ್ದಾರೆ. ಕರ್ತವ್ಯದ ಫಲವನ್ನು ಇತರಿಗೆ ಹಂಚಿದಾಗ ಅದು ಕಾಯಕವಾಗುತ್ತದೆ. ಷಡಕ್ಷರಿ ಅವರು ತಮ್ಮ ಕರ್ತವ್ಯವನ್ನು ಕಾಯಕವನ್ನಾಗಿ ಪರಿವರ್ತಿಸಿ ಕೊಂಡಿದ್ದಾರೆ. ಇವರಲ್ಲಿರುವ ಹಾಸ್ಯಪ್ರಜ್ಞೆ ಹಾಗೂ ನಿರಂತರ ಬರೆಯುವ ಕ್ರಿಯಾಶೀಲತೆಯಿಂದಾಗಿ ಅವರ ವಯಸ್ಸು ಯಾರಿಗೂ ಗೋಚರಿಸುವುದಿಲ್ಲ ಎಂದು ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದು ಪ್ರಶಸ್ತಿಗೆ ಭಾಜನರಾದ ಸಾಧಕರನ್ನು ರತ್ನಗಳು ಎಂದು ಬಣ್ಣಿಸಿ ಗೌರವಿಸ ಲಾಯಿತು. ಮಂಡ್ಯದ ಚಿನ್ಮಯ ಮಿಷನ್ ಸ್ವಾಮಿ ಆದಿತ್ಯಾನಂದಜಿ ವಹಿಸಿದ್ದರು. ಕೇಂದ್ರ ಸಚಿವ ವಿ. ಸೋಮಣ್ಣ ಪುಸ್ತಕ ಬಿಡುಗಡೆ ಮಾಡಿದರು, ಕಸಾಪ ಮಾಜಿ ಅಧ್ಯಕ್ಷ ಮನು ಬಳಿಗಾರ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿ. ಸೋಮಶೇಖರ, 'ವಿಶ್ವವಾಣಿ' ಸಂಪಾದಕರಾದ ವಿಶ್ವೇಶ್ವರ ಭಟ್, 'ಕನ್ನಡ ಪ್ರಭ' ಸಂಪಾದಕ ರವಿ ಹೆಗಡೆ ಸೇರಿದಂತೆ ಹಲವು ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಛಾಯಾಗ್ರಾಹಕ ವಿಶ್ವನಾಥ್ ಸುವರ್ಣಗೆ ಸಮಾನಮನಸ್ಕ ಪತ್ರಕರ್ತರ ಅಭಿನಂದನೆ



ಬೆಂಗಳೂರು, ನ.17: ಸುವರ್ಣ ರಾಜ್ಯೋತ್ಸವ ಮತ್ತು ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಹಿರಿಯ ವನ್ಯಜೀವಿ ಹಾಗೂ ಪತ್ರಿಕಾ ಛಾಯಾಗ್ರಾಹಕ ವಿಶ್ವನಾಥ ಸುವರ್ಣ ಅವರಿಗೆ ನಗರದ ಪ್ರೆಸ್‌ಕ್ಲಬ್‌ನಲ್ಲಿ ಸಮಾನಮನಸ್ಕ ಪತ್ರಕರ್ತ ಮಿತ್ರರು ಅಭಿನಂದಿಸಿದರು.

ಕರುನಾಡ ಕೋಟೆಗಳ ಸುವರ್ಣ ನೋಟ, ಗೋಲ್ಡನ್ ವ್ಯೂ ಆಫ್ ಕರ್ನಾಟಕ ಹಾಗೂ ಕನ್ನಡ ನಾಡಿನ ಬಣ್ಣದ ಬಾನಾಡಿಗಳು ಎಂಬ ಅಮೂಲ್ಯ ಕೃತಿಗಳ ಮೂಲಕ ನಾಡಿನಲ್ಲಿ ಮನೆಮಾತನಾಗಿರುವ ವಿಶ್ವನಾಥ್ ಸುವರ್ಣ ಅವರು ಕರ್ನಾಟಕ ಕಂಡಿರುವ ಅತ್ಯಂತ ಅಪರೂಪದ ಫೋಟೊ ಜರ್ನಲಿಸ್ಟ್, ಕರಾವಳಿಯ ಈ ಪ್ರತಿಭೆ ಒಂದು ಕಾಲದಲ್ಲಿ ವರನಟ ಡಾ.ರಾಜ್‌ಕುಮಾರ್, ನಟ ಶಂಕರ್‌ನಾಗ್, ರೆಬೆಲ್‌ಸ್ಟಾರ್ ಅಂಬರೀಷ್, ವಿಷ್ಣುವರ್ಧನ್ ಸೇರಿ ಮೇರು ನಟರೊಂದಿಗೆ ಬಹಳ ಹತ್ತಿರದ ಒಡನಾಟ ಹೊಂದಿದ್ದ ಛಾಯಾಗ್ರಾಹಕ. ನೇರ, ನಿಷ್ಠುರ ನುಡಿ ಹಾಗೂ ಪತ್ರಿಕೋದ್ಯಮದಲ್ಲಿ ತಾವು ಹೊಂದಿದ್ದ ಪ್ರಾಮಾಣಿಕತೆಯೇ ಅವರ ಪಾಲಿಗೆ ಸಾಕಷ್ಟು ಬಾರಿ ಮುಳುವಾಗಿಯೂ ಪರಿಣಮಿಸಿತ್ತು ಎಂದು ಅವರ ಒಡನಾಡಿಗಳು ಸ್ಮರಿಸಿಕೊಂಡಿದ್ದಾರೆ.

ಸಿದ್ದರಾಮಯ್ಯ, ಎಸ್.ಎಂ ಕೃಷ್ಣ ಅವರಿಂದ ಹಿಡಿದು ಇತ್ತೀಚಿನವರೆಲ್ಲ ಘಟಾನುಘಟಿ ರಾಜಕಾರಣಿಗಳನ್ನು ಕೂಡ ಬಹಳ ಹತ್ತಿರದಿಂದ ನೋಡಿದವರು. ಛಾಯಾಚಿತ್ರ ಹಾಗೂ ಫೋಟೊ ಜರ್ನಲಿಸ್ಟ್ ಆಗಿ ಸುವರ್ಣ ಇಡೀ ಕರ್ನಾಟಕದಲ್ಲಿ ಸುತ್ತಾಡಿ ಅಪರೂಪದ ಕೋಟೆಗಳನ್ನು ತಮ್ಮ ಕ್ಯಾಮರಾದಲ್ಲಿ ಸೆರೆ ಹಿಡಿದಿದ್ದಾರೆ. ಒಬ್ಬ ಛಾಯಾಗ್ರಾಹಕನಾಗಿ ಸುವರ್ಣ ಅವರು ಕರ್ನಾಟಕದ ಬಹಳಷ್ಟು ಆಗುಹೋಗುಗಳಿಗೆ ಸಾಕ್ಷಿಪ್ರಜ್ಞೆ ಅಂದರೂ ತಪ್ಪಾಗಲಾರದು.

ಹೀಗೆ, ಸದ್ದಿಲ್ಲದೆ ದಶಕಗಳ ಕಾಲ ಕ್ಯಾಮರಾ ಕೈಯಲ್ಲಿ ಹಿಡಿದುಕೊಂಡು ನಾಡಿನ ಮೂಲೆ–ಮೂಲೆ ಓಡಾಡಿರುವ ವಿಶ್ವನಾಥ ಸುವರ್ಣ ಅವರಿಗೆ ಇದೀಗ 20026ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿ ಲಭಿಸಿರುವುದು ಅವರ ಅಭಿಮಾನಿಗಳು, ಹಿರಿಯ ಮತ್ತು ಕಿರಿಯ ಸ್ನೇಹಿತರಿಗೆ ಸಂತಸ ತಂದಿದೆ. ಇಂದು ಸುವರ್ಣ ಅವರ ಸರಳ, ನೇರ ನಡೆ, ನುಡಿ, ಪ್ರಮಾಣಿಕತೆಯನ್ನು ಕೊಂಡಾಡಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಮಾಜಿ ಅಧ್ಯಕ್ಷ ಎಂ.ಎ. ಪೊನ್ನಪ್ಪ, ಮಾಧ್ಯಮ ಅಕಾಡೆಮಿ ಸದಸ್ಯ ಕೆ. ವೆಂಕಟೇಶ್, ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷ ರಮೇಶ್ ಪಾಳ್ಯ, ಬೆಂಗಳೂರು ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಯಕುಮಾರ್ ಗೌಡ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿಯ ವಿಶೇಷ ಆಹ್ವಾನಿತರಾದ ವೈ.ಎಸ್.ಎಲ್. ಸ್ವಾಮಿ, ಬಿಯುಡಬ್ಲ್ಯುಜೆ ಕಾರ್ಯಕಾರಿ ಸಮಿತಿ ಸದಸ್ಯ ಗಂಡಸಿ ಸದಾನಂದ ಸ್ವಾಮಿ, ಹಿರಿಯ ಪತ್ರಕರ್ತರ ವೇದಿಕೆಯ ಉಪಾಧ್ಯಕ್ಷ ಸೋಮ ಸುಂದರ ರೆಡ್ಡಿ, ಗಿರೀಶ್ ಕೋಟೆ, ಮಂಜುನಾಥ್ ಅದ್ದೆ, ನಂಜುಂಡಪ್ಪ ವಿ, ಧ್ಯಾನ್ ಪೂಣಚ್ಚ, ಅಭಿಮನ್ಯು ರಮೇಶ್ ಇದ್ದರು.

ಸಂಪೂರ್ಣ ಕಾಗದರಹಿತ ಆಸ್ತಿ ನೋಂದಣಿ ವ್ಯವಸ್ಥೆ ಜಾರಿಗೆ ಸರ್ಕಾರ ಸಜ್ಜು

ಬೆಂಗಳೂರು, ನ.17: ಸೈಟು, ಮನೆ ಅಥವಾ ಕೃಷಿ ಜಮೀನು ನೋಂದಣಿ ಮಾಡಿಸಲು ಕಾಗದ–ಪತ್ರಗಳ ಕಂತೆಗಳನ್ನು ಹೊತ್ತುಕೊಂಡು ಸಬ್ ರಿಜಿಸ್ಟ್ರಾರ್ ಕಚೇರಿಗಳಿಗೆ ಅಲೆಯುವ ಕಿರಿಕಿರಿಗೆ ಇನ್ನು ಮುಂದೆ ಮುಕ್ತಿ ಸಿಗಲಿದೆ. ಆಸ್ತಿ ನೋಂದಣಿ ವ್ಯವಸ್ಥೆಯಲ್ಲಿ ಐತಿಹಾಸಿಕ ಆಡಳಿತ ಸುಧಾರಣೆಗೆ ಮುಂದಾಗಿರುವ ಕರ್ನಾಟಕ ಸರ್ಕಾರ, ದೇಶದಲ್ಲೇ ಮೊದಲ ಬಾರಿಗೆ ಸಂಪೂರ್ಣ ಕಾಗದರಹಿತ ಆಸ್ತಿ ನೋಂದಣಿ ವ್ಯವಸ್ಥೆಯನ್ನು ಜಾರಿಗೆ ತರಲು ಸಜ್ಜಾಗಿದೆ.

ಕಳೆದ 7 ತಿಂಗಳಿಂದ ಚಾಮರಾಜ ನಗರದಲ್ಲಿ ಯಾವುದೇ ತಕರಾರಿಲ್ಲದೆ ಶೇ.100ರಷ್ಟು ಯಶಸ್ವಿಯಾಗಿ ಕಾರ್ಯನಿರ್ವಹಿಸಿರುವ ಪೈಲಟ್ ಪ್ರಾಜೆಕ್ಟ್‌ನ ಅಭೂತಪೂರ್ವ ಯಶಸ್ಸಿನ ಬೆನ್ನಲ್ಲೇ, 2027ರ ಜನವರಿ 1ರೊಳಗೆ ರಾಜ್ಯದ ಎಲ್ಲಾ 31 ಜಿಲ್ಲೆಗಳ 256 ಉಪ ನೋಂದಣಾಧಿಕಾರಿ (ಸಬ್ ರಿಜಿಸ್ಟ್ರಾರ್) ಕಚೇರಿಗಳಿಗೂ ಈ ಡಿಜಿಟಲ್ ವ್ಯವಸ್ಥೆಯನ್ನು ವಿಸ್ತರಿಸುವ ಗುರಿಯನ್ನು ಸರ್ಕಾರ ಪ್ರಕಟಿಸಿದೆ. ಆಸ್ತಿ ನೋಂದಣಿಯನ್ನು ನೂರಕ್ಕೆ ನೂರರಷ್ಟು ಕಾಗದರಹಿತ ಗೊಳಿಸಿದ ದೇಶದ ಮೊದಲ ರಾಜ್ಯವಾಗಿ ಕರ್ನಾಟಕ ಹೊರಹೊಮ್ಮಲಿದೆ.

ಪ್ರಮುಖ ಅಂಶಗಳು

ಕಾವೇರಿ 2.0 ಕ್ರಾಂತಿ: ಆಧಾರ್ ಆಧಾರಿತ ಇ–ಸೈನ್ ಮತ್ತು ಕಾವೇರಿ 2.0 ಪೋರ್ಟಲ್ ಮೂಲಕವೇ ಸಂಪೂರ್ಣ ಪ್ರಕ್ರಿಯೆ.

ಕಾವೇರಿ 2.0 ಪೋರ್ಟಲ್ ಮೂಲಕವೇ ಪ್ರಕ್ರಿಯೆ ಆಸ್ತಿ ನೋಂದಣಿಗಾಗಿ ಕಚೇರಿಗೆ ಅಲೆದಾಡುವ ಕಿರಿಕಿರಿಗೆ ಮುಕ್ತಿ

ಆನ್‌ಲೈನ್ ಕರಡು ಸಲ್ಲಿಕೆ: ನಾಗರಿಕರು ಕಾಗದದ ದಾಖಲೆಗಳನ್ನು ಹಿಡಿದು ಕಚೇರಿಗೆ ಹೋಗುವ ಅಗತ್ಯವಿಲ್ಲ. ಕಾವೇರಿ 2.0 ಪೋರ್ಟಲ್‌ನಲ್ಲಿ ಆಸ್ತಿ ದಸ್ತಾವೇಜಿನ ಕರಡನ್ನು ಅಪ್‌ಲೋಡ್ ಮಾಡಬೇಕು.

ಅಪ್‌ಲೋಡ್ ಆದ ತಕ್ಷಣವೇ ಸಂಬಂಧಪಟ್ಟ ಸಬ್ ರಿಜಿಸ್ಟ್ರಾರ್ ಆನ್‌ಲೈನ್‌ನಲ್ಲೇ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸುತ್ತಾರೆ. ಹೆಸರು, ಸರ್ವೇ ನಂಬರ್ ಇತ್ಯಾದಿಗಳಲ್ಲಿ ಲೋಪದೋಷಗಳಿದ್ದರೆ ನೋಂದಣಿಗೆ ಮುನ್ನವೇ ಆನ್‌ಲೈನ್‌ನಲ್ಲೇ ಸರಿಪಡಿಸಲು ಅರ್ಜಿದಾರರಿಗೆ ಹಿಂತಿರುಗಿಸಲಾಗುತ್ತದೆ. ಇದರಿಂದ ಕಚೇರಿಯಲ್ಲಿ ರಿಜಿಸ್ಟ್ರೇಷನ್ ರದ್ದಾಗುವ ಭೀತಿ ಇರುವುದಿಲ್ಲ.

ಕಕ್ಷಿದಾರರು ಹಾಗೂ ಸಾಕ್ಷಿಗಳು ಪೆನ್ನಿನಿಂದ ಸಹಿ ಮಾಡುವ ಬದಲು, ಆಧಾರ್ ಆಧಾರಿತ ಇ–ಸೈನ್ ಅಥವಾ ಡಿಜಿಟಲ್ ಸಿಗ್ನೇಚರ್ ಮೂಲಕ ಕೆಲವೇ ಸೆಕೆಂಡ್‌ಗಳಲ್ಲಿ ಸಹಿ ಪ್ರಕ್ರಿಯೆ ಮುಗಿಸಬಹುದು.

ಸಬ್ ರಿಜಿಸ್ಟ್ರಾರ್ ಕಚೇರಿಗೆ ಕೇವಲ ಐಡಿ ವೆರಿಫಿಕೇಶನ್‌ಗಾಗಿ (ಗುರುತು ದೃಢೀಕರಣ) ಮಾತ್ರ ಹೋಗಬೇಕಾಗುತ್ತದೆ. ಅಲ್ಲಿ ಕಕ್ಷಿದಾರರ ಲೈವ್ ಫೋಟೋ ಮತ್ತು ಬಯೋಮೆಟ್ರಿಕ್ ಬೆರಳಚ್ಚು ಪಡೆದು ಕೆಲವೇ ನಿಮಿಷಗಳಲ್ಲಿ ನೋಂದಣಿ ಪ್ರಕ್ರಿಯೆ ಪೂರ್ಣ ಗೊಳಿಸಲಾಗುತ್ತದೆ.

ನೋಂದಣಿ ಪ್ರಕ್ರಿಯೆ ಮುಗಿದ ಬಳಿಕ ನಾಗರಿಕರು ತಮ್ಮ ಆಸ್ತಿ ಪತ್ರವನ್ನು ಮನೆಯಲ್ಲೇ ಕುಳಿತು ಆನ್‌ಲೈನ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಭ್ರಷ್ಟಾಚಾರಕ್ಕೆ ಬ್ರೇಕ್, ದಾಖಲೆಗಳು ನಾಶವಾಗುವ, ತಿದ್ದುವ ಅಪಾಯವಿಲ್ಲ

ಕೆಪಿಎಸ್‌ಸಿ ನೇಮಕಾತಿ ಹಗರಣ

ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ನಿಯಮ ಸರಳೀಕರಣಕ್ಕೆ ಆಗ್ರಹ



ಕಲಬುರಗಿ, ನ. 17: ಖಾಸಗಿ ಶಾಲೆಗಳ ಮಾನ್ಯತೆ ನವೀಕರಣದ ಸಮಸ್ಯೆಗಳಿಗೆ ತುರ್ತು ಪರಿಹಾರ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ನಿಯಮಗಳನ್ನು ಸರಳೀಕರಣ ಗೊಳಿಸಬೇಕು ಎಂದು ಮಾನ್ಯತೆ ಪಡೆದ ಅನುದಾನರಹಿತ ಖಾಸಗಿ ಶಾಲೆಗಳ ಸಂಘದ (ರೂಪಸಾ) ರಾಜ್ಯಾಧ್ಯಕ್ಷ ಶಶಿಧರ್ ದಿಂಡೂರ್ ಒತ್ತಾಯಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘವು ರಾಜ್ಯದ ಖಾಸಗಿ ಶಾಲೆಗಳ ಅಭಿವೃದ್ಧಿ, ಶೈಕ್ಷಣಿಕ ಗುಣಮಟ್ಟದ ಸುಧಾರಣೆ ಹಾಗೂ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳ ಪರಿಹಾರಕ್ಕಾಗಿ ನಿರಂತರ ವಾಗಿ ಶ್ರಮಿಸುತ್ತಿದೆ. ಪ್ರಸ್ತುತ ಖಾಸಗಿ ಶಾಲೆಗಳು ಎದುರಿಸುತ್ತಿರುವ ಆಡಳಿತಾತ್ಮಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು, ಸೂಕ್ತ ಪರಿಹಾರಕ್ಕಾಗಿ ಒತ್ತಾಯಿಸುತ್ತೇವೆ ಎಂದರು.

ಖಾಸಗಿ ಶಾಲೆಗಳ ಮಾನ್ಯತೆ ನವೀಕರಣದ ಸಮಸ್ಯೆಗಳಿಗೆ ತುರ್ತು ಪರಿಹಾರ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಪದೇಪದೇ ಹೊರಡಿಸಲಾಗುತ್ತಿರುವ ಸುತ್ತೋಲೆಗಳು, ಅನುಷ್ಠಾನಕ್ಕೆ ಕಷ್ಟಕರ ಷರತ್ತುಗಳು ಹಾಗೂ ಇಲಾಖಾ ಹಂತದಲ್ಲಿನ ಕೆಲವು ದೋಷಮತ್ತು ವಿಳಂಬಗಳಿಂದಾಗಿ ಅನೇಕ ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ಬಾಕಿಯಾಗಿದೆ. ಇದರಿಂದ ಆರ್‌ಟಿಇ ಶುಲ್ಕ ಮರುಪಾವತಿ ಪಡೆಯುವಲ್ಲಿ ಹಾಗೂ ಹತ್ತನೇ ತರಗತಿ ವಿದ್ಯಾರ್ಥಿಗಳ ಪರೀಕ್ಷಾ ನೋಂದಣಿ ಮತ್ತು ಸಂಬಂಧಿತ ಪ್ರಕ್ರಿಯೆಗಳಲ್ಲಿ ತೊಂದರೆಗಳು ಉಂಟಾಗುತ್ತಿವೆ.

ಆದ್ದರಿಂದ ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ಆದ್ಯತೆಯಾಗಿ ಪರಿಗಣಿಸಿ, ಅಗತ್ಯ ಮಾನದಂಡ ಗಳನ್ನು ಸರಳೀಕರಿಸಿ, ನಿಯಮಾನು ಸಾರ ಸಡಿಲಿಕೆ ನೀಡಿ, ಕಾಲಮಿತಿ ಯೊಳಗೆ ಮಾನ್ಯತೆ ನವೀಕರಣಕ್ಕೆ ಅವಕಾಶ ಕಲ್ಪಿಸಬೇಕೆಂದು ಅವರು ಒತ್ತಾಯಿಸಿದರು.

ಗ್ರಾಮೀಣ ಕೃಪಾಂಕ ನೀಡುವ ವಿಚಾರದಲ್ಲಿ ಖಾಸಗಿ ಶಾಲಾ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತದೆ ಎಂಬ ಸಂಘದ ಆಕ್ಷೇಪವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು.

ಸಮಾನ ಅವಕಾಶ ಮತ್ತು ಸಂವಿಧಾನಾತ್ಮಕ ಸಮಾನತೆಯ ತತ್ವಗಳಿಗೆ ಅನುಗುಣವಾಗಿ ಸಂಬಂಧಿತ ನಿಯಮ ತಿದ್ದುಪಡಿಯನ್ನು ಮರು ಪರಿಶೀಲಿಸಿ, ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಬೇಕು. ಖಾಸಗಿ ಶಾಲೆಗಳ ಸುಧಾರಣೆಗೆ ಸಂಬಂಧಿಸಿದಂತೆ ಇತ್ತೀಚೆಗೆ ವಿಧಾನಪರಿಷತ್ ಸಮಿತಿ ನೀಡಿರುವ ಶಿಫಾರಸುಗಳನ್ನು ಸರ್ಕಾರ ಯಥಾವತ್ತಾಗಿ ಅಂಗೀಕರಿಸಿ, ಅನುಷ್ಠಾನಕ್ಕೆ ಅಗತ್ಯ ಆದೇಶಗಳನ್ನು ಹೊರಡಿಸಬೇಕು ಎಂದು ಅವರು ಆಗ್ರಹಿಸಿದರು.

ಅರ್ಹ ಮಕ್ಕಳಿಗೆ ಖಾಸಗಿ ಶಾಲೆಗಳಲ್ಲಿ ಶಿಕ್ಷಣ ಪಡೆಯಲು ಅವಕಾಶ ಕಲ್ಪಿಸುವ ಆರ್‌ಟಿಇ ಪ್ರವೇಶ ವ್ಯವಸ್ಥೆಯನ್ನು ಮರುಸ್ಥಾಪಿಸಬೇಕು. ಶಾಲೆಗಳಿಗೆ ಪಾವತಿಸಬೇ ಕಾದ ಬಾಕಿ ಶುಲ್ಕ ಮರುಪಾವತಿ ಮೊತ್ತವನ್ನು ತಕ್ಷಣ ಬಿಡುಗಡೆ ಮಾಡಿ, ಮುಂದಿನ ಪಾವತಿಗಳಿಗೆ ನಿಗದಿತ ಕಾಲಮಿತಿ ಯನ್ನು ರೂಪಿಸಬೇಕು ಎಂದು ಒತ್ತಾಯಿಸಿದ ಅವರು, ಖಾಸಗಿ ಶಾಲೆಗಳ ಆರ್ಥಿಕಸ್ಥಿತಿ, ಸಂಪನ್ಮೂಲ ಹಾಗೂ ಸ್ವಯಂ ಸಮ್ಮತಿಯನ್ನು ಪರಿಗಣಿಸದೆ ಶಾಲಾ ದತ್ತು ಯೋಜನೆಯ ಹೊಣೆಗಾರಿಕೆ ಯನ್ನು ಒತ್ತಾಯಪೂರ್ವಕವಾಗಿ ಹೇರುವ ಕ್ರಮವನ್ನು ಸಂಘ ಖಂಡಿಸುತ್ತದೆ.

ಈ ಯೋಜನೆ ಸ್ವಯಂ ಪ್ರೇರಿತವಾಗಿರಬೇಕು ಮತ್ತು ಖಾಸಗಿ ಶಾಲೆಗಳ ಮೇಲೆ ಹೆಚ್ಚುವರಿ ಆಡಳಿತಾತ್ಮಕ ಅಥವಾ ಆರ್ಥಿಕ ಹೊರೆಯಾಗಬಾರದು ಎಂದರು.

ಪಠ್ಯಪುಸ್ತಕಗಳ ಲಭ್ಯತೆ ಹಾಗೂ ಸಕಾಲಿಕ ಪೂರೈಕೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಬೇಕು. ವಿದ್ಯಾರ್ಥಿಗಳ ಕಲಿಕೆಗೆ ಅಡಚಣೆ ಯಾಗದಂತೆ ಶೈಕ್ಷಣಿಕ ವರ್ಷದ ಆರಂಭದಲ್ಲಿಯೇ ಅಗತ್ಯ ಪಠ್ಯಪುಸ್ತಕಗಳು ದೊರೆಯುವ ವ್ಯವಸ್ಥೆಯನ್ನು ಖಚಿತಪಡಿಸಬೇಕು ಎಂದು ಅವರು ಆಗ್ರಹಿಸಿದರು.



ಹುಬ್ಬಳ್ಳಿಯಲ್ಲಿ ಮಂಗಳವಾರ ಎಬಿವಿಪಿ ಕಾರ್ಯಕರ್ತರು ಅರಾಜಕತೆಯನ್ನು ಉಳಿಸಿ, ಪ್ರಜಾಪ್ರಭುತ್ವವನ್ನು ಉಳಿಸಿ' ಎಂಬ ಘೋಷಣೆಯೊಂದಿಗೆ ರ‍್ಯಾಲಿ ನಡೆಸಿದರು.

ಸೌಜನ್ಯ ಕೊಲೆ ಪ್ರಕರಣ: ಎಸ್‌ಐಟಿ ತನಿಖೆ ಚುರುಕು
ವೈಜ್ಞಾನಿಕ, ತಾಂತ್ರಿಕ ಅಂಶ ಪರಿಶೀಲನೆಗೆ ಮೆಡಿಕಲ್ ಬೋರ್ಡ್ ರಚನೆ

ಬೆಳ್ತಂಗಡಿ, ನ.17: ರಾಜ್ಯಾದ್ಯಂತ ತೀವ್ರ ಕುತೂಹಲ ಕೆರಳಿಸಿರುವ ಬೆಳ್ತಂಗಡಿ ತಾಲೂಕಿನ ಪಾಂಗಳದ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ತನಿಖೆಯನ್ನು ಎಸ್‌ಐಟಿ ಮತ್ತಷ್ಟು ಚುರುಕುಗೊಳಿಸಿದೆ. ಪ್ರಕರಣದ ವೈಜ್ಞಾನಿಕ ಹಾಗೂ ತಾಂತ್ರಿಕ ಅಂಶ ಗಳನ್ನು ಪರಿಶೀಲಿಸಲು ಎಸ್‌ಐಟಿ ಮುಖ್ಯಸ್ಥ ಚೇತನ್ ಸಿಂಗ್ ರಾಠೋಡ್ ಅವರು ಇದೀಗ ಮೂವರು ನುರಿತ ವಿಧಿವಿಜ್ಞಾನ ವೈದ್ಯರನ್ನೊಳಗೊಂಡ ವಿಶೇಷ 'ಮೆಡಿಕಲ್ ಬೋರ್ಡ್' ರಚನೆ ಮಾಡಿದ್ದಾರೆ.

ಈ ತಂಡದಲ್ಲಿ ಬೆಂಗಳೂರು, ಹಾವೇರಿ ಮತ್ತು ಬೆಳಗಾವಿಯ ತಲಾ ಒಬ್ಬೊಬ್ಬ ತಜ್ಞ ವೈದ್ಯರಿದ್ದು, ಓರ್ವ ಮಹಿಳಾ ವೈದ್ಯೆ ಹಾಗೂ ಇಬ್ಬರು ಪುರುಷ ವೈದ್ಯರನ್ನು ಒಳಗೊಂಡಿದೆ ಎಂದು ಎಸ್‌ಐಟಿ ಮುಖ್ಯಸ್ಥರು ಮಾಹಿತಿ ನೀಡಿದ್ದಾರೆ.ಈ ನೂತನ ಮೆಡಿಕಲ್ ಬೋರ್ಡ್ ತಂಡವು ಶೀಘ್ರದಲ್ಲೇ ಸೌಜನ್ಯ ಶವ ಪತ್ತೆಯಾಗಿದ್ದ ಧರ್ಮಸ್ಥಳದ ನೇತ್ರಾವತಿ ಸ್ನಾನಘಟ್ಟದ ಮಣ್ಣಸಂಕದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಿದೆ.

ಘಟನೆ ನಡೆದ ಸಂದರ್ಭದಲ್ಲಿ ಶವ ಪತ್ತೆಯಾದ ಜಾಗದಲ್ಲಿ ತೆಗೆಯಲಾಗಿದ್ದ ಫೋಟೋ ಮತ್ತು



ವಿಡಿಯೋ ದಾಖಲೆಗಳನ್ನು ಹಿಡಿದು, ಅದೇ ಸ್ಥಳದಲ್ಲಿ ನಿಂತು ವೈದ್ಯರ ತಂಡವು ಸೂಕ್ಷ್ಮವಾಗಿ ವಿಶ್ಲೇಷಣೆ ನಡೆಸಲಿದೆ. ಮೆಡಿಕಲ್ ಬೋರ್ಡ್‌ನ ಈ ಸ್ಥಳ ಪರಿಶೀಲನೆ ಮತ್ತು ವರದಿಯು ಪ್ರಕರಣದ ಮುಂದಿನ ತನಿಖೆಯಲ್ಲಿ ಅತ್ಯಂತ ನಿರ್ಣಾಯಕ ಪಾತ್ರ ವಹಿಸಲಿದೆ.

ಕ್ಲಸ್ಟರ್ ಕಿಚನ್‌ಗೆ ವಿರೋಧ: ಜಿಪಂ ಕಚೇರಿ ಎದುರು ಅಕ್ಷರದಾಸೋಹ ನೌಕರರ ಪ್ರತಿಭಟನೆ

ಕಲಬುರಗಿ, ನ. 17: ರಾಜ್ಯ ಸರ್ಕಾರವು ಕ್ಲಸ್ಟರ್ ಕಿಚನ್ (ಕೇಂದ್ರೀಕೃತ ಅಡುಗೆಮನೆ) ಸ್ಥಾಪಿಸುವ ಚಿಂತನೆ ಕೈಬಿಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಜಿಲ್ಲಾ ಸಮಿತಿಯಿಂದ ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು. ನಗರದ ಜಗತ್ ವೃತ್ತದಲ್ಲಿ ಜಮಾಯಿಸಿದ ನೂರಾರು ಬಿಸಿಯೂಟ ನೌಕರರು ಜಿಲ್ಲಾ ಪಂಚಾಯಿತಿ ಕಚೇರಿ ತನಕ ಪ್ರತಿಭಟನಾ ಮೆರವಣಿಗೆ ನಡೆಸಿದರು. ಬಳಿಕ ಜಿಲ್ಲಾ ಪಂಚಾಯಿತಿ ಸಿಇಒ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ರವಾನಿಸಿದರು. ಬಿಸಿಯೂಟ ಯೋಜನೆಯ ಜಿಲ್ಲಾ ಅಧಿಕಾರಿ ಈಶ್ವರ ನಿರಡಗಿ, ಜಿಲ್ಲಾ ಪಂಚಾಯಿತಿ ಲೆಕ್ಕಾಧಿಕಾರಿ ಪ್ರಕಾಶ ಜಾಧವ ಮನವಿ ಸ್ವೀಕರಿಸಿದರು. ಬಿಸಿಯೂಟ ಯೋಜನೆಯನ್ನು ಕ್ಲಸ್ಟರ್ ಕಿಚನ್‌ಗೆ ವಹಿಸುವ ಕುರಿತು ಅಭಿಪ್ರಾಯ ತಿಳಿಸುವಂತೆ ಪಿಎಂ ಪೋಷಣ್ ಶಕ್ತಿ ನಿರ್ಮಾಣ ಶಾಲಾ ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರು ನ.7ರಂದು ಎಲ್ಲ ಜಿಲ್ಲೆಗಳ ಡಿಡಿಪಿಐಗಳು, ಶಿಕ್ಷಣ ಇಲಾಖೆ ಅಧಿಕಾರಿಗಳ ಅಭಿಪ್ರಾಯ ಕೇಳಿದ್ದಾರೆ. ಮಕ್ಕಳ ಆರೋಗ್ಯ, ಪೌಷ್ಟಿಕಾಂಶಶಾಲೆಗೆ ಹಾಜರಾತಿಯನ್ನು ಹೆಚ್ಚಿಸುವ ಈ ಮಹತ್ತರ ಯೋಜನೆ ಖಾಸಗಿಯವರಿಗೆ ಅಥವಾ ಕ್ಲಸ್ಟರ್ ಕಿಚನ್‌ಗೆ ವಹಿಸುವುದು ಸರಿಯಲ್ಲ' ಎಂದು ಪ್ರತಿಭಟನಕಾರರು ಅಸಮಾಧಾನ ವ್ಯಕ್ತಪಡಿಸಿದರು.

ಸೋನಿಯಾ ಪುಸ್ತಕ ಓದುವ ಆಸಕ್ತಿ ಇಲ್ಲ ಸಂಸದ ಯದುವೀರ್ ಒಡೆಯರ್ ಸ್ಪಷ್ಟನೆ

ಮೈಸೂರು, ನ.17: ಸೋನಿಯಾ ಗಾಂಧಿ ಅವರ ಆತ್ಮಚರಿತ್ರೆ ಪುಸ್ತಕ ಓದುವ ಆಸಕ್ತಿ ತನಗಿಲ್ಲ ಎಂದು ಸಂಸದ ಯದುವೀರ್ ಒಡೆಯರ್ ಹೇಳಿದ್ದಾರೆ. ಪುಸ್ತಕದಲ್ಲಿ ಅರ್ಧ ಸತ್ಯ, ಅರ್ಧ ಸುಳ್ಳು ಇರಬಹುದು. ಅದು ಕಾಂಗ್ರೆಸ್‌ನ ಇತಿಹಾಸವೇ ಆಗಿದೆ ಎಂದು ವ್ಯಂಗ್ಯವಾಡಿದ್ದಾರೆ.

ಮೈಸೂರಿನಲ್ಲಿ ಮಾತನಾಡಿದ ಅವರು, 'ನನಗೆ ಓದಲು ಬೇರೆ ಪುಸ್ತಕಗಳಿವೆ. ಸೋನಿಯಾ ಗಾಂಧಿ ಅವರ ಆತ್ಮಚರಿತ್ರೆ ಓದುವ ಅಗತ್ಯವಿಲ್ಲ. ಕಾಂಗ್ರೆಸ್ ನಾಯಕರು ಇಂತಹ ಪುಸ್ತಕಗಳನ್ನು ಓದುವುದಕ್ಕಿಂತ ನ್ಯೂಸ್ ಚಾನಲ್‌ಗಳನ್ನು ನೋಡಲಿ. ಆಗ ಬಿಜೆಪಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳ ಬಗ್ಗೆ ಅವರಿಗೆ ತಿಳಿಯುತ್ತದೆ' ಎಂದು ಹೇಳಿದ್ದಾರೆ.

ಬಿಜೆಪಿ ಅಭಿವೃದ್ಧಿ ಕಾರ್ಯಗಳ ಕುರಿತು ಟೀಕೆ ಮಾಡುತ್ತಿರುವ ಕಾಂಗ್ರೆಸ್ ನಾಯಕರಿಗೆ ಈ ಮೂಲಕ ತಿರುಗೇಟು ನೀಡಿದ್ದಾರೆ.ಇದೇ ವೇಳೆ, ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ತಾವು ಆಕಾಂಕ್ಷಿಯೇ



ಎಂಬ ಪತ್ರಕರ್ತರ ಪ್ರಶ್ನೆಗೆ ಯದುವೀರ್ ಅಚ್ಚರಿ ವ್ಯಕ್ತಪಡಿಸಿದರು. ನಾನು ರಾಜ್ಯಾಧ್ಯಕ್ಷನಾ ಎಂದು ಮರುಪ್ರಶ್ನಿಸಿದ ಅವರು, ಆ ಸ್ಥಾನಕ್ಕೆ ಸೂಕ್ತ ಅರ್ಹತೆ ಮತ್ತು ಸಾಮರ್ಥ್ಯ ಹೊಂದಿರುವವರನ್ನು ಪಕ್ಷ ಆಯ್ಕೆ ಮಾಡಲಿದೆ. ಈ ಬಗ್ಗೆ ಹೈಕಮಾಂಡ್ ಅಂತಿಮ ತೀರ್ಮಾನ ಕೈಗೊಳ್ಳುತ್ತದೆ ಎಂದರು.

ಯಾರೇ ಅಧ್ಯಕ್ಷರಾದರೂ ಸ್ವಾಗತ


ಪ್ರಸ್ತುತ ರಾಜ್ಯಾಧ್ಯಕ್ಷರು ಮುಂದುವರಿದರೂ ಸಂತೋಷ, ಬೇರೆ ಯಾರೇ ಆ ಸ್ಥಾನಕ್ಕೆ ಬಂದರೂ ಸ್ವಾಗತ ಎಂದು ಹೇಳಿದ ಯದುವೀರ್, ಹೊಸ ಅಧ್ಯಕ್ಷರು ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ಆದ್ಯತೆ ನೀಡಬೇಕು ಎಂದು ಅಭಿಪ್ರಾಯಪಟ್ಟರು. ನಮ್ಮ ಇತಿಮಿತಿಯಲ್ಲಿ ಪಕ್ಷವನ್ನು ಸಂಘಟಿಸುವ ಕೆಲಸ ಮಾಡುತ್ತಿದ್ದೇವೆ. ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳಿಗೆ ಸಿದ್ಧತೆ ನಡೆಸಲಾಗುತ್ತಿದೆ. ಈ ಬಾರಿ ಬಿಜೆಪಿ ಮತ್ತಷ್ಟು ಬಲವರ್ಧನೆಗೊಳ್ಳಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇನ್ನು ಹಿರಿಯೂರು ಉಪ ಚುನಾವಣೆಯ ಟಿಕೆಟ್ ವಿಚಾರವಾಗಿ ಬಿಜೆಪಿ ಮತ್ತು ಜೆಡಿಎಸ್ ನಡುವೆ ಪೈಪೋಟಿ ನಡೆಯುತ್ತಿದೆ ಎಂಬ ಚರ್ಚೆಗೆ ಪ್ರತಿಕ್ರಿಯಿಸಿದ ಅವರು, ಹಿರಿಯೂರಿನಲ್ಲಿ ಎನ್‌ಡಿಎ ಅಭ್ಯರ್ಥಿ ಕಣಕ್ಕಿಳಿಯಲಿದ್ದಾರೆ ಎಂದು ಸ್ಪಷ್ಟಪಡಿಸಿದರು. ಅಭ್ಯರ್ಥಿ ಆಯ್ಕೆ ಕುರಿತು ಹೈಕಮಾಂಡ್ ನಿರ್ಧಾರ ಕೈಗೊಳ್ಳಲಿದ್ದು, ಪಕ್ಷದ ಅಂತಿಮ ತೀರ್ಮಾನವೇ ಮುಖ್ಯ. ಚುನಾವಣೆ ಯಲ್ಲಿ ಗೆಲುವು ಸಾಧಿಸುವುದೇ ನಮ್ಮ ಗುರಿ ಎಂದು ಮೈಸೂರಿನಲ್ಲಿ ಯದುವೀರ್ ಒಡೆಯರ್ ಹೇಳಿದರು.

ಪಂಚಾಯಿತಿಯಲ್ಲೇ ಊಟ ಮಾಡಿ ಪ್ರತಿಭಟಿಸಿದ ಗ್ರಾಮಸ್ಥರು

ರಾಯಚೂರು, ನ. 17: ಜಿಲ್ಲೆಯಲ್ಲಿ ಭೀಕರ ಬರಗಾಲ ತಾಂಡವವಾಡುತ್ತಿದೆ. ಹಳ್ಳಿಹಳ್ಳಿಗಳಲ್ಲೂ ಕುಡಿಯುವ ನೀರಿನ ಸಮಸ್ಯೆ ಗಂಭೀರ ಪ್ರಮಾಣದಲ್ಲಿ ಎದುರಾಗುತ್ತಿದೆ. ಕುಡಿಯುವ ನೀರು ಕೊಡಿ ಸ್ವಾಮಿ ಅಂತ ಗ್ರಾಮದ ಜನ ಗ್ರಾಮ ಪಂಚಾಯತಿಗೆ ಮುತ್ತಿಗೆ ಹಾಕಿದ್ದಾರೆ. ಅಲ್ಲೇ ಊಟ ಮಾಡುವ ಮೂಲಕ ಗ್ರಾಮಸ್ಥರು ವಿನೂತನ ರಿತಿಯಲ್ಲಿ ಪ್ರತಿಭಟನೆ ನಡೆಸಿದ್ದಾರೆ. ಜಿಲ್ಲೆಯ ಲಿಂಗಸೂಗೂರು ತಾಲ್ಲೂಕಿನ ಮಟ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಕುಡಿಯುವ ನೀರಿಗಾಗಿ ಗ್ರಾಮ ಪಂಚಾಯಿತಿಗೆ ಮುತ್ತಿಗೆ: ಗಡಿ ಜಿಲ್ಲೆ ರಾಯಚೂರಿನಲ್ಲಿ ಈಗಾಗಲೇ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿದೆ. ಭೀಕರ ಬರಗಾಲ ಹಿನ್ನೆಲೆ ಒಂದು ಕಡೆ ಬೆಳೆ ಒಣಗಿ ಹೋಗುತ್ತಿದ್ದರೆ, ಮತ್ತೊಂದು ಕಡೆ



ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿದೆ. ಕಳೆದೊಂದು ತಿಂಗಳಿನಿಂದ ಜಿಲ್ಲೆಯ ಹಲವೆಡೆ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದೆ. ಇದೇ ಕಾರಣಕ್ಕೆ ಜನರು ಹೋರಾಟಕ್ಕೆ ಇಳಿದಿದ್ದಾರೆ. ಕುಡಿಯುವ ನೀರಿಗಾಗಿ ಗ್ರಾಮ ಪಂಚಾಯಿತಿಗೆ ಮುತ್ತಿಗೆ ಹಾಕಿ, ಅಲ್ಲೇ ಊಟ ಮಾಡುವ ಮೂಲಕ ಗ್ರಾಮಸ್ಥರು ವಿನೂತನ ಪ್ರತಿಭಟನೆ ನಡೆಸಿದ್ದಾರೆ.

ರಾಯಚೂರು ಮಟ್ಟೂರು ತಾಂಡಾದಲ್ಲಿ ಕಳೆದ ಹಲವು ತಿಂಗಳಿಂದ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಈ ಬಗ್ಗೆ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂಬುದು ಗ್ರಾಮಸ್ಥರ ಆರೋಪ. ಇದರಿಂದ ಆಕ್ರೋಶಗೊಂಡ ತಾಂಡಾದ ಜನರು ಖಾಲಿ ಕೊಡಗಳನ್ನು ಹಿಡಿದು ಗ್ರಾಮ ಪಂಚಾಯಿತಿಗೆ ಆಗಮಿಸಿ ಪ್ರತಿಭಟನೆ ನಡೆಸಿದ್ದಾರೆ.

ನೀರಿನ ಸಮಸ್ಯೆ ಬಗೆಹರಿಸುವುದಾಗಿ ಪಿಡಿಒ ಭರವಸೆ : ಅಷ್ಟೇ ಅಲ್ಲ, ಮನೆಯಿಂದಲೇ ಬುತ್ತಿ ಕಟ್ಟಿಕೊಂಡು ಬಂದಿದ್ದ ಗ್ರಾಮಸ್ಥರು ಪಂಚಾಯಿತಿ ಆವರಣದಲ್ಲೇ ಊಟ ಮಾಡಿದ್ದಾರೆ. ಬಳಿಕ ಊಟ ಇದೆ, ಅನ್ನ ಇದೆ, ಆದರೆ ಕುಡಿಯುವುದಕ್ಕೆ ನೀರಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿ ಅಧಿಕಾರಿಗಳ ಗಮನ ಸೆಳೆಯುವ ಪ್ರಯತ್ನ ಮಾಡಿದ್ದಾರೆ. ಕಳೆದ ಒಂದು ತಿಂಗಳುಗಳಿಂದ ನೀರಿನ ಸಮಸ್ಯೆ ಎದುರಾದರೂ ಸ್ಪಂದಿಸದ ಪಿಡಿಒ ವಿರುದ್ಧ ಗ್ರಾಮಸ್ಥರು ಕಿಡಿಕಾರಿದ್ದಾರೆ. ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಗ್ರಾಮ ಪಂಚಾಯಿತಿ ಪಿಡಿಒ ಮಟ್ಟೂರು ತಾಂಡಾಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದ್ದಾರೆ.

ಇತ್ತ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲೂ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಮಾನ್ವಿ ತಾಲ್ಲೂಕಿನ ನಸ್ಲಾಪುರ, ಜಾನೇಕಲ್, ಅಮರಾವತಿ ಸೇರಿ ಹತ್ತಾರು ಹಳ್ಳಿಗಳಲ್ಲಿ ನೀರಿನ ಸಮಸ್ಯೆ ಎದುರಾ ಗಿದೆ. ಈ ಹಿನ್ನೆಲೆ ಸ್ಥಳೀಯ ಗ್ರಾಮಸ್ಥರು ಹಳ್ಳಕ್ಕೆ ನೀರು ಹರಿಸಿ ಅಂತ ಹೋರಾಟ ನಡೆಸಿದ್ದಾರೆ.

ತಾಂತ್ರಿಕ ದೋಷದಿಂದಾಗಿ ಇಂಡಿಗೋ ವಿಮಾನದ ಟೇಕ್ ಆಫ್ ರದ್ದು

ಮಂಗಳೂರು, ನ.17: ನ.16ರ ಸೋಮವಾರ ಸಂಜೆ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಬೆಂಗಳೂರಿಗೆ ಹೊರಟಿದ್ದ ಇಂಡಿಗೋ ವಿಮಾನದಲ್ಲಿ ನವೆಂಬರ್ 16ರ ಸೋಮವಾರ ಸಂಜೆ ತಾಂತ್ರಿಕ ದೋಷ ಕಾಣಿಸಿ ಕೊಂಡು ಟೇಕ್ ಆಫ್ ರದ್ದುಗೊಳಿಸಿದ ಘಟನೆ ನಡೆದಿದೆ.

ವಿಮಾನದಲ್ಲಿ ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಕೂಡ ಪ್ರಯಾಣಿಸುತ್ತಿದ್ದರು. ಘಟನೆ ಬಗ್ಗೆ ಮಾತನಾಡಿದ ನಳಿನ್‌ಕುಮಾರ್ ಕಟೀಲ್, ನಾನು ಬೆಂಗಳೂರಿಗೆ ತೆರಳಲು ಪ್ರಯಾಣಿಸುತ್ತಿದ್ದೆ. ವಿಮಾನ ರನ್‌ವೇಯಲ್ಲಿ ಸ್ವಲ್ಪ ಮುಂದೆ ಸಾಗಿ ಇನ್ನೇನು ಟೇಕ್ – ಆಫ್ ಆಗಬೇಕು ಎನ್ನುವಷ್ಟರಲ್ಲಿ, ವಿಕಾಏಕಿ ವಿಮಾನದ ಪವರ್ ಆಫ್ ಆಯಿತು. ತಕ್ಷಣವೇ ವಿಮಾನವನ್ನು





ನಿಲ್ಲಿಸಿ ಪಾರ್ಕಿಂಗ್ ಬೇಗೆ ಮರಳಿ ತರಲಾಯಿತು.

ಈ ವೇಳೆ ಪ್ರಯ

ಕುಡಿಯುವ ನೀರಿಗಾಗಿ 1.91 ಕೋಟಿ ಸೆಸ್ ಬಿಡುಗಡೆ

ನಗರಾಭಿವೃದ್ಧಿ ಪ್ರಾಧಿಕಾರದ ತುರ್ತು ಸಭೆಯಲ್ಲಿ ತೀರ್ಮಾನ

ಕಲಬುರಗಿ, ನ. 17: ಪ್ರಸ್ತುತ ಬರಗಾಲ ಪರಿಸ್ಥಿತಿಯಲ್ಲಿ ಸಾರ್ವ ಜನಿಕರಿಗೆ ಕುಡಿಯುವ ನೀರಿಗೆ ಆದ್ಯತೆ ನೀಡುವ ದೃಷ್ಟಿಯಿಂದ ನಗರಾಭಿವೃದ್ಧಿ ಪ್ರಾಧಿಕಾರವೂ ಕೂಡ ಹೊಣೆಗಾರಿಕೆ ಹೊತ್ತು, ಹಲವು ಕ್ರಮಗಳನ್ನು ಕೈಕೊಳ್ಳುವದು ತುಂಬ ಅಗತ್ಯವಾಗಿದೆ. ಆದ್ದರಿಂದ ನೀರಿನ ಸೆಸ್‌ಗಾಗಿ ಕಾಯ್ದಿರಿಸಿದ್ದ ಮೊತ್ತದಲ್ಲಿ ಕಲಬುರಗಿ ಮಹಾನಗರ ಪಾಲಿಕೆಗೆ 1.24 ಕೋಟಿ ರೂ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಗೆ 67 ಲಕ್ಷ ರೂ ನೀಡಲು ಇಂದಿಲ್ಲಿ ನಡೆದ ನಗರಾಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ತೀರ್ಮಾನಿಸಲಾಯಿತು.



ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕರದ ಕಚೇರಿ ಸಭಾಂಗಣದಲ್ಲಿ ಅಧ್ಯಕ್ಷ ಮಜಹರ್ ಆಲಂಖಾನ್ ಅವರ ಅಧ್ಯಕ್ಷತೆಯಲ್ಲಿ ನಡೆದ ತುರ್ತು ಸಭೆಯಲ್ಲಿ ಶಾಸಕಿ ಕನೀಜ್ ಫಾತಿಮಾ ಇಸ್ಲಾಂ, ಅಲ್ಲಮಪ್ರಭು ಪಾಟೀಲ್, ಬಸವರಾಜ ಮತ್ತಿಮಡು ಮತ್ತು ಆಧಿಕಾರಿಗಳಿದ್ದರು.

ಇಲ್ಲಿನ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಸಾಮಾನ್ಯ ಸಭೆಯು ಅಧ್ಯಕ್ಷ ಮಜಹರ್ ಆಲಂಖಾನ್ ಅಧ್ಯಕ್ಷತೆಯಲ್ಲಿ ನಡೆದು, ಗಂಭೀರ ಸ್ವರೂಪ ತಳೆದಿರುವ ಬರಗಾಲ ಪರಿಸ್ಥಿತಿಯಲ್ಲಿ ಸಾರ್ವಜನಿಕ ಕುಡಿಯುವ ನೀರಿಗೆ ಆದ್ಯತೆ ನೀಡುವ ದೃಷ್ಟಿಯಿಂದ ಹಲವು ಕ್ರಮಗಳನ್ನು ಕೈಗೊಳ್ಳಲು ಸಭೆ ನಿರ್ಧರಿಸಿತು.

ಕಲಬುರಗಿ ನಗರದ ಕುಡಿಯುವ ನೀರಿನ ಸಮಸ್ಯೆ ಕುರಿತು ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಯಿತು. ಬಳಿಕ ಪ್ರಾಧಿಕಾರವು ಸಂಗ್ರಹಿಸಿದ್ದ ನೀರಿನ ಸೆಸ್ ಮೊತ್ತದಲ್ಲಿ ಪಾಲಿಕೆಗೆ ಶೇ 65ರಷ್ಟು ಹಾಗೂ ಗ್ರಾಮೀಣ ಕುಡಿಯುವ ನೀರಿನ ಇಲಾಖೆಗೆ ಶೇ 35ರಷ್ಟು ಮೊತ್ತ ನೀಡಲು ಸಭೆಯಲ್ಲಿ ನಿರ್ಣಯಿಸಲಾಗಿದೆ ಎಂದು ಕುಡಾ ಅಧ್ಯಕ್ಷ ಮಜಹರ್ ಆಲಂಖಾನ್ ತಿಳಿಸಿದ್ದಾರೆ.

ಸಾಮಾನ್ಯ ಸಭೆಯಲ್ಲಿ ಶಾಸಕರಾದ ಕನೀಜ್ ಫಾತಿಮಾ, ಅಲ್ಲಮಪ್ರಭು ಪಾಟೀಲ, ಬಸವರಾಜ ಮತ್ತಿಮಡು, ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ, ಬಿ.ಜಿ ಪಾಟೀಲ, ಜಗದೇವ ಗುತ್ತೇದಾರ, ಕುಡಾ ಆಯುಕ್ತ ಶೈಲೇಂದ್ರ ಸಿಂಗ್ ಸೇರಿದಂತೆ ಇತರೆ ಸದಸ್ಯರು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

ಮುಖ್ಯವಾಗಿ ಕಲಬುರಗಿ ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ ಕುರಿತು ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ಈಗಾಗಲೇ ಪ್ರಾಧಿಕಾರದಲ್ಲಿ ನೀರಿನ ಸುಂಕಕ್ಕಾಗಿ ಇಡಲಾದ ಮೊತ್ತದಲ್ಲಿ ಮಹಾನಗರ ಪಾಲಿಕೆ ಶೇ.65ರಷ್ಟು ಮೊತ್ತ 1.24 ಕೋಟಿ ರೂ. ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಶೇ.35ರಷ್ಟು ಮೊತ್ತ 67ಲಕ್ಷ ರೂ. ಗಳನ್ನು ನೀಡಲು ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಗಿದೆಂದು ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ತಿಳಿಸಿದರು.



ಕರ್ನಾಟಕದಾದ್ಯಂತ ಇರುವ ಸಾವಿರಾರು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಆಶಾ ಕಾರ್ಯಕರ್ತೆಯರು ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿಯ ಹಗಲು-ರಾತ್ರಿ ಪ್ರತಿಭಟನೆಯನ್ನು ಆರಂಭಿಸಿದ್ದಾರೆ. 'ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ' ಮತ್ತು 'ಆಲ್ ಇಂಡಿಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್' ನೇತೃತ್ವದಲ್ಲಿ ನಡೆಯುತ್ತಿರುವ ಈ ಪ್ರತಿಭಟನೆಯು, 2025ರ ಜನವರಿಯಲ್ಲಿ ನಡೆದ ಹಿಂದಿನ ಮುಷ್ಕರದ ಸಂದರ್ಭದಲ್ಲಿ ರಾಜ್ಯ ಸರ್ಕಾರ ನೀಡಿದ್ದ ಭರವಸೆಗಳನ್ನು ಈಡೇರಿಸುವಲ್ಲಿ ವಿಫಲವಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ನಡೆದಿದೆ.

ಕಬ್ಬು ಬೆಳೆಗಾರ ರೈತರ ಹೋರಾಟಕ್ಕೆ, ಬಿಜೆಪಿ-ಜೆಡಿಎಸ್ ಮುಖಂಡರ ಬೆಂಬಲ ಘೋಷಣೆ

ಬೀದರ್, ನ. 17: ನಗರದಲ್ಲಿ ಜಿಲ್ಲಾ ರೈತ ಸಂಘದ ವತಿಯಿಂದ ಕಬ್ಬಿನ ಬೆಲೆ ನಿಗದಿಗೆ ಆಗ್ರಹಿಸಿ ನಡೆಯುತ್ತಿರುವ ಹೋರಾಟದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರು ಭಾಗವಹಿಸಿ ಬೆಂಬಲ ಘೋಷಣೆ ಮಾಡಿದರು.

ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಮಾತನಾಡಿ, 'ಜಿಲ್ಲೆಯ ರೈತರು ಪ್ರತಿ ಟನ್ ಕಬ್ಬಿಗೆ ರೂ.4 ಸಾವಿರ ಬೆಲೆ ನೀಡುವಂತೆ ಮಾಡಿರುವ ಬೇಡಿಕೆ ನ್ಯಾಯಯುತ ವಾಗಿದೆ. ನನಗೆ ಈಶ್ವರ ಖಂಡ್ರೆ ಅವರ ಮೇಲೆ ಯಾವುದೇ ವೈಯಕ್ತಿಕ ದ್ವೇಷವಿಲ್ಲ. ಆದರೆ ಅವರ ಕುಟುಂಬ ಆರು ದಶಕಗಳಿಂದ ಜಿಲ್ಲೆಯಲ್ಲಿ ರಾಜಕಾರಣ ಮಾಡುತ್ತಿದ್ದರೂ ಬೀದರ್ ಜಿಲ್ಲೆ ಅಭಿವೃದ್ಧಿಯಲ್ಲಿ ಹಿಂದುಳಿದಿದೆ. ರೈತರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಹೇಳಿದರು.

ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ರೈತರಿಗೆ ಹಾಗೂ ಸ್ವಸಹಾಯ ಸಂಘಗಳಿಗೆ ಸಮರ್ಪಕವಾಗಿ ಸಾಲ ನೀಡುತ್ತಿಲ್ಲ. ಬ್ಯಾಂಕ್ ಇದ್ದೂ ಇಲ್ಲದಂತಾಗಿದೆ. ರೈತರ ಬಗ್ಗೆ ನಿಜವಾದ ಕಾಳಜಿ ಇದ್ದರೆ ಸಚಿವರು ತಮ್ಮ ಸಹೋದರರನ್ನು ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸಬೇಕು ಎಂದು ಒತ್ತಾಯಿಸಿದರು.

ಜೆಡಿಎಸ್ ಮುಖಂಡ ಬಂಡೆಪ್ಪ ಕಾಶೆಂಪೂರ, ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ, ಮುಖಂಡರಾದ ಶಶಿಧರ ಹೊಸಳ್ಳಿ, ಕೆ.ಡಿ.ಗಣೇಶ, ಶಿವಾಜಿ ಮೇತ್ರೆ ಪಾಲ್ಗೊಂಡಿದ್ದರು.



ಬೀದರನಲ್ಲಿ ಕಬ್ಬು ಬೆಳೆಗಾರರು ನಡೆಸುತ್ತಿರುವ ಹೋರಾಟದಲ್ಲಿ ಬಿಜೆಪಿ-ಜೆಡಿಎಸ್ ಮುಖಮಡರು ಪಾಲ್ಗೊಂಡು ಬೆಂಬಲ ವ್ಯಕ್ತಪಡಿಸಿದರು.

ಒಗ್ಗಟ್ಟಿನ ಪ್ರಯತ್ನದಿಂದ 2028ಕ್ಕೆ, ರಾಜ್ಯದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ: ಶಶೀಲ್ ನಮೋಶಿ



ಬೀದರ್, ನ. 17: ವಿಧಾನ ಪರಿಷತ್ ಚುನಾವಣೆಯಲ್ಲಿ ಸತತ ಐದನೇ ಬಾರಿಗೆ ಗೆಲುವು ಸಾಧಿಸಿರುವುದು ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಶಿಕ್ಷಕರು ತಮ್ಮ ಮೇಲಿಟ್ಟಿರುವ ವಿಶ್ವಾಸದ ಪ್ರತೀಕವಾಗಿದೆ. ಇದೇ ಒಗ್ಗಟ್ಟು ಮುಂದುವರೆದು ಮುಂಬರುವ 2028ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರ ಹಿಡಿಯುವುದು ಖಂಡಿತ ಯಶಸ್ವಿಯಾಗಲಿದೆ ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಪಕ್ಷದ ಎಲ್ಲ ಮುಖಂಡರು ಒಗ್ಗಟ್ಟಿನಿಂದ ಸಂಘಟಿತ ಪ್ರಯತ್ನ ನಡೆಸಿದರೆ 2028ರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ. ನನ್ನ ಗೆಲುವಿಗೆ ಕಾರಣರಾದ ಮತದಾರರು, ಶಿಕ್ಷಕರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಇದು ನನ್ನ ವೈಯಕ್ತಿಕ ಗೆಲುವಲ್ಲ, ಪಕ್ಷದ ಗೆಲುವು ಎಂದರು.

ಕಲ್ಯಾಣ ಕರ್ನಾಟಕದ ವಿವಿಧ ಜಿಲ್ಲೆಗಳಿಂದ ಬೆಂಬಲ ವ್ಯಕ್ತವಾಗಿದ್ದು, ಬೀದರ್ ಜಿಲ್ಲೆಯಿಂದ ಅತಿ ಹೆಚ್ಚು ಮತಗಳು ಲಭಿಸಿರುವುದು ಸಂತಸ ತಂದಿದೆ. ಚುನಾವಣೆಯಲ್ಲಿ ತೀವ್ರ ಪೈಪೋಟಿ ಎದುರಾದರೂ ಕೊನೆಯ ಹಂತದಲ್ಲಿ ಶಿಕ್ಷಕರು ನೀಡಿದ ಬೆಂಬಲದಿಂದ ಗೆಲುವು ಸಾಧ್ಯವಾಯಿತು ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ ಮಾತನಾಡಿ, ಪಕ್ಷದಲ್ಲಿ ನಿಷ್ಠೆ ಮತ್ತು ಪ್ರಾಮಾಣಿಕತೆ ಯಿಂದ ಕಾರ್ಯ ನಿರ್ವಹಿಸಿದರೆ ಉನ್ನತ ಸ್ಥಾನಮಾನ ದೊರೆಯುತ್ತದೆ ಎಂಬುದಕ್ಕೆ ನಮೋಶಿ ಅವರ ಸಾಧನೆಯೇ ಸಾಕ್ಷಿ ಎಂದರು. ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ, ಬಸವಕಲ್ಯಾಣ ಶಾಸಕ ಶರಣು ಸಲಗರ ಮಾತನಾಡಿದರು.

ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ನೂತನ ಕಟ್ಟಡ ಲೋಕಾರ್ಪಣೆ

ಬಳ್ಳಾರಿ ನ 17: ಬಳ್ಳಾರಿಯ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ, ಬಲಕುಂದಿ, ಸಿರಗುಪ್ಪ ತಾಲೂಕು, ಬಳ್ಳಾರಿ ಇಲ್ಲಿ ನೂತನವಾಗಿ ನಿರ್ಮಿಸಲಾದ ಕಟ್ಟಡದ ಲೋಕಾರ್ಪಣೆಯ ಕಾರ್ಯಕ್ರಮಕ್ಕೆ ದಿನಾಂಕ 16.11.2026 ರಂದು ಜನಪ್ರಿಯ ಶಾಸಕರಾದ ಬಿ ಎಮ್ ನಾಗರಾಜ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಪಿ. ಮುನಿ ವಾಸುದೇವ ರೆಡ್ಡಿ, ಡಾ. ಸುಜಾತ, ಡಾ. ಭಾರತಿ ಸಂಗಮ್, ಸಹಾಯಕ ಆಡಳಿತಾಧಿಕಾರಿ ಗಳಾದ ಶ್ರೀನಿವಾಸ. ಕೆ ಹಾಗೂ ಬಲಕುಂದಿ ಗ್ರಾಮದ ಮುಖಂಡರ ಹಾಜರಿಯಲ್ಲಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸ ಲಾಯಿತು.



ಶ್ರೀಮಾತಾ ಪದವಿ ಕಾಲೇಜಿಗೆ ಹೆಮ್ಮೆಯ ಗರಿ: ಬಿಬಿಎ, ಬಿಸಿಎ ವಿಭಾಗಗಳಲ್ಲಿ ಪ್ರಥಮ ರ್‍ಯಾಂಕ್ ಸಾಧನೆ

ಬಳ್ಳಾರಿ, ನ 17. ಹೊಸಪೇಟೆಯ ಶ್ರೀಮಾತಾ ಪದವಿ ಕಾಲೇಜಿನ ವಿದ್ಯಾರ್ಥಿನಿಯರು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಪದವಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಬಿಸಿಎ ವಿಭಾಗದಲ್ಲಿ ಕು. ದಿಶಾ ಯೇಕುಂಡೆ ಅವರು ಪ್ರಥಮ ರ್‍ಯಾಂಕ್ ಹಾಗೂ ಬಿಬಿಎ ವಿಭಾಗದಲ್ಲಿ ಕು. ಕೀರ್ತನಾ ಜಿ.ಕೆ. ಅವರು ಪ್ರಥಮ ರ್‍ಯಾಂಕ್ ಪಡೆದು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ರಾಜ್ಯಪಾಲೆ ಡಾ. ಸುಧಾ ಯಾದವ್ ಅವರಿಂದ ಇಬ್ಬರೂ ವಿದ್ಯಾರ್ಥಿನಿಯರು ಚಿನ್ನದ ಪದಕವನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಮುನಿರಾಜು, ಕುಲಸಚಿವ ಪ್ರೊ. ಲೋಕೇಶ್ ಪಿ., ಮೌಲ್ಯಮಾಪನ ಕುಲಸಚಿವ ಪ್ರೊ. ಕಣ್ಣನ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.



ಶ್ರೀಮಾತಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸತೀಶ್ ಕಾಂತ್ರಾ ಹಾಗೂ ನಿರ್ದೇಶಕ ಸಾಗರ್ ಅವರು ಘಟಿಕೋತ್ಸವ ಸಮಾರಂಭದಲ್ಲಿ ಉಪಸ್ಥಿತರಿದ್ದು, ಕಾಲೇಜಿನ ಪ್ರಾಂಶು ಪಾಲ ಜಾಫರ್ ಅವರೊಂದಿಗೆ ವಿದ್ಯಾರ್ಥಿನಿಯರ ಸಾಧನೆಗೆ ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದರು.

ಈ ಅಭೂತಪೂರ್ವ ಸಾಧನೆಯು ಕಾಲೇಜಿನ ಶೈಕ್ಷಣಿಕ ಗುಣಮಟ್ಟ, ಉಪನ್ಯಾಸಕರ ಪರಿಶ್ರಮ, ವಿದ್ಯಾರ್ಥಿನಿಯರ ನಿರಂತರ ಅಧ್ಯಯನ ಹಾಗೂ ಆಡಳಿತ ಮಂಡಳಿಯ ಪ್ರೋತ್ಸಾಹಕ್ಕೆ ಸಾಕ್ಷಿಯಾಗಿದೆ.

ಅಂಬೇಡ್ಕರ್ ಅರಿಯಲು ಬೌದ್ಧ ಧರ್ಮ ಅಧ್ಯಯನ ಅಗತ್ಯ: ಪ್ರೊ.ಎಚ್.ಟಿ.ಪೋತೆ



ರಾಯಚೂರು, ನ. 17: ಡಾ.ಬಿ.ಆರ್.ಅಂಬೇಡ್ಕರ್ ಅವರು ಆಳವಾಗಿ ಅಧ್ಯಯನ ಮಾಡಿ ರಚಿಸಿರುವ 'ಬುದ್ಧ ಮತ್ತು ಆತನ ಧಮ್ಮ' ಕೃತಿ ಕೇವಲ ಬೌದ್ಧ ಧರ್ಮಕ್ಕೆ ಸೀಮಿತವಲ್ಲ. ಎಲ್ಲ ಧರ್ಮಗಳವರು ಓದಲೇಬೇಕಾದ ವೈಚಾರಿಕ ಹಾಗೂ ಸಾಮಾಜಿಕ ಕ್ರಾಂತಿಯ ಕೈಪಿಡಿಯಾಗಿದೆ. ಇದರಲ್ಲಿ ಅಂಬೇಡಕರ್ ಅವರ ಕುರಿತು ಸಮಗ್ರತೆ ಅರಿತುಕೊಳ್ಳಲು ಸಾಧ್ಯವಾಗಲಿದೆ ಎಂದು ಕಲಬುರಗಿ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ.ಎಚ್.ಟಿ.ಪೋತೆ ಹೇಳಿದರು.

ವಿಜ್ಞಾನ ಬಲ್ಲವರು ಅಧ್ಯಯನ ಆರಂಭಿಸುವುದಾದರೆ ಮೊದಲು ಬೌದ್ಧ ಧರ್ಮವನ್ನು ಅರಿಯಬೇಕುಎಂದು ತಿಳಿಸಿದರು.

ಎಲ್ಲ ಧರ್ಮಗಳನ್ನು ಗೌರವಿಸಿದಾಗ ಮಾತ್ರ ನಿಜವಾದ ಭಾರತೀಯರಾಗಲು ಸಾಧ್ಯ. ಬುದ್ಧನ ವಿಚಾರಗಳು ಇಂದಿಗೂ ಜನರ ಮನಸ್ಸಿನಲ್ಲಿ ನೆಲೆಗೊಂಡಿವೆ. ಅಂಬೇಡ್ಕರ್ ಅವರು ಬೌದ್ಧ ಧರ್ಮದ ಚಿಂತನೆಗಳನ್ನು ಸಾರುವ ಮೌಲ್ಯಯುತ ಕೃತಿಗಳನ್ನು ನೀಡಿದ್ದಾರೆ. ವಿದ್ಯಾರ್ಥಿಗಳು ಓದುವ ಸಂಸ್ಕೃತಿ ಬೆಳೆಸಿಕೊಂಡು ಉತ್ತಮ ಪುಸ್ತಕಗಳನ್ನು ಅಧ್ಯಯನ ಮಾಡಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ವಿವಿಯ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ ಮಾತನಾಡಿ, ಸಮಾಜದಲ್ಲಿ ಪ್ರಜ್ಞೆ ಮೂಡಬೇಕಾದರೆ ಮೊದಲು ಅಂಬೇಡ್ಕರ್ ಅವರನ್ನು ಓದಬೇಕು. ಬುದ್ಧನ ವಿಚಾರಧಾರೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದೇಶದ ಸಾಮಾಜಿಕ, ಸಾಂಸ್ಕೃತಿಕ ಸ್ಥಿತಿಗತಿಗಳನ್ನು ಅರಿತು ಅಂಬೇಡ್ಕರ್ ಸಂವಿಧಾನ ರಚಿಸಿದ್ದಾರೆ ಎಂದರು.

ವಿಶ್ರಾಂತ ಕುಲಪತಿ ಮಲ್ಲೇಪುರಂ ಜಿ.ವೆಂಕಟೇಶ, ಕುಲಸಚಿವ .ಎ.ಚನ್ನಪ್ಪ, ಕುಲಸಚಿವ (ಮೌಲ್ಯಮಾಪನ) ವಿರೂಪಾಕ್ಷಯ್ಯ ಡಿಬಿಎಂ, ಸಿಂಡಿಕೇಟ್ ಸದಸ್ಯ ಜೀಶಾನ್ ಅಖಿಲ್ ಸಿದ್ದಿಖಿ ಮಾತನಾಡಿದರು.

ಫಲಿಕೋತ್ಸವದಲ್ಲಿ ಎಸ್.ಕೆ.ಮೋದಿ ಶಾಲೆಯ ವಿದ್ಯಾರ್ಥಿಗಳ ಆಕರ್ಷಕ ಪ್ರದರ್ಶನಕ್ಕೆ ರಾಜ್ಯಪಾಲರ ಮೆಚ್ಚುಗೆ



ಬಳ್ಳಾರಿ ನ 17.ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ ದಲ್ಲಿ ನಡೆದ ಘಟಿಕೋತ್ಸವದಲ್ಲಿ ರಾಜ್ಯಪಾಲೆ ಸುಧಾ ಯಾದವ್ ಅವರ ಆಗಮನದ ಸಂದರ್ಭದಲ್ಲಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ವೀರಶೈವ ವಿದ್ಯಾವರ್ಧಕ ಸಂಘದ ಎಸ್. ಕೆ. ಮೋದಿ ನ್ಯಾಷನಲ್ ಶಾಲೆಯ ವಿದ್ಯಾರ್ಥಿಗಳ ಬ್ಯಾಂಡ್ ತಂಡ ಆಕರ್ಷಕ ಪ್ರದರ್ಶನ ನೀಡಿ ಗಮನ ಸೆಳೆಯಿತು.

ಶಾಲೆಯ ದೈಹಿಕ ಶಿಕ್ಷಕರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಲಯಬದ್ಧ ಬ್ಯಾಂಡ್ ವಾದನ, ಶಿಸ್ತುಬದ್ಧ ಹೆಜ್ಜೆ ಹಾಗೂ ತಂಡದ ಸಮನ್ವಯದೊಂದಿಗೆ ರಾಜ್ಯಪಾಲರನ್ನು ಸ್ವಾಗತಿಸಿದರು.

ವಿದ್ಯಾರ್ಥಿಗಳ ಶಿಸ್ತು, ಪ್ರತಿಭೆ ಹಾಗೂ ಸಮರ್ಪಣಾ ಮನೋಭಾವವನ್ನು ಕಂಡು ರಾಜ್ಯ ಪಾಲರು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಲೆಯ ಅಧ್ಯಕ್ಷ ಏಳುಬೆಂಚಿ ರಾಜಶೇಖರ ಗೌಡ, ಆಡಳಿತ ಮಂಡಳಿಯ ಸದಸ್ಯರಾದ ಅಣ್ಣ ವಿರೂಪಾಕ್ಷಪ್ಪ, ವಸಂತಕುಮಾರ ಗೌಡ ಪಾಟೀಲ್, ಪ್ರಾಂಶುಪಾಲೆ ಸುನಂದಾ ಪಾಟೀಲ್ ವಿದ್ಯಾರ್ಥಿಗಳಲ್ಲಿ ಶಿಸ್ತು, ಸಮಯಪ್ರಜ್ಞೆ, ನಾಯಕತ್ವ ಗುಣ ಮತ್ತು ತಂಡದ ಮನೋಭಾವ ಬೆಳೆಸುವಲ್ಲಿ ಶಾಲೆ ನೀಡುತ್ತಿರುವ ತರಬೇತಿಗೆ ಈ ಸಾಧನೆ ಸಾಕ್ಷಿಯಾಗಿದೆ. ವಿದ್ಯಾರ್ಥಿ ಗಳು ಮುಂದಿನ ದಿನಗಳಲ್ಲಿಯೂ ಇಂತಹ ಸಾಧನೆಗಳ ಮೂಲಕ ಶಾಲೆ ಹಾಗೂ ನಾಡಿನ ಕೀರ್ತಿ ಹೆಚ್ಚಿಸಲಿ ಎಂದು ಪ್ರಾಂಶುಪಾಲರು ಸಿಬ್ಬಂದಿ ವಿದ್ಯಾರ್ಥಿಗಳಿಗೆ ಮೆಚ್ಚುಗೆಯನ್ನು ವ್ಯಕ್ತ ಪಡಿಸಿ ಶುಭ ಹಾರೈಸಿದ್ದಾರೆ.

ಟಿ.ಬಿ. ಡ್ಯಾಂನ ಬಲದಂಡೆಯ ಕಾಲುವೆಗಳಿಗೆ ಡಿ.1ರಿಂದ 15ರವರೆಗೆ ನೀರು ಹರಿಸಲು ಒತ್ತಾಯ

ಬಳ್ಳಾರಿ, ನ.17: ಟಿ.ಬಿ. ಡ್ಯಾಂನ ಬಲದಂಡೆಯ ಕಾಲುವೆಗಳಿಗೆ ಡಿ.1ರಿಂದ 15ರವರೆಗೆ ನೀರು ಹರಿಸಬೇಕೆಂದು ಬಿಜೆಪಿ ರೈತ ಮೋರ್ಚಾದ ಮಾಜಿ ಜಿಲ್ಲಾಧ್ಯಕ್ಷ ಗಣಪಾಲ್ ಐನಾಥ್‌ರೆಡ್ಡಿ ಒತ್ತಾಯಿಸಿ ದ್ದಾರೆ.

ಈ ಕುರಿತಂತೆ ಪತ್ರಿಕಾ ಪ್ರಕಟಣೆ ನೀಡಿರುವ ಹಿರಿಯ ಮುಖಂಡರೂ ಆದ ಗಣಪಾಲ್ ಐನಾಥ್ ರೆಡ್ಡಿ, ಬಳ್ಳಾರಿ ಜಿಲ್ಲಾದ್ಯಂತ ರೈತರು ಬೆಳೆಯುವ ಬೆಳೆಗಳಿಗೆ ನೀರಿನ ಅವಶ್ಯಕತೆ

ಹೊಸ ಕಡಲ ಜಂಟಿ ಸಮರಾಭ್ಯಾಸ: ಕ್ವಾಡ್ ಪ್ರಕಟಣೆ

AI, ಸೈಬರ್ ಭದ್ರತೆಯ ಕುರಿತು ಪ್ರಮುಖ ಉಪಕ್ರಮಗಳ ಅನಾವರಣ



ಫಿಲಿಪೈನ್ಸ್, ನ.17: ಮೋದಿ ಇಂದು 23ನೇ ಆಸಿಯಾನ್-ಭಾರತ ಶೃಂಗಸಭೆ ಮತ್ತು 21ನೇ ಪೂರ್ವ ಏಷ್ಯಾ ಶೃಂಗಸಭೆಯಲ್ಲಿ ಭಾಗವಹಿಸಿದ್ದರು. ಆಸಿಯಾನ್ ಸಭೆಗಳ ಹೊರತಾಗಿ ಭಾರತ, ಅಮೆರಿಕ, ಜಪಾನ್ ಮತ್ತು ಆಸ್ಟ್ರೇಲಿಯಾವನ್ನು ಪ್ರತಿನಿಧಿಸುವ ಕ್ವಾಡ್ ನಾಯಕರ ಸಭೆಯನ್ನು ಸಹ ಯೋಜಿಸಲಾಗಿದೆ. ಫಿಲಿಫೀನ್ಸ್‌ನ ಮನಿಲಾದಲ್ಲಿ ನಡೆದ ಕ್ವಾಡ್ ಶೃಂಗಸಭೆಯ ಹೊರತಾಗಿ ಪ್ರಧಾನಿ ನರೇಂದ್ರ ಮೋದಿ, ಅವರ ಆಸ್ಟ್ರೇಲಿಯಾ ಮತ್ತು ಜಪಾನಿನ ಸಹವರ್ತಿಗಳು ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭೇಟಿಯಾದರು. ಟ್ರಂಪ್ ಪ್ರಧಾನಿ ಮೋದಿ ಅವರನ್ನು ಹೊಗಳಿದರು, ಜಗತ್ತು ಅವರನ್ನು ಹೆಚ್ಚು ಗೌರವಿಸುತ್ತದೆ ಎಂದು ಹೇಳಿದರು. ಮಂಗಳವಾರ ಜಂಟಿ ಹೇಳಿಕೆಯಲ್ಲಿ, ಆಸ್ಟ್ರೇಲಿಯಾ, ಜಪಾನ್, ಭಾರತ ಮತ್ತು ಅಮೆರಿಕ ಆರ್ಥಿಕ ದಬ್ಬಾಳಿಕೆ ಮತ್ತು ಪ್ರಾದೇಶಿಕ ಶಾಂತಿಯನ್ನು ಭಂಗಗೊಳಿಸುವ ಏಕಪಕ್ಷೀಯ ಕ್ರಮಗಳ ವಿರುದ್ಧ ಮಾತನಾಡಿದರು. ಏತನ್ಮಧ್ಯೆ, ಭಾರತ ಮತ್ತು ಆಸಿಯಾನ್ ವಿಪತ್ತು ನಿರ್ವಹಣೆ, ವರ್ಧಿತ ಮುಂಚಿನ ಎಚ್ಚರಿಕೆ ವ್ಯವಸ್ಥೆಗಳ ಮೂಲಕ ಹೊಸ ಕಡಲ ವ್ಯಾಯಾಮ, ವರ್ಧಿತ ಮುಂಚಿನ ಎಚ್ಚರಿಕೆ ವ್ಯವಸ್ಥೆಗಳು, ಉಪಗ್ರಹ ಮತ್ತು ಹವಾಮಾನ ದತ್ತಾಂಶಗಳ ಹಂಚಿಕೆ, ವಿಶೇಷವಾಗಿ AI, ಜಂಟಿ ಸನ್ನದ್ಧತೆ ಸಮರಾಭ್ಯಾಸಗಳೊಂದಿಗೆ ಸೈಬರ್ ಭದ್ರತೆ ಮತ್ತು ಮಾನವೀಯ ಸಹಾಯದ ತ್ವರಿತ ನಿಯೋಜನೆ ಸೇರಿದಂತೆ ಹೊಸ ಕಡಲ ವ್ಯಾಯಾಮದಲ್ಲಿ ಸಹಕಾರವನ್ನು ಗಾಢವಾಗಿಸಲು ಒಪ್ಪಿಕೊಂಡಿವೆ.

ಪ್ರಧಾನಿ ನರೇಂದ್ರ ಮೋದಿ "ತುಂಬಾ ಕಠಿಣ" ವ್ಯಕ್ತಿ: ಅಮೆರಿಕ ಅಧ್ಯಕ್ಷ ಟ್ರಂಪ್:

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ಪ್ರಧಾನಿ ನರೇಂದ್ರ ಮೋದಿಯವರನ್ನು "ವಿಶ್ವದಾದ್ಯಂತ ಎಲ್ಲರೂ ಹೆಚ್ಚು ಗೌರವಿಸುವ" "ಮಹಾನ್ ನಾಯಕ" ಎಂದು ಹೊಗಳಿದರು, ಅವರು ಕ್ವಾಡ್ ಪಾಲುದಾರಿಕೆಯ ಹೆಚ್ಚುತ್ತಿರುವ ಪ್ರಾಮುಖ್ಯತೆಯನ್ನು ಎತ್ತಿ ತೋರಿಸಿದರು ಮತ್ತು ಕಡಲ ಭದ್ರತೆ, ನಿರ್ಣಾಯಕ ಖನಿಜಗಳು ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಕುರಿತು ಹೊಸ ಉಪಕ್ರಮಗಳನ್ನು ಘೋಷಿಸಿದರು. ಮನಿಲಾದಲ್ಲಿ ನಡೆದ ಕ್ವಾಡ್ ನಾಯಕರ ಸಭೆಯನ್ನುದ್ದೇಶಿಸಿ ಮಾತನಾಡಿದ ಟ್ರಂಪ್, ಮೋದಿಯನ್ನು ಸ್ನೇಹಿತ ಎಂದು ಬಣ್ಣಿಸಿದರು ಮತ್ತು ಭಾರತೀಯ ಪ್ರಧಾನಿ "ಜಾಗತಿಕವಾಗಿ ಗೌರವವನ್ನು ಆಜ್ಞಾಪಿಸಿದರು" ಎಂದು ಹೇಳಿದರು. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಪ್ರಧಾನಿ ನರೇಂದ್ರ ಮೋದಿಯವರನ್ನು "ತುಂಬಾ ಕಠಿಣ" ವ್ಯಕ್ತಿ ಎಂದು ಬಣ್ಣಿಸಿದರು. ಪ್ರಧಾನಿ ಮೋದಿಯ ಕಡೆಗೆ ಸನ್ನೆ ಮಾಡಿದ ಟ್ರಂಪ್, "ಅವರು ತುಂಬಾ ಕಠಿಣ ವ್ಯಕ್ತಿ" ಎಂದು ಟೀಕಿಸಿದರು. ತರುವಾಯ, ಜಪಾನ್ ಪ್ರಧಾನಿ ಶಿಂಜೊ ಅಬೆ ಅವರನ್ನು ತೋರಿಸುತ್ತಾ, "ಅವರು ಇನ್ನೂ ಕಠಿಣವಾಗಬಹುದು" ಎಂದು ಹೇಳಿದರು.

ಎರಡು ದಿನಗಳ ಭೇಟಿ ಮುಗಿಸಿದ ನಂತರ ಪ್ರಧಾನಿ ಮೋದಿ ಫಿಲಿಫೀನ್ಸ್‌ನಿಂದ ನಿರ್ಗಮಿಸಿದರು:

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಎರಡು ದಿನಗಳ ಫಿಲಿಪೈನ್ಸ್ ಭೇಟಿಯನ್ನು ಮುಗಿಸಿದ ನಂತರ ನವದೆಹಲಿಗೆ ತೆರಳಿದರು, ಈ ಸಮಯದಲ್ಲಿ ಅವರು ಆಸಿಯಾನ್-ಭಾರತ ಶೃಂಗಸಭೆ, ಪೂರ್ವ ಏಷ್ಯಾ ಶೃಂಗಸಭೆ ಮತ್ತು ಕ್ವಾಡ್ ನಾಯಕರ ಸಭೆಯಲ್ಲಿ ಭಾಗವಹಿಸಿದ್ದರು. ಶ್ರೀ ಮೋದಿ ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಆರ್. ಮಾರ್ಕೋಸ್ ಜೂನಿಯರ್ ಅವರನ್ನು ಸಹ ಭೇಟಿಯಾದರು ಮತ್ತು ಇಬ್ಬರು ನಾಯಕರು ರಕ್ಷಣೆ, ಭದ್ರತೆ, ವ್ಯಾಪಾರ ಮತ್ತು ಹೂಡಿಕೆಯಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಮಾರ್ಗಗಳ ಬಗ್ಗೆ ಚರ್ಚಿಸಿದರು.

ಮಂಗಳವಾರ, ಮೋದಿ ಇಂದು ಮನಿಲಾದಲ್ಲಿರುವ ಖಲ್ಸಾ ದಿವಾನ್ ಗುರುದ್ವಾರಕ್ಕೆ ಭೇಟಿ ನೀಡಿ ಅದರ ಪುನರಾಭಿವೃದ್ಧಿಗೆ ಅಡಿಪಾಯ ಹಾಕುವ ಸಮಾರಂಭದ ನೇತೃತ್ವ ವಹಿಸಿದ್ದರು. ಗುರುದ್ವಾರವನ್ನು ಮೊದಲು 1901 ರಲ್ಲಿ ಸ್ಥಾಪಿಸಲಾಯಿತು ಮತ್ತು 1903 ರಲ್ಲಿ ಔಪಚಾರಿಕವಾಗಿ ಆಯೋಜಿಸಲಾಯಿತು. ಇದನ್ನು 1924 ರಲ್ಲಿ ಖಲ್ಸಾ ದಿವಾನ್ ಎಂದು ನೋಂದಾಯಿಸಲಾಯಿತು ಮತ್ತು ಫಿಲಿಪೈನ್ಸ್‌ನ ಅತ್ಯಂತ ಹಳೆಯ ಗುರುದ್ವಾರ ಎಂದು ಗುರುತಿಸಲಾಗಿದೆ.

ಚೀನಾದಲ್ಲಿ ಟ್ರಂಪ್-ಪುಟಿನ್-ಕ್ಸಿ ಭೇಟಿ

ಅಧ್ಯಕ್ಷ ಕ್ಸಿ ಜಿನ್ಪಿಂಗ್ ಮತ್ತು ಅವರ ಯುಎಸ್ ಮತ್ತು ರಷ್ಯಾದ ಸಹವರ್ತಿಗಳಾದ ಡೊನಾಲ್ಡ್ ಟ್ರಂಪ್ ಮತ್ತು ವ್ಲಾಡಿಮಿರ್ ಪುಟಿನ್ ಅವರು ಈ ವಾರ ಶೆನ್ಜೆನ್ನಲ್ಲಿ ನಡೆಯುವ ತಮ್ಮ ಮೊದಲ ತ್ರಿಪಕ್ಷೀಯ ಶೃಂಗಸಭೆಯಲ್ಲಿ "ವಿಶ್ವ ಶಾಂತಿ" ಕುರಿತು ಚರ್ಚಿಸಲಿದ್ದಾರೆ ಎಂದು ಚೀನಾ ಸೋಮವಾರ ತಿಳಿಸಿದೆ. ಈ ಸಭೆಯ ಬಗ್ಗೆ ಬೀಜಿಂಗ್ ದೃಢಪಡಿಸಿದ ಕೆಲವೇ ಗಂಟೆಗಳ ನಂತರ, "ವಿಶ್ವ ಶಾಂತಿಯನ್ನು ಕಾಪಾಡುವ ಹಾಗೂ ಪ್ರಮುಖ ಶಕ್ತಿಗಳ ನಡುವಿನ ಸಂಬಂಧಗಳಲ್ಲಿ ವ್ಯೂಹಾತ್ಮಕ ಸ್ಥಿರತೆಯನ್ನು ಉತ್ತೇಜಿಸುವ ಕುರಿತು" ಈ ಮೂವರು ನಾಯಕರು "ಆಳವಾದ ಚರ್ಚೆಗಳನ್ನು" ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರೆ ಮಾವೋ ನಿಂಗ್ ಸುದ್ದಿಗಾರರಿಗೆ ತಿಳಿಸಿದರು. "ಇದು ಅತ್ಯಂತ ಮಹತ್ವದ ಮತ್ತು ಹೊಸ ಮೈಲಿಗಲ್ಲಾಗುವಂತಹ ಸಭೆಯಾಗಲಿದೆ" ಎಂದು ಅವರು ಹೇಳಿದರು. ದಕ್ಷಿಣ ಚೀನಾದ ನಗರವೊಂದರಲ್ಲಿ ನಡೆಯಲಿರುವ 'ಏಷ್ಯಾ-ಪೆಸಿಫಿಕ್ ಆರ್ಥಿಕ ಸಹಕಾರ' ನಾಯಕರ ಶೃಂಗಸಭೆಯ ಸಂದರ್ಭದಲ್ಲಿ, ಗುರುವಾರ ಈ ತ್ರಿಪಕ್ಷೀಯ ಸಭೆ ನಡೆಯುವ ನಿರೀಕ್ಷೆಯಿದೆ.

ರಷ್ಯಾದಲ್ಲಿ ಸೇನಾ ಸಾರಿಗೆ ವಿಮಾನ ಪತನ

ವಿಮಾನದಲ್ಲಿದ್ದ 17 ಮಂದಿ ಸಾವು!



ಮಾಸ್ಕೋ, ನ.17: ರಷ್ಯಾದ An-12 ಸೇನಾ ಸಾರಿಗೆ ವಿಮಾನವೊಂದು ಪತನಗೊಂಡಿದ್ದು, ವಿಮಾನದಲ್ಲಿದ್ದ ಎಲ್ಲಾ 17 ಮಂದಿ ಮೃತಪಟ್ಟಿದ್ದಾರೆ.

ನೈಋತ್ಯ ಸೈಬೀರಿಯಾದ ಕೆಮೆರೊವೊ ಒಬ್ಲಾಸ್ಟ್‌ನ ಯಾಗುನೊವೊ ಗ್ರಾಮದ ಸಮೀಪ ಈ ದುರ್ಘಟನೆ ಸಂಭವಿಸಿದೆ. ಸ್ಥಳೀಯ ಕಾಲಮಾನ ರಾತ್ರಿ 9.30ರ ಸುಮಾರಿಗೆ ವಿಮಾನ ಪತನಗೊಂಡಿದೆ ಎಂದು ವರದಿಯಾಗಿದೆ.

ಘಟನೆ ನಡೆದ ಸ್ಥಳದಲ್ಲಿ ತುರ್ತು ಪ್ರತಿಕ್ರಿಯೆ ಕೇಂದ್ರ ಸ್ಥಾಪಿಸಲಾಗಿದ್ದು, ವೈದ್ಯಕೀಯ ಸಿಬ್ಬಂದಿ, ಪೊಲೀಸರು, ತುರ್ತು ಸೇವಾ ತಂಡಗಳು ಹಾಗೂ ನ್ಯಾಷನಲ್ ಗಾರ್ಡ್ ಪಡೆಗಳನ್ನು ನಿಯೋಜಿಸಲಾಗಿದೆ. ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳಲಾಗಿದೆ.

ಈ ವಿಮಾನವು ಸೈಬೀರಿಯಾದ ನೊವೊಸಿಬಿರ್ಸ್ಕ್‌ನಿಂದ ಕ್ರಾಸ್ನೊಯಾರ್ಸ್ಕ್‌ಕ್ಕೆ ತೆರಳುತ್ತಿತ್ತು. ಮಾರ್ಗಮಧ್ಯೆ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡಿತ್ತು ಎನ್ನಲಾಗಿದೆ. ಈ ವೇಳೆ ಜನವಸತಿ ಪ್ರದೇಶದ ಮೇಲೆ ವಿಮಾನ ಪತನವಾಗದಂತೆ ಅದನ್ನು ಕಟ್ಟಡಗಳಿಂದ ದೂರಕ್ಕೆ ತಿರುಗಿಸಲು ಸಿಬ್ಬಂದಿ ಕೊನೆಯ ಕ್ಷಣದವರೆಗೂ ಪ್ರಯತ್ನಿಸಿದ್ದರು. ವಿಮಾನ ಪತನಕ್ಕೆ ನಿಖರ ಕಾರಣವೇನು ಎಂಬುದು ಇನ್ನೂ ತಿಳಿದುಬಂದಿಲ್ಲ. ಈ ಕುರಿತು ಅಧಿಕಾರಿಗಳು ತನಿಖೆ ಕೈಗೊಳ್ಳುವ ಸಾಧ್ಯತೆಯಿದೆ.

ಏನಿದು An-12 ವಿಮಾನ?

ಪತನಗೊಂಡಿರುವ ಆಂಟೊನೊವ್ An-12 ನಾಲ್ಕು ಎಂಜಿನ್‌ಗಳನ್ನು ಹೊಂದಿರುವ ಟರ್ಬೊಪ್ರಾಪ್ ಸೇನಾ ಸಾರಿಗೆ ವಿಮಾನವಾಗಿದೆ. 1950ರ ದಶಕದಲ್ಲಿ ಸೋವಿಯತ್ ಒಕ್ಕೂಟ ಇದನ್ನು ವಿನ್ಯಾಸಗೊಳಿಸಿತ್ತು. ಸೈನಿಕರು, ಮಿಲಿಟರಿ ಉಪಕರಣಗಳು ಹಾಗೂ ಇತರ ಸರಕುಗಳನ್ನು ಸಾಗಿಸಲು ಈ ವಿಮಾನವನ್ನು ಬಳಸಲಾಗುತ್ತದೆ.

ಇರಾನ್ ಯುದ್ಧದ ಬಿಕ್ಕಟ್ಟು ಮತ್ತಷ್ಟು ಜಟಿಲ

ಟ್ರಂಪ್-ಟೆಹ್ರಾನ್ ಸಮಯಕ್ಕೆ ತಕ್ಕಂತೆ ತಂತ್ರ-ಪ್ರತಿತಂತ್ರ

ದುಬೈ/ಪ್ಯಾರಿಸ್, ನ.17: ಸುಮಾರು ಒಂಬತ್ತು ತಿಂಗಳ ಯುದ್ಧದ ನಂತರ, ಯುನೈಟೆಡ್ ಸ್ಟೇಟ್ಸ್ ಮತ್ತು ಇರಾನ್ ಇಬ್ಬರೂ ತಮ್ಮ ಕಡೆ ಸಮಯವಿದೆ ಎಂಬಂತೆ ವರ್ತಿಸುತ್ತಿದ್ದಾರೆ, ಈ ಲೆಕ್ಕಾಚಾರವು ಅವರನ್ನು ಮುರಿಯಲು ಅಸಾಧ್ಯವಾದ ಬಿಕ್ಕಟ್ಟಿನಲ್ಲಿ ಬಂಧಿಸಿದೆ. ಇದು ಅಪಾಯಕಾರಿ ಜೂಜಾಟವಾಗಿದ್ದು, ಇಬ್ಬರು ಮಾಜಿ ಯುಎಸ್ ಮಧ್ಯಪ್ರಾಚ್ಯ ಸಮಾಲೋಚಕರು, ಯುರೋಪಿಯನ್ ಅಧಿಕಾರಿಗಳು ಮತ್ತು ಗಲ್ಫ್ ಮೂಲಗಳು ರಾಜತಾಂತ್ರಿಕ ನಿರ್ಗಮನ ಸಾಧ್ಯವಾಗುವ ಮೊದಲು ಹೋರಾಟ ಪುನರಾರಂಭವಾಗಬಹುದು ಎಂದು ಹೇಳುತ್ತಿವೆ.

ಟ್ರಂಪ್ ಇರಾನ್ನ ನೌಕಾ ದಿಗ್ಬಂಧನ ಮತ್ತು ಆರ್ಥಿಕ ನೋವಿನಿಂದ ಟೆಹ್ರಾನ್ ತನ್ನ ಪರಮಾಣು ಕಾರ್ಯಕ್ರಮದ ಮೇಲಿನ ರಿಯಾಯಿತಿಗಳಿಗೆ ನೆಲವನ್ನು ಬಿಟ್ಟುಕೊಡಲು ಮತ್ತು ಒಪ್ಪಿಕೊಳ್ಳಲು ಒತ್ತಾಯಿಸುತ್ತಿದ್ದಾರೆ. ಇರಾನಿನ ನಾಯಕರು ಇದಕ್ಕೆ ವಿರುದ್ಧವಾದ ತೀರ್ಮಾನವನ್ನು ತೆಗೆದುಕೊಂಡಿದ್ದಾರೆ. ಟ್ರಂಪ್ರ ರಿಪಬ್ಲಿಕನ್ ಪಕ್ಷ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹುಗೆ ಚುನಾವಣಾ ಹಿನ್ನಡೆಗಳಿಂದ ಧೈರ್ಯಗೊಂಡಿರುವ ಅವರು, ಅಮೆರಿಕಕ್ಕೆ ಶಾಂತಿ ಒಪ್ಪಂದದ ವೆಚ್ಚವನ್ನು ಹೆಚ್ಚಿಸಿದ್ದಾರೆ, ವಾಷಿಂಗ್ಟನ್ ನಿರ್ಣಯದತ್ತ ಮೊದಲ ಹೆಜ್ಜೆ ಇಡಬೇಕೆಂದು ಒತ್ತಾಯಿಸಿದ್ದಾರೆ. ಟೆಹ್ರಾನ್ ರಾಜತಾಂತ್ರಿಕತೆಗೆ ಮುಕ್ತವಾಗಿದೆ ಎಂದು ಹೇಳುತ್ತದೆ ಮತ್ತು ಮಂಗಳವಾರ ಒಮಾನಿ ಮತ್ತು ಕತಾರಿ ಮಧ್ಯವರ್ತಿಗಳನ್ನು ಭೇಟಿ ಮಾಡುತ್ತಿತ್ತು, ಆದರೆ ವಾಷಿಂಗ್ಟನ್ ಬಲವಂತವನ್ನು ಅನುಸರಿಸುತ್ತಿದೆ ಎಂದು ಆರೋಪಿಸುತ್ತದೆ ಮತ್ತು ಅದು ಯುಎಸ್ ಒತ್ತಡಕ್ಕೆ ಮಣಿಯುವುದಿಲ್ಲ ಎಂದು ಹೇಳುತ್ತದೆ.

ಚೀನಾಕ್ಕೆ ಎಐ ಚಿಪ್ ಅಕ್ರಮ ಸಾಗಣೆ: ಮೆಗಾಸ್ಪೀಡ್ ವಿರುದ್ಧ ಅಮೆರಿಕ ತನಿಖೆ

ವಾಷಿಂಗ್ಟನ್: ಚೀನಾಕ್ಕೆ ಅತ್ಯಾಧುನಿಕ ಎಐ ಚಿಪ್ಗಳನ್ನು ಅಕ್ರಮವಾಗಿ ಸಾಗಿಸಿದ ಆರೋಪ ಎದುರಿಸುತ್ತಿರುವ ಸಿಂಗಪುರದ ಡೇಟಾ ಸೆಂಟರ್ ಕಂಪನಿ ಮೆಗಾಸ್ಪೀಡ್ ವಿರುದ್ಧ ಅಮೆರಿಕದ ನ್ಯಾಯ ಮತ್ತು ವಾಣಿಜ್ಯ ಇಲಾಖೆಗಳು ಕ್ರಿಮಿನಲ್ ತನಿಖೆ ಆರಂಭಿಸಿವೆ ಎಂದು 'ದಿ ನ್ಯೂಯಾರ್ಕ್ ಟೈಮ್ಸ್' ವರದಿ ಮಾಡಿದೆ. ಕಂಪನಿಯ ಮಾಜಿ ಕಾರ್ಯನಿರ್ವಾಹಕ ಆಲಿಸ್ ಹ್ಯುವಾಂಗ್ ಅವರನ್ನು ಚೀನಾದ ಗುಪ್ತಚರ ಸಂಸ್ಥೆ ನೇಮಿಸಿಕೊಂಡಿತ್ತು ಎಂದು ಅಮೆರಿಕದ ಅಧಿಕಾರಿಗಳು ಶಂಕಿಸಿದ್ದಾರೆ. ಆಲಿಸ್ ಹುವಾಂಗ್ ಅವರು ಎನ್ವಿಡಿಯಾ ಮಾಜಿ ಮುಖ್ಯಸ್ಥ ಜೆನ್ಸೆನ್ ಹುವಾಂಗ್ ಅವರೊಂದಿಗೆ ಸಂಬಂಧ ಹೊಂದಿದ್ದರು ಎಂಬ ಅಂಶವೂ ಸುದ್ದಿಯಲ್ಲಿದೆ. ಆದರೆ, ಎಲ್ಲ ಕಾನೂನುಗಳನ್ನು ಪಾಲಿಸುತ್ತ ಮೆಗಾಸ್ಪೀಡ್ ಹೇಳಿದೆ.

ಕಂಪನಿಯ ವಿರುದ್ಧ ಕ್ರಮ ಕೈಗೊಳ್ಳಲು ವಾಣಿಜ್ಯ ಇಲಾಖೆ ವಿಳಂಬವಾಗುತ್ತಿದೆ ಎಂಬ ಟೀಕೆಗಳ ಬೆನ್ನಲ್ಲೇ ತನಿಖೆಯನ್ನು ಪ್ರಕಟಿಸಲಾಗಿದೆ. ಮೆಗಾಸ್ಪೀಡ್ ಅನ್ನು ವ್ಯಾಪಾರ ನಿರ್ಬಂಧಿತ ಸಂಸ್ಥೆಗಳ ಪಟ್ಟಿಗೆ ಸೇರಿಸಲು ಹಣಕಾಸು ಇಲಾಖೆ ಹಲವು ತಿಂಗಳಿಂದ ಪ್ರಯತ್ನಿಸುತ್ತಿದೆ ಎಂದು ಸಚಿವ ಸ್ಕಾಟ್ ಬೆಸೆಂಟ್ ಹೇಳಿದ್ದಾರೆ. ಈ ನಿರ್ಧಾರ ವಾಣಿಜ್ಯ ಇಲಾಖೆಯ ಅಧಿಕಾರದೆ ಎಂದಿದ್ದರು.

ಹಾರ್ಮುಜ್ ಜಲಸಂಧಿಯಲ್ಲಿ ಎಲ್‌ಪಿಜಿ ಟ್ಯಾಂಕರ್ ಮೇಲೆ ಕ್ಷಿಪಣಿ ದಾಳಿ: 24 ಭಾರತೀಯರು ಸುರಕ್ಷಿತ



ನವದೆಹಲಿ: ಹೋರ್ಮುಜ್ ಜಲಸಂಧಿಯಲ್ಲಿ ಸಂಚರಿಸುತ್ತಿದ್ದ ಪನಾಮ ಧ್ವಜ ಹೊಂದಿರುವ ಎಲ್‌ಪಿಜಿ ಟ್ಯಾಂಕರ್ ಮೇಲೆ ಕ್ಷಿಪಣಿ ದಾಳಿ ನಡೆದಿದ್ದು, ಹಡಗಿನಲ್ಲಿದ್ದ 24 ಭಾರತೀಯರು ಸೇರಿದಂತೆ ಒಟ್ಟು 25 ಸಿಬ್ಬಂದಿ ಸುರಕ್ಷಿತವಾಗಿದ್ದಾರೆ. ಯಾರಿಗೂ ಗಾಯಗಳಾಗಿಲ್ಲ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗ ಸಚಿವ ಸರ್ಬಾನಂದ ಸೋನೋವಾಲ್ ತಿಳಿಸಿದ್ದಾರೆ.

ನವೆಂಬರ್ 16ರಂದು ಹೋರ್ಮುಜ್ ಜಲಸಂಧಿಯಲ್ಲಿ ಸಂಚರಿಸುತ್ತಿದ್ದ 'ತಾರಾ ಗ್ಯಾಸ್' ಹೆಸರಿನ ಎಲ್‌ಪಿಜಿ ಟ್ಯಾಂಕರ್ ಅನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ. ಈ ಹಡಗಿನಲ್ಲಿ 24 ಭಾರತೀಯ ಪ್ರಜೆಗಳು ಸೇರಿದಂತೆ ಒಟ್ಟು 25 ಸಿಬ್ಬಂದಿ ಇದ್ದರು.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವ ಸೋನೋವಾಲ್, ಹಡಗಿನಲ್ಲಿದ್ದ ಎಲ್ಲ 24 ಭಾರತೀಯರು ಸೇರಿದಂತೆ ಸಂಪೂರ್ಣ ಸಿಬ್ಬಂದಿ ಸುರಕ್ಷಿತವಾಗಿದ್ದಾರೆ. ಯಾರಿಗೂ ಯಾವುದೇ ಗಾಯಗಳಾಗಿಲ್ಲ ಎಂದು ತಿಳಿಸಿದ್ದಾರೆ.

ಅಲ್ಲದೆ, ಪರಿಸ್ಥಿತಿಯನ್ನು ಕೇಂದ್ರ ಸರ್ಕಾರ ನಿರಂತರವಾಗಿ ಗಮನಿಸುತ್ತಿದೆ. ಭಾರತೀಯ ನಾವಿಕರ ಸುರಕ್ಷತೆ ಮತ್ತು ಯೋಗಕ್ಷೇಮ ಖಚಿತಪಡಿಸಿಕೊಳ್ಳಲು ಹಡಗಿನ ನಿರ್ವಹಣಾ ಕಂಪನಿಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ ಎಂದು ಹೇಳಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಹೋರ್ಮುಜ್ ಜಲಸಂಧಿ ಹಾಗೂ ಅರಬ್ಬಿ ಸಮುದ್ರದ ವ್ಯಾಪ್ತಿಯಲ್ಲಿ ಭಾರತೀಯ ನಾವಿಕರಿದ್ದ ವಾಣಿಜ್ಯ ಹಡಗುಗಳ ಮೇಲೆ ದಾಳಿ ನಡೆದಿರುವ ವರದಿಗಳು ಪ್ರಕಟವಾಗಿವೆ. ನವೆಂಬರ್ 10ರಂದು ಲೈಬೀರಿಯಾ ಧ್ವಜ ಹೊಂದಿದ್ದ ಹಡಗಿನ ಮೇಲೆ ದಾಳಿ ನಡೆದಿದ್ದು, ಅದರಲ್ಲಿದ್ದ 19 ಭಾರತೀಯ ನಾವಿಕರು ಸುರಕ್ಷಿತವಾಗಿದ್ದರು. ನವೆಂಬರ್ 11ರಂದು ಸೌದಿ ಅರೇಬಿಯಾ ಧ್ವಜ ಹೊಂದಿದ್ದ 'ಎನ್ಸಿಸಿ ಫಜ್ರ್' ಹಡಗಿನ ಮೇಲೂ ದಾಳಿ ನಡೆದಿತ್ತು. ಆ ಹಡಗಿನಲ್ಲಿದ್ದ ಮೂವರು ಭಾರತೀಯರು ಸೇರಿದಂತೆ ಎಲ್ಲ ಸಿಬ್ಬಂದಿ ಸುರಕ್ಷಿತರಾಗಿದ್ದರು.

ಇರಾನ್ ಸಂಘರ್ಷವನ್ನು ಶಾಶ್ವತ ಯುದ್ಧವಾಗಲು ಟ್ರಂಪ್ ಬಿಡುವುದಿಲ್ಲ: ವ್ಯಾನ್ಸ್ ಸ್ಪಷ್ಟನೆ



ವಾಷಿಂಗ್ಟನ್, ನ.17: ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್ ಜೊತೆ ನಡೆಯುತ್ತಿರುವ ಸಂಘರ್ಷವನ್ನು ದೀರ್ಘಕಾಲದ ಮಿಲಿಟರಿ ನಿಶ್ಚಿತಾರ್ಥವಾಗಿ ಪರಿವರ್ತಿಸಲು ಬಿಡುವುದಿಲ್ಲ ಎಂದು ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಹೇಳಿದ್ದಾರೆ, ಮತ್ತೊಂದು "ಶಾಶ್ವತ ಯುದ್ಧ"ದಲ್ಲಿ ಭಾಗಿಯಾಗುವುದರ ವಿರುದ್ಧ ವಾಷಿಂಗ್ಟನ್ನ ನಿಲುವನ್ನು ಪುನರುಚ್ಚರಿಸಿದ್ದಾರೆ. ಸೋಮವಾರ ಫಾಕ್ಸ್ ನ್ಯೂಸ್ ಜೊತೆ ಮಾತನಾಡಿದ ವ್ಯಾನ್ಸ್, ಅಮೆರಿಕದ ಆಡಳಿತವು ದೀರ್ಘಾವಧಿಯ ಯುದ್ಧಗಳನ್ನು ತಪ್ಪಿಸುವುದಾಗಿ ಅಮೆರಿಕನ್ನರಿಗೆ ಭರವಸೆ ನೀಡಿದೆ ಎಂದು ಹೇಳಿದರು. "ನಾವು ಇನ್ನು ಮುಂದೆ ಶಾಶ್ವತ ಯುದ್ಧಗಳನ್ನು ಮಾಡುವುದಿಲ್ಲ ಎಂದು ಅಮೆರಿಕಾದ ಜನರಿಗೆ ಹೇಳಿದ್ದೇವೆ" ಎಂದು ವ್ಯಾನ್ಸ್ ಹೇಳಿದರು, ಅಮೆರಿಕವು ಮುಕ್ತ ಸಂಘರ್ಷದಲ್ಲಿ ತೊಡಗಿರುವುದಿಲ್ಲ ಎಂದು ಹೇಳಿದರು.

ಐಪಿಎಲ್‌ನಿಂದ ಧೋನಿ ನಿವೃತ್ತಿ

ಕ್ಯಾಪ್ಟನ್ ಕೂಲ್ ಬಿಡಲೊಪ್ಪದ ಸಿಎಸ್‌ಕೆ, ಮೆಂಟರ್ ಆಗಿ ಆಯ್ಕೆ



ಚೆನ್ನೈ, ನ.17: ಭಾರತೀಯ ಕ್ರಿಕೆಟ್ ಲೋಕದ ಅತ್ಯಂತ ಯಶಸ್ವಿ ನಾಯಕ, ಚೆನ್ನೈ ಸೂಪರ್ ಕಿಂಗ್ಸ್ ತಂಡದ ಆಧಾರಸ್ತಂಭ 'ತಲಾ' ಮಹೇಂದ್ರ ಸಿಂಗ್ ಧೋನಿ ಅವರು ಇಂಡಿಯನ್ ಪ್ರೀಮಿಯರ್ ಲೀಗ್ ಆಟಗಾರನಾಗಿ ತಮ್ಮ ಸುದೀರ್ಘ ಪಯಣಕ್ಕೆ ಅಧಿಕೃತವಾಗಿ ತೆರೆ ಎಳ